RNI.KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 77 ಪುಟ: 06 ಶನಿವಾರ 15-02-2025

Mail:mussanje2010@gmail.com www.mussanjenews.com

ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



'ಬ್ರೇಕಪ್ ಆದ ಬೇಸರಕ್ಕೆ ಬಿಕಿನಿ, ಬ್ರೇಕ್ ಬೇಕು ಅಂತ ಬಾಲಿಗೆ ಹೋದೆ'

'ತಾಂಡೇಲ್ ಗೆಲ್ಲುತ್ತೆ ಎಂದು ಮೊದಲೇ ಗೊತ್ತಿತ್ತು'

ಬಿಳಿ ಹುಡುಗಿ ಪತ್ತೆ ಇಲ್ಲ ಪುಟ 6

# ಸಿದ್ದರಾಮಯ್ಯ ಅವರೇ ಬೇಕು

## ಅಧಿಕಾರ ಹಂಚಿಕೆಯ ಬಗ್ಗೆ ಎಲ್ಲೂ ಒಪ್ಪಂದ ಆಗಿಲ್ಲ; ಸಚಿವರ-ಶಾಸಕರ ಅಭಿಮತ

**ಬೆಂಗಳೂರು:** ಶೋಷಿತ ಸಮಾವೇಶದ ಸಿದ್ದತೆ ಬೆನ್ನಲ್ಲೇ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಯಾಗಿ ಐದು ವರ್ಷವೂ ಮುಂದುವರಿಯಬೇಕು ಎಂಬ ಕೂಗು ಕೇಳಿಬರುತ್ತಿವೆ.

ಇತ್ತೀಚಿನ ದಿನಗಳಲ್ಲಿ ಅಧಿಕಾರ ಹಂಚಿಕೆಯ ವಿಷಯ ದೊಡ್ಡಮಟ್ಟದಲ್ಲಿ ಸದ್ದು ಮಾಡುತ್ತಿದ್ದು, ಅನೇಕ ಮಂದಿ ಸಚಿವರು-ಶಾಸಕರು ಸಿದ್ದರಾಮಯ್ಯ ಅವರೇ ಐದು ವರ್ಷಗಳ ಕಾಲ ಮುಂದುವರಿಯಬೇಕು ಎಂಬ ಹಠಕ್ಕೆ ಬಿದ್ದಿದ್ದಾರೆ.

ಈ ಕುರಿತು ಇಂದು ಹೇಳಿಕೆ ನೀಡಿರುವ ಸಚಿವರುಗಳಾದ ಸತೀಶ್ ಜಾರಕಿಹೊಳಿ ಹಾಗೂ ಕೆ.ಎನ್.ರಾಜಣ್ಣ ಅವರುಗಳು ಸಿದ್ದರಾಮಯ್ಯ ಅವರೇ ಮುಂದುವರಿಯಬೇಕು. ಅವರಿದ್ದರೆ ಮಾತ್ರ ಪಕ್ಷ ಉಳಿಯಲು ಮತ್ತು ರಾಜ್ಯದ ಅಭಿವೃದ್ಧಿಯಾಗಲು ಸಾಧ್ಯ ಎಂದಿದ್ದಾರೆ.

ಕೆ.ಎನ್.ರಾಜಣ್ಣ ಮಾತನಾಡಿ, ಕಾಂಗ್ರೆಸ್ ಪಕ್ಷದಲ್ಲಿ ಅಧಿಕಾರ ಹಂಚಿಕೆ ಬಗ್ಗೆ ಎಲ್ಲೂ ಮಾತುಕತೆ ಆಗಿಲ್ಲ. ಒಪ್ಪಂದ ಕೂಡ ಆಗಿಲ್ಲ. ಹಾಗಾಗಿ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಯಾಗಿ ಮುಂದುವರೆಯುವುದು ಸೂಕ್ತ ಎಂದು ಹೇಳಿದರು.

ತುಮಕೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೈಕಮಾಂಡ್ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಬಗ್ಗೆ ಪ್ರಕಟಣೆ ಹೊರಡಿಸಿದೆಯೋ ಹೊರತು ಅಧಿಕಾರ ಹಂಚಿಕೆಯಬಗ್ಗೆ ಎಲ್ಲೂ ಹೇಳಿಕೆ ನೀಡಿಲ್ಲ, ಅಗ್ರಿಮೆಂಟ್ ಕೂಡ ಆಗಿಲ್ಲ ಎಂದು ಹೇಳುವ ಮೂಲಕ ಸಿದ್ದರಾಮಯ್ಯ ಅವರೇ ಐದು ವರ್ಷವೂ ಮುಂದುವರಿಯಬೇಕು ಎಂಬ ಅಭಿಪ್ರಾಯ ವ್ಯಕ್ತಪಡಿಸಿದರು.

ಲೋಕಸಭಾ ಚುನಾವಣೆ ವೇಳೆ ಎಐಸಿಸಿ ಒಂದು ಮಾಧ್ಯಮ ಪ್ರಕಟಣೆ ಹೊರಡಿಸಿತ್ತು, ಚುನಾವಣೆ ನಂತರ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಆಗಲಿದೆ ಎಂದು ಹೇಳಿತ್ತು. ಅದನ್ನು ನಾನು ಈಗ ಕೇಳುತ್ತಿದ್ದೇನೆ ಅಷ್ಟೇ ಎಂದರು.

ಈ ವಿಷಯವನ್ನು ನಾನು ಹೈಕಮಾಂಡ್ ಗಮನಕ್ಕೂ ತಂದಿದ್ದೇನೆ. ಒನ್ ಮ್ಯಾನ್ ಒನ್ ಪೋಸ್ಟ್(ಒಬ್ಬ ನಾಯಕನಿಗೆ ಒಂದೇ ಅಧಿಕಾರ) ಎಂಬುದನ್ನು ನಾನು ಒಪ್ಪುತ್ತೇನೆ. ಹಾಗಾಗಿ ನಾನು ಅಧ್ಯಕ್ಷರ ಬದಲಾವಣೆ ಮಾಡಿ



ಎಂದು ಹೈಕಮಾಂಡ್ ಮೇಲೆ ಒತ್ತಡಹೇರಿದ್ದೇನೆ ಎಂದು ಹೇಳಿದರು.

ಮುಖ್ಯಮಂತ್ರಿ ಬದಲಾವಣೆ ವಿಷಯದಲ್ಲಿ ನಾನು ಚಕಾರ ಎತ್ತಿಲ್ಲ. ಪಕ್ಷದಲ್ಲಿ ಎರಡೂವರೆ ವರ್ಷ ಎಂದು ಎಲ್ಲೂ ಒಪ್ಪಂದ ಆಗಿಲ್ಲ. ಸಿದ್ದರಾಮಯ್ಯ ಅವರೇ ಐದು ವರ್ಷವೂ ಕೂಡ ಮುಂಧುವರಿಯಬೇಕು ಎಂಬುದು ಸಚಿವರಾದ ಎಂಬಿಪಾಟೀಲ್, ಮಹದೇವಪ್ಪ, ಪರಮೇಶ್ವರ್ ಅವರ ವಾದವಾಗಿದೆ. ನಾನು ಕೂಡ ಅದನ್ನೇ ಅನುಮೋದಿಸುತ್ತೇನೆ ಎಂದು ಹೇಳಿದರು.

ಸಚಿವ ಜಾರಕಿಹೊಳಿಯೂ ಕೂಡ ಇಂದು ಈ ವಿಷಯವನ್ನು ಪ್ರಸ್ತಾಪಿಸಿದ್ದು, ಮಾಧ್ಯಮದವರ ಮುಂದೆ ಮಾತಾನಾಡುತ್ತಾ ಸಿದ್ದರಾಮಯ್ಯ ಅವರೇ ನಮಗೆ ಬೇಕು. ಅವರಿಂದ ಮಾತ್ರ ಪಕ್ಷ ಮತ್ತು ರಾಜ್ಯವನ್ನು ಸಮರ್ಥವಾಗಿ ನಡೆಸಲು ಸಾಧ್ಯ ಎಂದು ತಿಳಿಸಿದರು.

ಮುಂದಿನ ಚುನಾವಣೆಯಲ್ಲಿ ಪಕ್ಷ ಗೆಲ್ಲಬೇಕಾದರೆ ಅಗತ್ಯತೆ ಹಾಗೂ ಅನಿವಾರ್ಯತೆ ಎರಡೂ ಕೂಡ ಪಕ್ಷಕ್ಕೆ ಇದೆ. ಅಲ್ಲದೇ ಅವರು ಒಳ್ಳೆಯ ಆಡಳಿತಗಾರ ಹಾಗಾಗಿ ನಮಗೆ ಅವರಿದ್ದರೇ ಸೂಕ್ತ ಎಂದರು.

ಅಧ್ಯಕ್ಷರ ಬದಲಾವಣೆ ಸಂಬಂಧ ಕೆಪಿಸಿಸಿಯಲ್ಲಿ ಪವರ್ ಶೇರಿಂಗ್ ಒಪ್ಪಂದ ಆಗಿದೆಯೇ ಇಲ್ಲವೇ ಎಂಬುದು ನಮಗೆ ಗೊತ್ತಿಲ್ಲ. ಅದನ್ನೆಲ್ಲ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಹಾಗೂ ಉಸ್ತುವಾರಿ ರಣದೀಪ್ ಸುರ್ಜೇವಾಲ ಅವರೇ ನೋಡಿಕೊಳ್ಳುತ್ತಾರೆ ಅದು ನಮ್ಮ ವ್ಯಾಪ್ತಿಗೆ ಬರುವುದಿಲ್ಲ. ನಮಗೆ ಆ ವಿಷಯ ಬೇಡ. ನಮಗೆ ಸಿದ್ದರಾಮಯ್ಯ ಅವರಷ್ಟೇ ಮುಖ್ಯ ಎಂದರು.

ಇನ್ನೂ ಕಂಪ್ಲಿ ಶಾಸಕ ಗಣೇಶ್ ಕೂಡ ಇಂದು ಮಾಧ್ಯಮದವರೊಂದಿಗೆ ಮಾತನಾಡುತ್ತಾ, 138 ಶಾಸಕರು ಅವರ ಬೆಂಬಲಿಕ್ಕಿದ್ದೇವೆ. ಸಿದ್ದರಾಮಯ್ಯ ಅವರು ರಾಜ್ಯಕ್ಕೆ ಅಲ್ಲ ದೇಶಕ್ಕೂ ಬೇಕು ಎಂದು ಹೇಳುವ ಮೂಲಕ ಸಿದ್ದರಾಮಯ್ಯ ಅವರನ್ನು ಬೆಂಬಲಿಸಿದ್ದಾರೆ.

ಈ ವಿಷಯಕ್ಕೆ ಸಂಬಂಧಿಸಿದಂತೆ ಉಪಮುಖ್ಯಮಂತ್ರಿ ಡಿ.ಕೆಶಿವಕುಮಾರ್ ಅವರನ್ನು ಮಾಧ್ಯಮದವರು ಪ್ರಶ್ನಿಸಿದಾಗ ಅವರು ಮೌನಕ್ಕೆ ಜಾರಿದರು. ಈ ಸಂಬಂಧ ಯಾವುದೇ ಪ್ರತಿಕ್ರಿಯೆ ನೀಡದೇ ನಡೆದರು.



ಕೇಂದ್ರ ಸಚಿವ ಹೆಚ್. ಡಿ. ಕುಮಾರಸ್ವಾಮಿ ಅವರು ಇಂದು ಸಕಲೇಶಪುರದ ಎಪಿಎಂಸಿ ಮೈದಾನದಲ್ಲಿ ನಾಡಪ್ರಭು ಕೆಂಪೇಗೌಡರ ಕಂಚಿನ ಪ್ರತಿಮೆಯನ್ನು ಅನಾವರಣ ಮಾಡಿದರು. ಈ ಸಂದರ್ಭದಲ್ಲಿ ಆದಿಚುಂಚನಗಿರಿ ಪೀಠಾಧ್ಯಕ್ಷ ಶ್ರೀನಿರ್ಮಲಾನಂದ ಸ್ವಾಮೀಜಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಎಐಸಿಸಿ ಪುನರಾಚನೆ

**ನವದೆಹಲಿ:** ಕಾಂಗ್ರೆಸ್ ತನ್ನ ಪದಾಧಿಕಾರಿಗಳಲ್ಲಿ ಪ್ರಮುಖ ಬದಲಾವಣೆ ಮಾಡಿದೆ, ಹಲವು ರಾಜ್ಯಗಳ ಉಸ್ತುವಾರಿ ಬದಲಿಸಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆದೇಶ ಹೊರಡಿಸಿದ್ದಾರೆ. ರಾಜ್ಯಸಭಾ ಸದಸ್ಯ ಸಯ್ಯದ್ ನಾಸಿರ್ ಹುಸೇನ್ ಅವರನ್ನು ಜಮ್ಮು ಮತ್ತು ಕಾಶ್ಮೀರದ ಪ್ರಧಾನ ಕಾರ್ಯದರ್ಶಿಯಾಗಿಎಐಸಿಸಿ ಶನಿವಾರ ನೇಮಿಸಿದೆ. ಹರಿಯಾಣ ರಾಜ್ಯದ ಪಕ್ಷದ ಉಸ್ತುವಾರಿಯಾಗಿ ವಿಧಾನ ಪರಿಷತ್ ಸದಸ್ಯ ಬಿ.ಕೆ. ಹರಿಪ್ರಸಾದ್ ಅವರನ್ನು ನೇಮಿಸಲಾಗಿದೆ.



ಪಕ್ಷದ ಕಾರ್ಯಕಾರಿ ಸಮಿತಿ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಪಕ್ಷದ ಸಂಘಟನೆಯ ಪುನರ್ ರಚನೆ ಪ್ರಕ್ರಿಯೆಗೆ ಪಕ್ಷ ಚಾಲನೆ ನೀಡಿದೆ. ಛತ್ತೀಸಗಢದ ಮಾಜಿ ಮುಖ್ಯಮಂತ್ರಿ ಭೂಪೇಶ್ ಬಘೇಲ್ ಅವರಿಗೂ ಪ್ರಧಾನ ಕಾರ್ಯದರ್ಶಿ ಹುದ್ದೆ ನೀಡಲಾಗಿದೆ. ಹರಿಪ್ರಸಾದ್ ಅವರು ದಶಕಗಳ ಕಾಲ ರಾಷ್ಟ್ರ ರಾಜಕಾರಣದಲ್ಲಿದ್ದು ಹಲವು ರಾಜ್ಯಗಳ ಉಸ್ತುವಾರಿಗಳಾಗಿ ಕಾರ್ಯನಿರ್ವಹಿಸಿದ್ದರು. ಮೂರು ವರ್ಷಗಳ ಹಿಂದೆ ರಾಜ್ಯ ರಾಜಕಾರಣಕ್ಕೆ ಪುಟ 2

## ರಾಜ್ಯದಲ್ಲಿ ಮತಾಂಧ ಮುಸ್ಲಿಮರ ಉಪಟಳ ಹೆಚ್ಚಾಗಿದೆ : ಜೋಶಿ

**ಹುಬ್ಬಳ್ಳಿ:** ಮೈಸೂರಿನ ಉದಯಗಿರಿ ಪೊಲೀಸ್ ಠಾಣೆ ಹಿಂಸಾಚಾರ ಘಟನೆಯನ್ನು ತೀವ್ರವಾಗಿ ಖಂಡಿಸಿರುವ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಕಾಂಗ್ರೆಸ್‌ನ ತುಷ್ಟೀಕರಣ ರಾಜಕಾರಣದಿಂದಾಗಿ ರಾಜ್ಯದಲ್ಲಿ ಮತಾಂಧ ಮುಸ್ಲಿಮರ ಉಪಟಳ ಹೆಚ್ಚಾಗಿದೆ ಎಂದು ಗಂಭೀರ ಆರೋಪ ಮಾಡಿದ್ದಾರೆ.



ಹುಬ್ಬಳ್ಳಿಯಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಪ್ರಹ್ಲಾದ್ ಜೋಶಿ, "ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬಂದ ಮೇಲೆ ಮತಾಂಧ ಶಕ್ತಿಗಳು ದೊಡ್ಡ ಮಟ್ಟದಲ್ಲಿ ತಲೆ ಎತ್ತಿವೆ.." ಎಂದು ಹರಿಹಾಯ್ದರು.

"ಮೈಸೂರಿನ ಉದಯಗಿರಿ ಪೊಲೀಸ್ ಠಾಣೆ ಮೇಲೆ ನಡೆದ ದಾಳಿಯು ಪೂರ್ವನಿಯೋಜಿತವಾಗಿದೆ. ಇದು ಅತ್ಯಂತ ಗಂಭೀರ ಪ್ರಕರಣವಾಗಿದ್ದು, ರಾಜ್ಯ ಸರ್ಕಾರ ನಿಷ್ಪಕ್ಷಪಾತ ತನಿಖೆ ನಡೆಸಿ ತಪ್ಪಿತಸ್ಥರಿಗೆ ಶಿಕ್ಷೆ ನೀಡಬೇಕು.." ಎಂದು ಕೇಂದ್ರ ಸಚಿವರು ಇದೇ ವೇಳೆ ಒತ್ತಾಯಿಸಿದರು.

"ಕಾಂಗ್ರೆಸ್ ಅಧಿಕಾರಕ್ಕೆ ಬಂದ ಮೇಲೆ ಪಿಎಫ್ಐ, ಎಸ್ ಡಿಪಿಐ ಮುಂತಾದ ಮತಾಂಧ ಸಂಘಟನೆಗಳ ವಿರುದ್ಧದ ಪ್ರಕರಣಗಣನ್ನು ವಾಪಸ್ ಪಡೆದಿದೆ. ಹಳೇ ಹುಬ್ಬಳ್ಳಿ ಪ್ರಕರಣದಲ್ಲೂ ಮತಾಂಧರಿಗೆ ಅನುಕೂಲವಾಗುವ ರೀತಿಯಲ್ಲಿ ನಿರ್ಣಯ ಕೈಗೊಳ್ಳಲಾಗಿದೆ. ಇದರಿಂದ ರಾಜ್ಯದಲ್ಲಿ ಮತಾಂಧ ಶಕ್ತಿಗಳು ಹೂಂಕರಿಸುತ್ತಿವೆ.." ಎಂದು ಪ್ರಹ್ಲಾದ್ ಜೋಶಿ ತೀವ್ರ ವಾಗ್ದಾಳಿ ನಡೆಸಿದರು.

"ಇಸ್ಲಾಂ ಮತಾಂಧ ಶಕ್ತಿಗಳು ಕಾಂಗ್ರೆಸ್ ಬೆಂಬಲದಿಂದ ಈ ರೀತಿಯ ದುರ್ವರ್ತನೆ ತೋರುತ್ತಿವೆ. ಕಾಂಗ್ರೆಸ್‌ನ ಎಡಬಿಡಂಗಿತನದಿಂದಲೇ ರಾಜ್ಯದಲ್ಲಿ ಇಂತಹ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಈಗಾಗಲೇ ದೇಶದ ಜನತೆ ಕಾಂಗ್ರೆಸ್‌ನ್ನು ತಿರಸ್ಕರಿಸಿದ್ದು, ರಾಜ್ಯದಲ್ಲೂ ಶೀಘ್ರದಲ್ಲೇ ಕಾಂಗ್ರೆಸ್ ತನ್ನ ಅಸ್ತಿತ್ವವನ್ನು ಕಳೆದುಕೊಳ್ಳಲಿದೆ.." ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಕಿಡಿಕಾರಿದರು.

"ಕಾಂಗ್ರೆಸ್‌ನವರಿಗೆ ಮುಸ್ಲಿಮರು ಮಾತ್ರ ಬೇಕಾ.." ಎಂದು ಪ್ರಶ್ನಿಸಿದ ಪ್ರಹ್ಲಾದ್ ಜೋಶಿ, ಪುಟ 2

## ನದಿ ಜೋಡಣೆಗೆ ಎಲ್ಲರೂ ಧ್ವನಿ ಎತ್ತಲಿ



**ಬೆಂಗಳೂರು:** ರಾಜ್ಯದಲ್ಲಿ ಗೋದಾವರಿ, ಕೃಷ್ಣ, ಕಾವೇರಿ ನದಿ ಜೋಡಣೆ ಆಗಲೇಬೇಕಿದೆ. ಈ ಬಗ್ಗೆ ಎಲ್ಲರೂ ಧ್ವನಿ ಎತ್ತಿ ಹೋರಾಟಕ್ಕೆ ಮುಂದಾಗಬೇಕು ಎಂದು ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಅವರು ಹೇಳಿದರು.

ಬೆಂಗಳೂರಿನ ಜೆಡಿಎಸ್ ಕಚೇರಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯಸಭೆಯಲ್ಲಿ ಗೋದಾವರಿ, ಕೃಷ್ಣ, ಕಾವೇರಿ ನದಿ ಜೋಡಣೆ ಬಗ್ಗೆ ತಮಿಳುನಾಡಿನ ರಾಜ್ಯಸಭಾ ಸದಸ್ಯರು ಸೇರಿದಂತೆ ಎಲ್ಲರೂ ಧ್ವನಿ ಎತ್ತಿದ್ದೇವೆ. ಗೋದಾವರಿ, ಕೃಷ್ಣ, ಕಾವೇರಿ ನದಿ ಜೋಡಣೆ ಆಗಲೇಬೇಕಿದೆ ಎಂದರು

ರಾಜ್ಯದ ಹಲವು ಜಿಲ್ಲೆಗಳು ನೀರಿನ ಬರ ಎದುರಿಸುತ್ತಿವೆ. ಇದನ್ನು ತಪ್ಪಿಸಲು ನದಿ ಜೋಡಣೆಯೇ ಮದ್ದು, ನಾನು ನೀರಾವರಿ ಸಚಿವನಾಗಿದ್ದಾಗಿನಿಂದಲೂ ನದಿ ಜೋಡಣೆ ಬಗ್ಗೆ ಹೋರಾಟ ನಡೆಸಿದ್ದೇನೆ. ಪ್ರಧಾನಿ ಮೋದಿ ಅವರಿಗೂ ಪತ್ರ ಬರೆದಿದ್ದೇನೆ ಎಂದರು. ರಾಜ್ಯದಲ್ಲಿ ನದಿ ಜೋಡಣೆ ಸೇರಿದಂತೆ ಎಲ್ಲ ಸಮಸ್ಯೆಗಳನ್ನು ನೀರಾವರಿ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಪಕ್ಷಬೇಧ ಮರೆತು ಎಲ್ಲ ಸಂಸದರು ಹೋರಾಟ ನಡೆಸಬೇಕಿದೆ. ಪುಟ 2

## ಆನೆಗಳ ಚಲನವಲನ ತಿಳಿಯಲು ಥರ್ಮಲ್ ಕ್ಯಾಮರಾ ಬಳಸಲು ಸೂಚನೆ

**ಬೆಂಗಳೂರು:** ಕಾಡಿನಂಚಿನ ಗ್ರಾಮಗಳಿಗೆ ನುಗ್ಗಿ ಜೀವಹಾನಿ, ಬೆಳೆ ಹಾನಿ ಮಾಡುವ ಆನೆಗಳ ಸಂಚಾರದ ಬಗ್ಗೆ ನಿಗಾ ಇಟ್ಟು, ಸಕಾಲಿಕ (ರಿಯಲ್ ಟೈಮ್) ಮಾಹಿತಿಯನ್ನು ಸ್ಥಳಿಯ ಶಾಸಕರು, ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಪಂಚಾಯ್ತಿಗಳ ಅಧ್ಯಕ್ಷರು, ಕಾರ್ಯದರ್ಶಿ, ಪಿಡಿಒ ಮತ್ತು ಗ್ರಾಮದ ಮುಖ್ಯಸ್ಥರಿಗೆ ನೀಡುವ ಮೂಲಕ ಜೀವಹಾನಿ ತಡೆಯುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಫೆ.13ರಂದು ರಾಜ್ಯದಲ್ಲಿ ಒಂದೇ ದಿನ ಆನೆ ದಾಳಿಯಿಂದ ಮೂರು ಅಮೂಲ್ಯ ಜೀವಗಳ ಹಾನಿ ಆಗಿರುವ ಹಿನ್ನೆಲೆಯಲ್ಲಿ ಇಂದು ಎಲ್ಲ ಜಿಲ್ಲೆಗಳ ಉಪ ಅರಣ್ಯ ಸಂರಕ್ಷಣಾ ಧಿಕಾರಿಗಳೊಂದಿಗೆ ತುರ್ತು ವರ್ಚುವಲ್ ಸಭೆ ನಡೆಸಿದ ಅವರು, ಆನೆ ಹಾವಳಿ ನಿಯಂತ್ರಿಸಲು ಎಲ್ಲ ಸಾಧ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದರು.

ಪ್ರಸ್ತುತ ದೇಶೀಯವಾಗಿ ಅಭಿವೃದ್ಧಿಪಡಿಸಿದ ರೇಡಿಯೋ ಕಾಲರ್ ಕೂಡ ಲಭ್ಯವಿದ್ದು, ಗುಂಪಿನಲ್ಲಿರುವ ಆನೆಗಳಿಗೆ ರೇಡಿಯೋ ಕಾಲರ್ ಅಳವಡಿಸಿ, ಥರ್ಮಲ್ ಕ್ಯಾಮರಾ ಬಳಸಿ ಆನೆಗಳ ಚಲನವಲನದ ಬಗ್ಗೆ ನಿಗಾ ಇಟ್ಟು, ಮಾಹಿತಿಯನ್ನು ಬಲ್ಕ್ ಎಸ್.ಎಂ.ಎಸ್.



ಮೂಲಕ ಸಕಾಲಿಕವಾಗಿ ನೀಡುವ ವ್ಯವಸ್ಥೆ ಮಾಡುವಂತೆ ತಿಳಿಸಿದರು.

2022-23ರ ಸಾಲಿನಲ್ಲಿ ರಾಜ್ಯದಲ್ಲಿ ಆನೆಯಿಂದ 32 ಜನರು ಸಾವಿಗೀಡಾಗಿದ್ದರೆ, 2023-24ರಲ್ಲಿ 48 ಸಾವು ಸಂಭವಿಸಿದೆ,

ಈ ವರ್ಷ ಇಲ್ಲಿಯವರೆಗೆ 30 ಜೀವಹಾನಿ ಆಗಿದೆ. ಫೆಬ್ರವರಿ, ಮಾರ್ಚ್, ಏಪ್ರಿಲ್ ಹಾಗೂ ಜುಲೈನಲ್ಲಿ ಹೆಚ್ಚಿನ ಸಾವು ಸಂಭವಿಸುತ್ತಿದೆ ಇದಕ್ಕೆ ಕಾರಣವೇನು ಎಂಬ ಬಗ್ಗೆ ಅಧ್ಯಯನ ನಡೆಸಿ ಎಂದು ತಿಳಿಸಿದರು.

**ಆವಾಸಸ್ಥಾನ ಅಭಿವೃದ್ಧಿಗೆ ಸೂಚನೆ:**

ಆನೆಗಳು ನೀರು ಮತ್ತು ಆಹಾರ ಅರಸಿ ಊರಿಗೆ ಬರುತ್ತಿದ್ದು, ಕಾಡಿನಲ್ಲೇ ಆನೆಗಳಿಗೆ ಪುಟ 2

## 9 ವಿವಿಗೆ ಬೀಗ ಬಿಜೆಪಿ ವಿರೋಧ

**ಬೆಂಗಳೂರು:** ರಾಜ್ಯದ ಮಂಡ್ಯ ವಿಶ್ವವಿದ್ಯಾನಿಲಯ ಸೇರಿದಂತೆ 9 ವಿಶ್ವವಿದ್ಯಾನಿಲಯಗಳನ್ನು ಮುಚ್ಚಲು ಹೊರಟಿರುವ ರಾಜ್ಯ ಸರ್ಕಾರದ ನಿರ್ಧಾರಕ್ಕೆ ಬಿಜೆಪಿ ವಿರೋಧ ವ್ಯಕ್ತಪಡಿಸಿದ್ದು, ಯಾವುದೇ ಕಾರಣಕ್ಕೂ ಈ ವಿಶ್ವವಿದ್ಯಾನಿಲಯಗಳನ್ನು ಬಂದ್ ಮಾಡದಂತೆ ಒತ್ತಾಯಿಸಿದೆ.



ವಿಧಾನಸೌಧದಲ್ಲಿ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪ್ರತಿಪಕ್ಷ ನಾಯಕರಾದ ಆರ್. ಅಶೋಕ್ ಮತ್ತು ಛಲವಾದಿ ನಾರಾಯಣ ಸ್ವಾಮಿ ಅವರು, ಬಿಜೆಪಿ ಅವಧಿಯಲ್ಲಿ ವಿಶ್ವ ವಿದ್ಯಾನಿಲಯಗಳನ್ನು ಆರಂಭಿಸಲಾಗಿತ್ತು. ಆ ಕಾರಣಕ್ಕೆ ವಿಶ್ವವಿದ್ಯಾನಿಲಯಗಳನ್ನು ಮುಚ್ಚಲು ಕಾಂಗ್ರೆಸ್ ಸರ್ಕಾರ ಹೊರಟಿರುವುದು ಸರಿಯಲ್ಲ. ಬಿಜೆಪಿ ಅಧಿಕಾರದಲ್ಲಿದ್ದಾಗ ಈ ರೀತಿ ಎಂದೂ ಮಾಡಿಲ್ಲ ಎಂದರು.

ಮಂಡ್ಯ ವಿಶ್ವವಿದ್ಯಾನಿಲಯವನ್ನು ಬಂದ್ ಮಾಡಿ ಅಲ್ಲಿ ಜಲಕ್ರೀಡೆಗೆ ಅವಕಾಶ ಕೊಡಲು ಮುಂದಾಗಿರುವುದಕ್ಕೂ ಕಿಡಿಕಾರಿದ ಇವರಿಬ್ಬರು, ಸರ್ಕಾರ ಇರುವುದು ರಿಯಲ್ ಎಸ್ಟೇಟ್ ಮಾಡಲಿಕ್ಕಲ್ಲ ಎಂದು ವಾಗ್ದಾಳಿ ನಡೆಸಿದರು.ಸರ್ಕಾರಕ್ಕೆ ಶಿಕ್ಷಣ, ಆರೋಗ್ಯ ಇದ್ಯಾವುದೂ ಮುಖ್ಯ ಆಗುತ್ತಿಲ್ಲ. ವಿವಿಗಳನ್ನು ಮುಚ್ಚಲು ಹೊರಟಿರುವುದು ಸರಿಯಲ್ಲ. ವ್ಯಾಪಾರ ಆಗುತ್ತಿಲ್ಲ, ಆದಾಯ ಬರುತ್ತಿಲ್ಲ ಎಂದು ವಿಶ್ವವಿದ್ಯಾನಿಲಯಗಳನ್ನು ಮುಚ್ಚಲು ಹೊರಟಿದ್ದಾರೆ. ಪುಟ 2

## ತಮಿಳುನಾಡು ಸರ್ಕಾರಕ್ಕೆ ಜಯಾಲಲಿತಾ ಆಸ್ತಿ ಹಸ್ತಾಂತರ

**ಬೆಂಗಳೂರು:** ತಮಿಳುನಾಡು ಮಾಜಿ ಸಿಎಂ ದಿವಂಗತ ಜಯಯಲಲಿತಾ ಅವರಿಗೆ ಸಂಬಂಧಿಸಿದ ಆಸ್ತಿಪತ್ರಗಳು, ಅಪಾರ ಒಡವೆ ಮತ್ತು ವಸ್ತುಗಳನ್ನು ತಮಿಳುನಾಡು ಸರ್ಕಾರಕ್ಕೆ ಹಸ್ತಾಂತರಿಸಲಾಗಿದೆ.

ಜಯಯಲಲಿತಾ ಅವರಿಗೆ ಸಂಬಂಧಿಸಿದ ಆಸ್ತಿಪತ್ರಗಳು, 11,344 ರೇಷ್ಮೆ ಸೀರೆಗಳು, 7040 ಗ್ರಾಂ ತೂಕದ 468 ಬಗೆಯ ಚಿನ್ನ, ವಜ್ರಖಚಿತ ಆಭರಣಗಳು ಹಾಗೂ 750 ಜೊತೆ ಚಪ್ಪಲಿಗಳು, ವಾಚ್‌ಗಳು ಸೇರಿದಂತೆ ಇನ್ನಿತರ ಬೆಲೆಬಾಳುವ ವಸ್ತುಗಳನ್ನು ತಮಿಳುನಾಡು ಸರ್ಕಾರಕ್ಕೆ ಹಸ್ತಾಂತರಿಸಲಾಗಿದೆ. ಭಾರೀ ಗಾತ್ರದ ಟ್ರಂಕ್ ಗಳ ಜೊತೆ ಬಿಗಿ ಭದ್ರತೆಯಲ್ಲಿ ಬಂದ ತಮಿಳುನಾಡಿನ ಅಧಿಕಾರಿಗಳು ನ್ಯಾಯಾಲಯದ ನ್ಯಾಯಾಧೀಶರ ಸಮ್ಮುಖದಲ್ಲಿ ಜಯಲಲಿತಾ ಅವರಿಗೆ ಸೇರಿದ ಬೆಲೆ ಬಾಳುವ ವಸ್ತುಗಳನ್ನು ತಮಿಳುನಾಡಿಗೆ ಕೊಂಡೊಯ್ದಿದ್ದಾರೆ.

ತಮಿಳುನಾಡಿನ ಸರಕಾರದ ಅಧಿಕಾರಿಗಳು ನ್ಯಾಯಾಧೀಶರ ಮುಂದೆ ಮಾಹಿತಿ ನೀಡಿ ಚಿನ್ನದ ಒಡವೆಗಳನ್ನು ತೂಕ ಹಾಕಿದ್ದಾರೆ ಎಂದು ತಿಳಿದುಬಂದಿದೆ.



ಅಕ್ರಮ ಆಸ್ತಿ ಗಳಿಕೆ ಪ್ರಕರಣ ಸಂಬಂಧ ತಮಿಳುನಾಡು ಮಾಜಿ ಮುಖ್ಯಮಂತ್ರಿ ದಿ| ಜೆ. ಜಯಲಲಿತಾ ಅವರಿಂದ ಮುಟ್ಟುಗೋಲು ಹಾಕಿಕೊಂಡಿದ್ದ ಬೆಲೆ ಬಾಳುವ ವಸ್ತುಗಳು ಮತ್ತು ಆಸ್ತಿಗಳನ್ನು ಹರಾಜು ಹಾಕುವ ಬದಲು ತಮಿಳುನಾಡು ಸರಕಾರದ ಸುಪರ್ದಿಗೆ ನೀಡುವಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ಹಿಂದೆ ಆದೇಶಿಸಿತ್ತು.

ಹಿಂದಿರುಗಿಸಲು 2024ರ ಫೆ.19ಕ್ಕೆ ದಿನಾಂಕ ನಿಗದಿಪಡಿಸಿತ್ತು. ಈ ನಡುವೆ ಜಯಲಲಿತಾ ಅವರ ಸಂಬಂಧಿಕರು ಪುಟ 2

ಮೊದಲ ಪುಟದಿಂದ

## ಎಐಸಿಸಿ ಪುನರಾಚನೆ

ಬಂದಿದ್ದರು. ರಾಷ್ಟ್ರ ರಾಜಕಾರಣದಲ್ಲಿ ಅವರ ಅನುಭವವನ್ನು ಮತ್ತೆ ಬಳಸಿಕೊಳ್ಳಲು ಪಕ್ಷ ತೀರ್ಮಾನಿಸಿದೆ.ಕೃಷ್ಣ ಅಲ್ಲಾವರು ಅವರನ್ನು ಬಿಹಾರ, ಹಿಮಾಚಲ ಪ್ರದೇಶ ಮತ್ತು ಚಂಡೀಗಢಕ್ಕೆ ರಜನಿ ಪಾಟೀಲ್, ಮಧ್ಯಪ್ರದೇಶಕ್ಕೆ ಹರೀಶ್ ಚೌಧರಿ ಅವರನ್ನು ಉಸ್ತುವಾರಿಯಾಗಿ ನೇಮಿಸಲಾಗಿದೆ. ಮುಂದಿನ ವರ್ಷ ಬಿಹಾರ ಚುನಾವಣೆ ನಡೆಯಲಿದೆ. ಕಾಂಗ್ರೆಸ್ ನಾಯಕ ಅಜಯ್ ಕುಮಾರ್ ಲಲ್ಲು ಅವರನ್ನು ಒಡಿಶಾ, ಕೆ. ರಾಜು ಅವರನ್ನು ಜಾರ್ಖಂಡ್, ಮೀನಾಕ್ಷಿ ನಟರಾಜನ್ ಅವರನ್ನು ತೆಲಂಗಾಣ ಮತ್ತು ಗಿರೀಶ್ ಚೋಡಂಕರ್ ಅವರನ್ನು ತಮಿಳುನಾಡು ಮತ್ತು ಪುದುಚೇರಿಯ ಉಸ್ತುವಾರಿಯನ್ನಾಗಿ ನೇಮಿಸಲಾಗಿದೆ.

## ಮುಸ್ಲಿಮರ ಉಪಟಳ ಹೆಚ್ಚಾಗಿದೆ

ಉದಯಗಿರಿ ಪ್ರಕರಣವನ್ನು ಆಡಳಿತ ಪಕ್ಷ ತನ್ನ ತುಷ್ಟೀಕರಣಕ್ಕೆ ಬಳಸಿಕೊಳ್ಳುತ್ತಿದೆ. ರಾಜ್ಯದ ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಮ್ಮ ಸೈದ್ಧಾಂತಿಕ ಪ್ರತಷ್ಠೆಯನ್ನು ಬದಿಗಿಟ್ಟು, ಸಾರ್ವಜನಿಕ ಆಸ್ತಿಯ ನಷ್ಟಕ್ಕೆ ಕಾರಣರಾದವರನ್ನು ಬಂಧಿಸಲು ಕ್ರಮ ಕೈಗೊಳ್ಳಬೇಕು.." ಎಂದು ಪ್ರಹ್ಲಾದ್ ಜೋಶಿ ಇದೇ ವೇಳೆ ಆಗ್ರಹಿಸಿದರು.

## ಕ್ಯಾಮರಾ ಬಳಸಲು ಸೂಚನೆ

ಆಹಾರ ಲಭಿಸುವಂತೆ ಮಾಡಲು ಮತ್ತು ಸ್ಥಳೀಯರಲ್ಲಿ ಜಾಗೃತಿ ಮೂಡಿಸಲು ಕ್ರಮ ವಹಿಸುವಂತೆ ತಿಳಿಸಿದರು. ಗ್ರಾಮಸ್ಥರು ಮತ್ತು ಅರಣ್ಯ ಸಿಬ್ಬಂದಿಯ ನಡುವೆ ಡಿಜಿಟಲ್ ಸಂಪರ್ಕ ವೃದ್ಧಿಸಲು ಸೂಚಿಸಿದ ಸಚಿವರು, ಆನೆಗಳು ಊರಿನ ಬಳಿ ಕಾಣಿಸಿಕೊಂಡಾಗ ತ್ವರಿತವಾಗಿ ಸ್ಪಂದಿಸುವಂತೆ ತಿಳಿಸಿದರು.

**ವಿರಾಜಪೇಟೆಯ ಪುಂಡಾನೆ ಸೆರೆಗೆ ತಂಡ ಕಳಿಸಲು ಸೂಚನೆ:**

ವಿರಾಜ ಪೇಟೆಯಲ್ಲಿ ಪುಂಡಾನೆ ಪದೆ ಪದೆ ಜನರ ಮೇಲೆ ದಾಳಿ ಮಾಡುತ್ತಿದ್ದು, ಇಂತಹ ಆನೆಗಳಿಗೆ ಅರವಳಿಕೆ ನೀಡಿ ಸೆರೆ ಹಿಡಿಯಲು ತುರ್ತು ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

**ರೈಲ್ವೆ ಬ್ಯಾರಿಕೇಡ್ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸಲು ಸೂಚನೆ:**

ಆನೆಗಳ ಉಪಟಳ ಹೆಚ್ಚಿರುವ ಪ್ರದೇಶಗಳಲ್ಲಿ ತ್ವರಿತವಾಗಿ ರೈಲ್ವೆ ಬ್ಯಾರಿಕೇಡ್ ಕಾಮಗಾರಿ ಪೂರ್ಣಗೊಳಿಸಲು ಕ್ರಮ ವಹಿಸುವಂತೆ ಸೂಚಿಸಿದ ಸಚಿವರು, ಟೆಂಟಕಲ್ ಫೆನ್ಸಿಂಗ್, ಆನೆ ಕಂದಕ ಮತ್ತು ಸೌರಬೇಲಿಗಳು ಸಮರ್ಪಕವಾಗಿ ಕಾರ್ಯ ನಿರ್ವಹಣೆ ಮಾಡುವಂತೆ ನೋಡಿಕೊಳ್ಳಲು ತಿಳಿಸಿದರು.

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಸುಭಾಷ್ ಮಲ್ಕಡೆ, ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಾದ ಶಾಶ್ವತಿ ಮಿಶ್ರ, ಮನೋಜ್ ರಾಜನ್, ಪಿ.ಸಿ. ರೇ ಮತ್ತಿತರ ಅಧಿಕಾರಿಗಳು ಪಾಲ್ಗೊಂಡಿದ್ದರು.

## ಎಲ್ಲರೂ ಧ್ವನಿ ಎತ್ತಲಿ

ಕೆಲ ಸಂಸದರಿಗೆ ಹೋರಾಟ ಮಾಡುವ ಮನೋಭಾವನೆಯೇ ಇಲ್ಲ ಎಂದು ಅವರು ಬೇಸರ ವ್ಯಕ್ತಪಡಿಸಿದರು. ರಾಜ್ಯ ಸರ್ಕಾರ ರಾಜ್ಯದ ಅಭಿವೃದ್ಧಿಗೆ ನಾವು ಸಹಕರಿಸುತ್ತೇವೆ. ಗೋದಾವರಿ, ಕೃಷ್ಣ, ಕಾವೇರಿ ನದಿಗಳನ್ನು ಜೋಡಿಸಲೇಬೇಕು ಎಂದು ಅವರು ಹೇಳಿದರು.

ಮಲಪ್ರಭಾ, ಘಟಪ್ರಭಾದಲ್ಲೂ ನೀರಿನ ತೊಂದರೆಗಳಿವೆ. ಎಲ್ಲದಕ್ಕೂ ನದಿ ಜೋಡಣೆ ಪರಿಹಾರ ಆಗುತ್ತದೆ ಎಂದು ದೇವೇಗೌಡರು ಹೇಳಿದರು.

ಮಹಾದಾಯಿ ಪ್ರಕರಣ ನ್ಯಾಯಾಲಯದಲ್ಲಿರುವುದರಿಂದ ಪ್ರಧಾನಿ ಮೋದಿ ಅವರು ಕ್ರಮ ಕೈಗೊಳ್ಳಲು ಸಾಧ್ಯವಾಗುತ್ತಿಲ್ಲ. ನಮ್ಮ ಅಧಿಕಾರಿಗಳು ನ್ಯಾಯಾಲಯದಲ್ಲಿ ಪ್ರಬಲ ವಾದ ಮಂಡಿಸಬೇಕು ಎಂದು ದೇವೇಗೌಡರು ಕಿವಿ ಮಾತು ಹೇಳಿದರು.

## ವಿವಿಗೆ ಬೀಗ ಬಿಜೆಪಿ ವಿರೋಧ

ಇದೇನು ರಿಯಲ್ ಎಸ್ಟೇಟ್ ಸರ್ಕಾರವೇ ಎಂದು ಪ್ರಶ್ನಿಸಿದರು.

ಯಾವುದೇ ಕಾರಣಕ್ಕೂ 9 ವಿಶ್ವವಿದ್ಯಾನಿಲಯಗಳನ್ನು ಬಂದ್ ಮಾಡಬಾರದು. ವಿವಿಗಳಿಗೆ ಅಗತ್ಯವಾದ 342 ಕೋಟಿ ರೂ.ಗಳನ್ನು ಕೊಡಬೇಕು. 4 ಲಕ್ಷ ಕೋಟಿ ಬಜೆಟ್ ಮಂಡನೆ ಮಾಡಲು ಹೊರಟಿರುವ ಸರ್ಕಾರಕ್ಕೆ ವಿಶ್ವವಿದ್ಯಾಲಯಗಳಿಗೆ 342 ಕೋಟಿ ರೂ. ಕೊಡುವ ಯೋಗ್ಯತೆ ಇಲ್ಲವೇ ಎಂದು ಪ್ರಶ್ನಿಸಿದರು.

ವಿಶ್ವವಿದ್ಯಾಲಯ ಬದಲು 300 ಬಾರ್‌ಗಳನ್ನು ಬಂದ್ ಮಾಡಲಿ ನೋಡೋಣ ಎಂದು ಸವಾಲು ಹಾಕಿದ ಇವರು, ಮಾನವ ಸಂಪನ್ಮೂಲ ಸಿಗುತ್ತದೆ ಎಂದು ಬಂಡವಾಳ ಹೂಡಿಕೆದಾರರು ರಾಜ್ಯದಲ್ಲಿ ಹೂಡಿಕೆ ಮಾಡಲು ಬರುತ್ತಾರೆ. ಇವರನ್ನು ನೋಡಿದರೆ ವಿಶ್ವವಿದ್ಯಾಲಯಗಳನ್ನು ಮುಚ್ಚುತ್ತಿದ್ದಾರೆ. ಹೀಗಾದರೆ ಹೂಡಿಕೆ ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು.

## ಜಯಾಲಲಿತಾ ಆಸ್ತಿ ಹಸ್ತಾಂತರ

ಎಂದು ಹೇಳಿಕೊಂಡಿದ್ದ ದೀಪಾ ಮತ್ತು ದೀಪಕ್ ವಿಶೇಷ ನ್ಯಾಯಾಲಯದ ಆದೇಶದ ವಿರುದ್ಧ ಕರ್ನಾಟಕ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರಿಂದ ಆದೇಶವನ್ನು ತಡೆಹಿಡಿದಿತ್ತು. ಈಗ ಮೇಲ್ಮನವಿ ವಜಾಗೊಂಡ ಹಿನ್ನೆಲೆಯಲ್ಲಿ ವಿಶೇಷ ನ್ಯಾಯಾಲಯವು ಆಸ್ತಿ ಮತ್ತು ಆಭರಣಗಳನ್ನು ಹಸ್ತಾಂತರಿಸುವ ಪ್ರಕ್ರಿಯೆ ಕೈಗೊಂಡಿದೆ.

# ನಮಗೂ ಸೈಬರ್ ವಂಚನೆ ಕರೆಗಳು ಬರುತ್ತಿವೆ

**ಮೈಸೂರು:** ನಮಗೂ ಸಾಕಷ್ಟು ಸ್ಕ್ಯಾಮ್ ಕರೆಗಳು, ಒಟಿಪಿ ಕೊಡಿ ಅಂತ ಕರೆಗಳು ಬರುತ್ತಲೇ ಇರುತ್ತವೆ. ನಾನು ಈವರೆಗೆ ಸೈಬರ್ ಕ್ರೈಂ ಜಾಲಕ್ಕೆ ಬಲಿಯಾಗಿಲ್ಲ ಎಂದು ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದ್ದಾರೆ.

ಸೈಬರ್ ವರ್ಸ್ ಫೌಂಡೇಷನ್ ವತಿಯಿಂದ ಹಮ್ಮಿಕೊಂಡಿದ್ದ ಕಾರ್ಯಗಾರದಲ್ಲಿ ಮಾತನಾಡಿದ ಸಂಸದ ಯದುವೀರ್, ನಮಗೂ ಕೂಡ ಸೈಬರ್ ವಂಚನೆ ಕರೆಗಳು ಬರುತ್ತವೆ. ಒಟಿಪಿ ಕೊಡಿ ಅಂತ ಕರೆಗಳು ಬರುತ್ತವೆ. ನಾನು ಅದನ್ನೆಲ್ಲ ಸ್ಕ್ಯಾಮ್ ಅಂತ ಬಿಟ್ಟು ಬಿಡುತ್ತೇನೆ. ಮನೆಯವರಿಗೂ ಕೂಡ ಹಲವು ಬಾರಿ ಸೈಬರ್ ವಂಚನೆ ಕರೆಗಳು ಬರುತ್ತವೆ. ನಾವೂ ಕೂಡ ಅದರಿಂದ ತಪ್ಪಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ. ನನ್ನ ಗೆಳೆಯರು ಕೂಡ ಹಲವರು ಸೈಬರ್ ಕ್ರೈಂ ಜಾಲದಲ್ಲಿ ಸಿಲುಕಿಕೊಂಡಿದ್ದಾರೆ. ಸೈಬರ್ ಕ್ರಿಮಿನಲ್ ಗಳು ತಂತ್ರಜ್ಞಾನದ ಮೂಲಕ ಅಪರಾಧ ಮಾಡುತ್ತಿದ್ದಾರೆ. ಸಣ್ಣ ಹಾಡಿಯಲ್ಲೂ ಕೂಡ ಮೊಬೈಲ್ ಫೋನ್ ಸಿಗುತ್ತದೆ. ತಂತ್ರಜ್ಞಾನ ಬಳಸುವಾಗ ಅಪರಾಧ ಹೆಚ್ಚಾಗುತ್ತಿರುವುದು ಸಹಜ. ಕರ್ನಾಟಕದಲ್ಲಿ ಸೈಬರ್ ಕ್ರೈಂ ಹೆಚ್ಚಾಗುತ್ತಿರುವ ಕಾರಣ ಜಾಗೃತಿ ಕಾರ್ಯ ಆರಂಭವಾಗಿದ್ದು. ಮೈಸೂರನ್ನ ಸೈಬರ್ ಕ್ರೈಂ ಮುಕ್ತ ಮಾಡುವ ನಿಟ್ಟಿನಲ್ಲಿ ಹೋರಾಟ ಮಾಡಬೇಕಿದೆ ಎಂದರು.

ಉದಯಗಿರಿ ಗಲಭೆ ಪ್ರಕರಣ ಕುರಿತು ಮಾತನಾಡಿದ ಸಂಸದ ಯದುವೀರ್, ಪೊಲೀಸರಿಗೆ ರಕ್ಷಣೆ ನೀಡಬೇಕಾದ ಪರಿಸ್ಥಿತಿ ಬಂದಿದೆ. ಸರಕಾರ ಕಠಿಣ ಕ್ರಮ ಕೈಗೊಳ್ಳಬೇಕಾಗಿದೆ. ತಪ್ಪಿತಸ್ಥರಿಗೆ ಕಠಿಣಶಿಕ್ಷೆ ಆಗಲೇಬೇಕು. ನಾನು ಬಜೆಟ್ ಅಧಿವೇಶನದಲ್ಲಿ ಪಾಲ್ಗೊಂಡಿದ್ದೆ. ಉದಯಗಿರಿಗೆ ನಾನು ಹೋಗುತ್ತೇನೆ. ಎಕ್ಸೆಲ್ ಪ್ಲಾಂಟ್ ಗೂ ಕೂಡ ಹೋಗುತ್ತೇನೆ. ಯಾವಾಗಲೂ ಶಾಂತಿ ಕಾಪಾಡಬೇಕಾಗಿದೆ. ಕ್ರಿಮಿನಲ್ ಚಟುವಟಿಕೆ ನಡೆಯುವಾಗ ಕಠಿಣಕ್ರಮ ಕೈಗೊಳ್ಳಬೇಕಾಗಿದೆ ಎಂದರು,

ಬಿಜೆಪಿಯಲ್ಲಿ ಬಣಗಳ ವಿಚಾರ ಕುರಿತು ಪ್ರತಿಕ್ರಿಯಿಸಿದ ಯದುವೀರ್, ಕಾಂಗ್ರೆಸ್ ಪಕ್ಷದಲ್ಲೂ ಕೂಡ ಬಣಗಳಿವೆ. ಕುರ್ಚಿಗಾಗಿ ಕಿತ್ತಾಟ ಎಲ್ಲರಲ್ಲೂ ಇದೆ. ನಮ್ಮ ಗೊಂದಲವನ್ನ ನಾವು ಪರಿಹರಿಸಿಕೊಳ್ಳುತ್ತೇವೆ. ನಾವು ಒಗ್ಗಟ್ಟಿನಿಂದ ಮುನ್ನಡೆಸಿಕೊಂಡು ಹೋಗುತ್ತೇವೆ ಎಂದರು.

ಯತ್ನಾಳ್ ಅವರಿಗೆ ಬಿಜೆಪಿ ಕೇಂದ್ರ ಶಿಸ್ತು ಸಮಿತಿಯಿಂದ ನೋಟಿಸ್ ವಿಚಾರ ಕುರಿತು ಪ್ರತಿಕ್ರಿಯಿಸಿದ ಯದುವೀರ್, ವರಿಷ್ಠರಿಗೆ ಅವರು ಸ್ಪಷ್ಟನೆ ನೀಡಬೇಕು. ಅದನ್ನ ಕೇಂದ್ರ ನಾಯಕರು ತೀರ್ಮಾನ ಮಾಡುತ್ತಾರೆ ಎಂದರು.

**ವಿಜಯೇಂದ್ರ ಪರ ಬ್ಯಾಟ್ ಬೀಸಿದ ಯದುವೀರ್:** ಇದೇ ವೇಳೆ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಪರ ಬ್ಯಾಟ್ ಬೀಸಿದ ಯದುವೀರ್, ಅವರೇ ರಾಜ್ಯಾಧ್ಯಕ್ಷರಾಗಿ ಮುಂದುವರಿಯಲಿ. ಜವಾಬ್ದಾರಿಯಿಂದ ರಾಜ್ಯದಲ್ಲಿ



ಮುನ್ನಡೆಸುತ್ತಿದ್ದಾರೆ. ಅವರ ನೇತೃತ್ವದಲ್ಲಿ ನಾವು ಮುಂದುವರಿಯುತ್ತೇವೆ ಎಂದರು.

**ನ್ಯಾಯಾಲಯದಲ್ಲಿ ಗೆದ್ದರೂ ಸರ್ಕಾರ ಟಿಡಿಆರ್ ನೀಡುತ್ತಿಲ್ಲ:** ಬೆಂಗಳೂರು ಅರಮನೆಗೆ ಟಿಡಿಆರ್ ಫಿಕ್ಸ್ ಮಾಡುವ ವಿಚಾರಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದ ವಿರುದ್ಧ ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅಸಮಾಧಾನ ಹೊರ ಹಾಕಿದ್ದಾರೆ.

ಸುಪ್ರೀಂಕೋರ್ಟ್ ಮೊದಲೇ ಆದೇಶ ನೀಡಿತ್ತು. ಸರ್ಕಾರ ಮೊದಲಿನಿಂದಲೂ ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದೆ. ನಮಗೆ ಟಿಡಿಆರ್ ಸರ್ಟಿಫಿಕೇಟ್ ನೀಡಿದರೆ ಸಾಕು. ಆದರೆ ಸರ್ಕಾರ ಇದಕ್ಕೆ ಮನಸ್ಸು ಮಾಡುತ್ತಿಲ್ಲ. ಸರ್ಕಾರ ಟಿಡಿಆರ್ ಹಣ ನೀಡುವುದಿಲ್ಲ. ನಾವು ನ್ಯಾಯಾಲಯದಲ್ಲಿ ಕೇಸ್ ಗೆದ್ದರೂ ಟಿಡಿಆರ್ ನೀಡುತ್ತಿಲ್ಲ. ಇದು ಜನಸಾಮಾನ್ಯರಿಂದ ರಾಜನಿಗೂ ಕೂಡ ನೀಡಲೇಬೇಕು. ಆದರೆ ಸರ್ಕಾರ ಮಾತ್ರ ನಿರ್ಲಕ್ಷ್ಯ ತೋರುತ್ತಿದೆ. ಜನರೇ ಇದನ್ನ ಮುಂದಿನ ದಿನಗಳಲ್ಲಿ ಪ್ರಶ್ನೆ ಮಾಡ್ತಾರೆ. ರಾಜ್ಯ ಸರ್ಕಾರದ ನಿರ್ಧಾರದ ಬಗ್ಗೆ ನಾನು ಮಾತನಾಡಲ್ಲ. ರಸ್ತೆ ಅಗಲೀಕರಣ ಮಾಡಬೇಕಾದರೆ ಟಿಡಿಆರ್ ನೀಡಿ ಎಂಬುದಷ್ಟೇ ನನ್ನ ಬೇಡಿಕೆ. ರಾಜ್ಯ ಸರ್ಕಾರ ನ್ಯಾಯಾಲಯದ ಆದೇಶ ಪಾಲಿಸುತ್ತಿಲ್ಲ ಕುರುಬಾರಹಳ್ಳಿ, ಗರಿಕೆಮಾಳ ಯಾವ ವಿಷಯದಲ್ಲೂ ರಾಜ್ಯ ಸರ್ಕಾರ ಸ್ಪಂದಿಸುತ್ತಿಲ್ಲ ಎಂದು ಕಿಡಿಕಾರಿದರು.

ಮೊದಲಿನಿಂದಲೂ ನನ್ನನ್ನ ಹಾಗೂ ಅರಮನೆಯನ್ನ ಟಾರ್ಗೆಟ್ ಮಾಡುತ್ತಿದ್ದಾರೆ. 1996 ರಿಂದಲೂ ಕೂಡ ಅರಮನೆ ಟಾರ್ಗೆಟ್ ಆಗಿದೆ. ನಾನು ಸಂಸದನಾದ ಮೇಲೆ ಈ ವಿಚಾರ ಹೆಚ್ಚು ಮುನ್ನೆಲೆಗೆ ಬರುತ್ತಿದೆ. ಮೂರು ದಶಕದಿಂದ ತಂದೆಯವರು ಕಷ್ಟ ಅನುಭವಿಸಿದರು. ಇಡೀ ಅರ್ಧ ಜೀವನ ನ್ಯಾಯಾಲಯದ ವ್ಯಾಜ್ಯದಲ್ಲೇ ಕಳೆದರು. ಅವರ ಬದುಕೇ ನಿರಂತರ ಹೋರಾಟವಾಗಿತ್ತು. ತಂದೆಯವರು ಹೋರಾಟ ಮಾಡಿಯೇ ಕಾಲವಾದರು. ನಾವು ನಿರಂತರ ಹೋರಾಟ ಮಾಡುತ್ತಿದ್ದೇವೆ ಎಂದು ಸಂಸದ ಯದುವೀರ್ ತಿಳಿಸಿದರು.



ರಾಮನಗರ ಜಿಲ್ಲೆ ಕನಕಪುರ ತಾಲ್ಲೂಕಿನ ಕೋಡಿಹಳ್ಳಿ ಹೋಬಳಿಯ ಹೊಸದುರ್ಗ ಗ್ರಾಮದಲ್ಲಿ ಪ್ರೆಸ್ಟೀಜ್ ಗ್ರೂಪ್ ನವರು ಕಂಪನಿಗಳ ಸಾಮಾಜಿಕ ಹೊಣೆಗಾರಿಕೆ ಯೋಜನೆಯಡಿಯಲ್ಲಿ ನಿರ್ಮಿಸಲಿರುವ ಸರಕಾರಿ ಶಾಲೆ ಕಟ್ಟಡ ಕಾಮಗಾರಿಗೆ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಶನಿವಾರ ಗುದ್ದಲಿ ಪೂಜೆ ನೆರವೇರಿಸಿ, ಮಾತನಾಡಿದರು. ನಿಕಟಪೂರ್ವ ಸಂಸದ ಡಿ ಕೆ ಸುರೇಶ್, ಪ್ರೆಸ್ಟೀಜ್ ಗ್ರೂಪ್ ನ ನದೀಮ್, ಸ್ಥಳೀಯ ಮುಖಂಡ ದುಂತೂರು ವಿಶ್ವನಾಥ್ ಮತ್ತಿತರರು ಉಪಸ್ಥಿತರಿದ್ದರು.




ನಮ್ಮ ಮೆಟ್ರೋ ಕಚೇರಿ ಮುತ್ತಿಗೆ ಕನ್ನಡ ಒಕ್ಕೂಟದ ವತಿಯಿಂದ ಕೇಂದ್ರ ಸರ್ಕಾರ ಬಾರಿ ಪ್ರಮಾಣದಲ್ಲಿ ಮೆಟ್ರೋ ದರ ಏರಿಕೆ ಮಾಡಿರುವುದನ್ನ ಖಂಡಿಸಿ ಶಾಂತಿನಗರದ ಮೆಟ್ರೋ ಕಚೇರಿ ಮುತ್ತಿಗೆ ಹಾಕಲಾಹಿತು ನಟರಾಜ್ ಬೊಮ್ಮಸಂದ್ರ ಗಂಡಸಿ ಸದಾನಂದ ಸ್ವಾಮಿ. ಕೆ. ಸಿ ಮೂರ್ತಿ, ಸಾಮ್ರಾಟ್ ಮಂಜು, ಅಂಬುಜಾ, ವಿಶ್ವನಾಥ್,ಕ್ರಾಂತಿ ರಾಜು,ಬಾಲಕೃಷ್ಣ ನಾಯಕ್, ಪ್ರದೀಪ್ ನಾಯಕ್,ನಾಗರಾಜ್, ಸೇರಿದಂತೆ ನೂರಾರು ಹೋರಾಟಗಾರರು ಭಾಗವಹಿಸಿದ್ದರು.

ಬೆಂಗಳೂರಿಗೆ ಆಗಮಿಸಿರುವ ಕೇಂದ್ರ ರೈಲ್ವೆ ಸಚಿವರಾದ ಅಶ್ವಿನಿ ವೈಷ್ಣವ್ ಅವರನ್ನು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಇಂದು ಆತ್ಮೀಯವಾಗಿ ಭೇಟಿ ಮಾಡಿ ಶುಭಾಶಯ ಕೋರಿದರು



## ಇನ್‌ಸ್ಟಾಗ್ರಾಂನಲ್ಲಿ ಸಿಕ್ಕ ಆರೋಪಿ

**ಬೆಂಗಳೂರು:** ನ್ಯಾಯಾಲಯಕ್ಕೆ ಹಾಜರಾಗದೇ ತಲೆಮರೆಸಿಕೊಂಡಿದ್ದ ಹಲ್ಲೆ ಪ್ರಕರಣದ ಆರೋಪಿಯೊಬ್ಬ ಮಗನ ಇನ್‌ಸ್ಟಾಗ್ರಾಂ ಸ್ಟೋರಿಯಲ್ಲಿ ಕಾಣಿಸಿಕೊಂಡು ಪೊಲೀಸರ ಅತಿಥಿಯಾದ ಘಟನೆ ಬೆಂಗಳೂರಿನಲ್ಲಿ ನಡೆದಿದೆ.

ನ್ಯಾಯಾಲಯದಲ್ಲಿ ವಾರಂಟ್ ಜಾರಿಯಾದರೂ ಸಹ ತಲೆಮರೆಸಿಕೊಂಡಿದ್ದ ಮೊಹಮ್ಮದ್ ಫಾರೂಕ್ ಅಲಿಯಾಸ್ ಮೋಟಿ ಎಂಬಾತನನ್ನ ಮಡಿವಾಳ ಠಾಣೆ ಪೊಲೀಸರು ಬಂಧಿಸಿದ್ದಾರೆ.

12 ವರ್ಷದ ಹಿಂದೆ ನಡೆದ ಘಟನೆ: 12 ವರ್ಷಗಳ ಹಿಂದೆ ನಡೆದಿದ್ದ ಮಾರಣಾಂತಿಕ ಹಲ್ಲೆ ಪ್ರಕರಣದಲ್ಲಿ ಆರೋಪಿಯಾಗಿದ್ದ ಮೊಹಮ್ಮದ್ ಫಾರೂಕ್ ವಿರುದ್ಧ 2015ರಲ್ಲಿ ನ್ಯಾಯಾಲಯ ವಾರಂಟ್ ಜಾರಿಗೊಳಿಸಿತ್ತು. ಆದರೆ, ಫಾರೂಕ್ ಮಾತ್ರ 2022ರ ಬಳಿಕ ನ್ಯಾಯಾಲಯದಲ್ಲಿ ವಿಚಾರಣೆಗೆ ಹಾಜರಾಗದೇ ತಲೆಮರೆಸಿಕೊಂಡಿದ್ದರು. ಫಾರೂಕ್‌ಗಾಗಿ ಪೊಲೀಸರು ಸಾಕಷ್ಟು ಹುಡುಕಾಟ ನಡೆಸಿದ್ದರು. ಆದರೆ, ಮೊಬೈಲ್ ನಂಬರ್, ವಾಸಸ್ಥಳ ಬದಲಿಸಿಕೊಂಡು ಆರೋಪಿ ಸಿಕ್ಕಿರಲಿಲ್ಲ. ಅಷ್ಟೇ ಅಲ್ಲ ಎರಡನೇ ಮದುವೆಯಾಗಿ ದೊಡ್ಡಕಲ್ಲಸಂದ್ರದಲ್ಲಿ ವಾಸವಾಗಿದ್ದ ಫಾರೂಕ್, ತನ್ನ ತಂದೆಯ ಸಾವಿನ ನಂತರ ಅಂತ್ಯಕ್ರಿಯೆಗೂ ಸಹ ಬಾರದೇ ಪೊಲೀಸರಿಗೆ ಚಳ್ಳೆಹಣ್ಣು ತಿನ್ನಿಸಿದ್ದ.

ಇನ್‌ಸ್ಟಾಗ್ರಾಂನಿಂದ ಸಿಕ್ಕಿಬಿದ್ದ ಆರೋಪಿ: ಇತ್ತೀಚೆಗೆ ಇನ್‌ಸ್ಟಾಗ್ರಾಂ ಸ್ಟೋರಿಯೊಂದರಲ್ಲಿ ಮೊಹಮ್ಮದ್ ಫಾರೂಕ್‌ನ ಫೋಟೋ ಪ್ರಕಟಿಸಲಾಗಿತ್ತು. ಫೋಟೋ ಪ್ರಕಟವಾದ ಇನ್‌ಸ್ಟಾಗ್ರಾಂ ಐಡಿ, ಐಪಿ ಅಡ್ರೆಸ್ ಪರಿಶೀಲನೆ ನಡೆಸಿದಾಗ ಅದು ಮೊಹಮ್ಮದ್ ಫಾರೂಕ್‌ನ ಹೆಸರಿನಲ್ಲಿರುವ ಮೊಬೈಲ್ ನಂಬರ್‌ನ ಆಧಾರದಲ್ಲಿ ಆ ಐಡಿ ಕ್ರಿಯೇಟ್ ಆಗಿರುವುದು ಪತ್ತೆಯಾಗಿತ್ತು. ಅಲ್ಲದೇ ಅದೇ ನಂಬರ್‌ನಿಂದ ಆನ್‌ಲೈನ್‌ನಲ್ಲಿ ಫುಡ್ ಆರ್ಡರ್ ಬಂದಿರುವುದನ್ನು ಪೊಲೀಸರು ಪತ್ತೆ ಹಚ್ಚಿದ್ದರು. ಆ ಆರ್ಡರ್‌ಗಳು ಪ್ಲೇಸ್‌ಮೆಂಟ್ ಆಗುತ್ತಿದ್ದ ಮಾಹಿತಿ ಆಧಾರದಲ್ಲಿ ಮೊಹಮ್ಮದ್ ಫಾರೂಕ್‌ನ ವಿಳಾಸವನ್ನ ಪೊಲೀಸರು ಪತ್ತೆಹಚ್ಚಿದ್ದರು. ನಂತರ ಆತನ ಚಲನವಲನಗಳ ಕುರಿತು ನಿಗಾವಹಿಸಿ, ಕೊನೆಗೆ ಬಂಧಿಸುವಲ್ಲಿ ಯಶಸ್ವಿಯಾಗಿರುವುದಾಗಿ ಪೊಲೀಸರು ಮಾಹಿತಿ ನೀಡಿದರು.

ಆರೋಪಿ ಸದ್ಯ ಮಡಿವಾಳ ಠಾಣೆ ಪೊಲೀಸರ ವಶದಲ್ಲಿದ್ದು, ಆತನ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

## ಅನ್ಯ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲಿ ಸಾವು ಕಡಿಮೆ

ಬೆಂಗಳೂರು, ಫೆ.14: ಆನೆಗಳ ಸಂಖ್ಯೆ ಮತ್ತು ಆನೆಗಳಿಂದ ಸಂಭವಿಸುವ ಸಾವಿನ ಪ್ರಮಾಣಕ್ಕೆ ಹೋಲಿಸಿದರೆ ಒಡಿಶಾ, ಪಶ್ಚಿಮ ಬಂಗಾಳ, ಜಾರ್ಖಂಡ್, ಛತ್ತೀಸ್ ಗಢ, ಅಸ್ಸಾಂ, ತಮಿಳುನಾಡು ಮತ್ತು ಕೇರಳ ರಾಜ್ಯಗಳಿಗಿಂತ ಕರ್ನಾಟಕದಲ್ಲಿ ಸಾವಿನ ಸಂಖ್ಯೆ ಅತ್ಯಲ್ಪ ಎಂದು ಅರಣ್ಯ ಸಚಿವರಿಗಿಂದು ತಿಳಿಸಲಾಯಿತು. ಫೆ.13ರಂದು ಒಂದೆ ದಿನ ಆನೆಗಳಿಂದ ರಾಜ್ಯದಲ್ಲಿ 3 ಸಾವು ಸಂಭವಿಸಿರುವ ಹಿನ್ನೆಲೆಯಲ್ಲಿ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ವಿವರ ನೀಡಿದ ಅಧಿಕಾರಿಗಳು, 2019–23ರ ನಡುವಿನ 5 ವರ್ಷಗಳ ಅವಧಿಯಲ್ಲಿ 6395 ಆನೆಗಳಿರುವ ಕರ್ನಾಟಕದಲ್ಲಿ 160 ಸಾವು ಸಂಭವಿಸಿದೆ, ಆದರೆ ಛತ್ತೀಸಗಢದಲ್ಲಿ ಇರುವುದೇ 247 ಆನೆ ಆದರೆ, ಅಲ್ಲಿ ಆನೆಗಳಿಂದ ಇದೇ 5 ವರ್ಷದ ಅವಧಿಯಲ್ಲಿ 313 ಸಾವು ಸಂಭವಿಸಿದೆ ಎಂದು ತಿಳಿಸಿದರು.

ಒಡಿಶಾದಲ್ಲಿ 1976 ಆನೆಗಳಿದ್ದು ಅಲ್ಲಿ 2019–23ರ ಅವಧಿಯಲ್ಲಿ 624 ಜನರು ಮೃತಪಟ್ಟಿದ್ದರೆ, 700 ಆನೆ ಇರುವ ಪಶ್ಚಿಮ ಬಂಗಾಳದಲ್ಲಿ 436 ಸಾವು ಸಂಭವಿಸಿದೆ. 2761 ಆನೆಗಳಿರುವ ತಮಿಳುನಾಡಿನಲ್ಲಿ ಇದೆ ಅವಧಿಯಲ್ಲಿ 256 ಮಂದಿ ಸಾವಿಗೀಡಾಗಿದ್ದರೆ, 1793 ಆನೆಗಳಿರುವ ಕೇರಳದಲ್ಲಿ 124 ಜನರು ಮೃತಪಟ್ಟಿದ್ದಾರೆ ಎಂಬ ಅಂಕಿ ಅಂಶ ನೀಡಿದರು.

## ಭಾರತೀಯ ವಲಸಿಗರನ್ನು ಕರೆತರುವುದನ್ನು ವಿರೋಧಿಸಿದ ಸಿಎಂ

**ಚಂಡಿಘಡ:** ಅಮೆರಿಕದಿಂದ ಗಡೀಪಾರು ಮಾಡಿದ ಭಾರತೀಯರನ್ನು ಹೊತ್ತೊಯ್ಯುವ ವಿಮಾನಗಳಿಗೆ ಅಮೃತಸರವನ್ನು ಲ್ಯಾಂಡಿಂಗ್ ತಾಣವಾಗಿ ಆಯ್ಕೆ ಮಾಡಿದ್ದಕ್ಕಾಗಿ ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್ ಕೇಂದ್ರ ಸರ್ಕಾರವನ್ನು ತೀವ್ರವಾಗಿ ಟೀಕಿಸಿದ್ದಾರೆ.

ಇನ್ನೂ ಎರಡು ವಿಮಾನಗಳು ಬರಲಿವೆ, ಇದು ಉದ್ದೇಶಪೂರ್ವಕವಾಗಿ ಪಂಜಾಬ್‌ಗೆ ಮಾನಹಾನಿ ಮಾಡುವ ಪ್ರಯತ್ನವೇ ಎಂದು ಪ್ರಶ್ನಿಸಿರುವ ಅವರು, ಇದು ಡೊನಾಲ್ಡ್ ಟ್ರಂಪ್‌ನಿಂದ ಯುಎಸ್‌ಗೆ ಎರಡು ದಿನಗಳ ಭೇಟಿಯಲ್ಲಿರುವ ಪ್ರಧಾನಿ ನರೇಂದ್ರ ಮೋದಿಗೆ ಉಡುಗೊರೆ ಎಂದಿದ್ದಾರೆ. ಅಕ್ರಮವಾಗಿ ಅಮೆರಿಕಕ್ಕೆ ವಲಸೆ ಹೋಗಿದ್ದಾರೆ ಎನ್ನಲಾದ ಭಾರತೀಯರನ್ನು ಹೊತ್ತೊಯ್ಯುವ ಎರಡನೇ ವಿಮಾನ ಇಂದು ರಾತ್ರಿ ಅಮೃತಸರಕ್ಕೆ ಇಳಿಯಲಿದೆ. ಅಮೃತಸರವನ್ನು ವಿಮಾನವನ್ನು ಇಳಿಸಲು ಯಾವ ಮಾನದಂಡವನ್ನು ಆಯ್ಕೆ ಮಾಡಲಾಗಿದೆ ಎಂಬುದನ್ನು ವಿದೇಶಾಂಗ ಸಚಿವಾಲಯ ನಮಗೆ ತಿಳಿಸಬೇಕು ಎಂದು ಮಾನ್ ಹೇಳಿದರು.

ಗಡೀಪಾರು ಮಾಡಿದವರಲ್ಲಿ ಹೆಚ್ಚಿನವರು ಗುಜರಾತ್ ನವರಾಗಿದ್ದರೆ ಫೆಬ್ರವರಿ 5 ರಂದು ಅಮೃತಸರದಲ್ಲಿ ಬಂದಿಳಿದ ಮೊದಲ ಗಡೀಪಾರು ವಿಮಾನವನ್ನು ಅಹಮದಾಬಾದ್‌ಗೆ ಏಕೆ ನಿರ್ದೇಶಿಸಲಿಲ್ಲ ಎಂದು ಮಾನ್ ಕೇಳಿದರು. ಕೇಂದ್ರ ಸರ್ಕಾರವನ್ನು ಟೀಕಿಸಿದ ಎಎಪಿ ನಾಯಕ ಅಮೃತಸರವನ್ನು ವಿಮಾನಗಳ ಲ್ಯಾಂಡಿಂಗ್ ಸೈಟ್ ಆಗಿ ಆಯ್ಕೆ ಮಾಡುವ ಮಾನದಂಡವನ್ನು ಪ್ರಶ್ನಿಸಿದರು. ಹರಿಯಾಣ ಅಥವಾ ಗುಜರಾತ್ ಇದು ಸ್ಪಷ್ಟವಾಗಿ ಪಂಜಾಬ್ ಅನ್ನು ಗುರಿಯಾಗಿಸುವ ಪ್ರಯತ್ನವಾಗಿದೆ. ಬದಲಿಗೆ ಈ ವಿಮಾನಗಳು ಅಹಮದಾಬಾದ್‌ನಲ್ಲಿ ಇಳಿಯಬೇಕು ಎಂದಿದ್ದಾರೆ.

## ಗ್ಯಾರಂಟಿ ಯೋಜನೆಗಳ ಕುರಿತು ಪರಿಶೀಲನಾ ಸಭೆ

**ಬೆಂಗಳೂರು:** ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ, ಅಧ್ಯಕ್ಷರಾದ ಶ್ರೀ ಜಿ.ಕೃಷ್ಣಪ್ಪ ರವರು ಬೊಮ್ಮನಹಳ್ಳಿ ವಿಧಾನ ಸಭಾ ಕ್ಷೇತ್ರದ ಕಛೇರಿಯಲ್ಲಿ ಸಭೆ ನಡೆಸಿ, ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನದ ಬಗ್ಗೆ ಚರ್ಚಿಸಿದರು.

ಆರ್ಥಿಕವಾಗಿ ಸಬಲರಾಗಿರುವ ಮಹಿಳೆಯರು ತಾವು ಪಡೆಯುತ್ತಿರುವ ಗೃಹಲಕ್ಷ್ಮಿ ಯೋಜನೆಯ ಹಣವನ್ನು ಸರ್ಕಾರಕ್ಕೆ ಸ್ವಯಂಪ್ರೇರಿತವಾಗಿ ಬಿಟ್ಟುಕೊಡಬೇಕೆಂದು ಗೃಹಲಕ್ಷ್ಮಿ ಫಲಾನುಭವಿಗಳಿಗೆ ಮನವಿ ಮಾಡಿದರು.

ರಾಜ್ಯ ಸರ್ಕಾರ ನೀಡುತ್ತಿರುವ ಗ್ಯಾರಂಟಿ ಯೋಜನೆಗಳ ಬಗ್ಗೆ ಅಂತಾರಾಷ್ಟ್ರೀಯ ಮಟ್ಟದಲ್ಲೂ ಚರ್ಚೆ ನಡೆಯುತ್ತಿದ್ದು, ವ್ಯಾಪಕ ಪ್ರಶಂಸೆ ವ್ಯಕ್ತವಾಗುತ್ತಿದೆ ಎಂದು ತಿಳಿಸಿದರು.

ಮುಂದುವರಿದು, ಗ್ಯಾರಂಟಿ ಯೋಜನೆಗಳ ಕುರಿತು ಯಾವುದಾರರು ದೂರುಗಳು ಬಂದಲ್ಲಿ, ಅಂತಹ ಫಲಾನುಭವಿಗಳಿಗೆ ತ್ವರಿತವಾಗಿ ಸ್ಪಂದಿಸಿ ಇರುವ ಸಮಸ್ಯೆಯನ್ನು ಬಗೆಹರಿಸಲು ಸೂಚಿಸಿದರು. ಕಾರ್ಯಕ್ರಮದಲ್ಲಿ ಬೊಮ್ಮನಹಳ್ಳಿ ವಿಧಾನ ಸಭಾ ಕ್ಷೇತ್ರದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಶ್ರೀ



ವಾಸುದೇವ ರೆಡ್ಡಿ, ಸಮಾಜ ಸೇವಕರಾದ ಶ್ರೀ ಉಮಾಪತಿ ಶ್ರೀನಿವಾಸ ಗೌಡ, ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಉಪಾಧ್ಯಕ್ಷರಾದ ಶ್ರೀಮತಿ ಸ್ವಪ್ನಚಂದ್ರ ಶೆಟ್ಟಿ, ಸ್ಥಳೀಯ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾದ ಶ್ರೀ ಶಾಂತೇಶ್ ಹಾಗೂ ಸ್ಥಳೀಯ ಸಮಿತಿಯ ಸದಸ್ಯರುಗಳು ಭಾಗವಹಿಸಿದ್ದರು.



ಸೋಮನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಸಾಮಾನ್ಯ ಮೀಸಲು ಸ್ಥಾನದ ಅಭ್ಯರ್ಥಿಗಳಾದ ಕೃಷ್ಣಪ್ಪ, ಚೆನ್ನಕೇಶವ ಮೂರ್ತಿ, ಚಂದ್ರಶೇಖರ ಮೂರ್ತಿ(ಚಂದ್ರಿ), ನಾಗರಾಜ ರಾವ್. ಎಸ್, ಶಾಂತರಾಜು, ಪದ್ಮ ಹಾಗೂ ಸರೋಜ, ನಾಗಪ್ಪ ಸಬಗೇಗೌಡ. ಹೆಚ್, ಕಲಾವತಿ ಹಾಗೂ ದೇವಮ್ಮ ಅವರು ಗೆಲುವು ಸಾಧಿಸಿದ್ದಾರೆ.

# 21ರಂದು ಮಲೆಮಹದೇಶ್ವರಬೆಟ್ಟದಲ್ಲಿ ರಾಜ್ಯಮಟ್ಟದ ಜಾನಪದ ಜಾತ್ರೆ

**ಚಾಮರಾಜನಗರ:** ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ವಿಶೇಷ ಘಟಕ ಉಪಯೋಜನೆಯಡಿ ವಿವಿಧ ಪ್ರಕಾರದ ಜಾನಪದ ಕಲೆಗಳ ಪ್ರದರ್ಶನವಾದ 'ಜಾನಪದ ಜಾತ್ರೆ' ರಾಜ್ಯಮಟ್ಟದ ಕಾರ್ಯಕ್ರಮವನ್ನು ಇದೇ ಫೆಬ್ರವರಿ 21ರಂದು ಜಿಲ್ಲೆಯ ಪ್ರಸಿದ್ಧ ಧಾರ್ಮಿಕ ಕ್ಷೇತ್ರ ಮಲೆ ಮಹದೇಶ್ವರಬೆಟ್ಟದಲ್ಲಿ ಆಯೋಜಿಸಿದ್ದು, ಇದಕ್ಕೆ ಸಕಲ ಸಿದ್ಧತೆ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಸೂಚಿಸಿದ್ದಾರೆ.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಜಾನಪದ ಜಾತ್ರೆ ರೂಪುರೇಷಗಳ ಸಂಬಂಧ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರಿಶಿಷ್ಟ ಜಾತಿ ಸಮುದಾಯದಲ್ಲಿ ಇರುವ ಕಲೆಗಳನ್ನು ಪುನಶ್ಚೇತನಗೊಳಿಸಿ ಮತ್ತು ಜಾನಪದ ಕಲೆಗಳನ್ನು ಉಳಿಸಿ ಬೆಳೆಸುವ ಸಲುವಾಗಿ ಜಾನಪದ ಜಾತ್ರೆ ಶೀರ್ಷಿಕೆಯಡಿಯಲ್ಲಿ ರಾಜ್ಯ ಸರ್ಕಾರ ವಿವಿಧ ಪ್ರಕಾರದ ಜಾನಪದ ಕಲೆಗಳನ್ನು ಒಂದೇ ಸೂರಿನಡಿ ತಂದು ಕಲಾವಿದರಿಗೆ ವೇದಿಕೆ ಕಲ್ಪಿಸಿಕೊಡುವುದು ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದರು.

ರಾಜ್ಯಮಟ್ಟದ ಜಾನಪದ ಜಾತ್ರೆ ಕಾರ್ಯಕ್ರಮ ಆಯೋಜನೆಗೆ ಮಲೆ ಮಹದೇಶ್ವರಬೆಟ್ಟವನ್ನು ಆಯ್ಕೆ ಮಾಡಿಕೊಳ್ಳಲಾಗಿದ್ದು ಜಿಲ್ಲೆಗೆ ಈ ಅವಕಾಶ ದೊರೆತಿರುವುದನ್ನು ಸದುಪಯೋಗಪಡಿಸಿಕೊಳ್ಳಬೇಕು. ರಾಜ್ಯದ ವಿವಿಧ ಜಾನಪದ ಕಲಾತಂಡಗಳನ್ನು ಗುರುತಿಸಿ 40 ರಿಂದ 45 ವಿವಿಧ ಕಲಾ ಪ್ರಕಾರಗಳ ತಂಡಗಳಿಗೆ ತರಬೇತಿ ಮತ್ತು ಪ್ರದರ್ಶನಕ್ಕೆ ಅವಕಾಶವಾಗುತ್ತಿದೆ ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಜಾನಪದ ಜಾತ್ರೆ ಕಾರ್ಯಕ್ರಮ ಮಲೆಮಹದೇಶ್ವರ ಬೆಟ್ಟದ ರಂಗಂದಿರದಲ್ಲಿ ಫೆಬ್ರವರಿ 21ರಂದು ಸಂಜೆ ನಿಗದಿಯಾಗಿದೆ. ಚಾಮರಾಜನಗರ ಜಿಲ್ಲೆಯ ಜಾನಪದ ಕಲಾವಿದರಿಗೂ ಹೆಚ್ಚಿನ ಅವಕಾಶ ಹಾಗೂ ಆದ್ಯತೆ ನೀಡಬೇಕು. ರಾಜ್ಯದ ವಿವಿಧ ಭಾಗಗಳಿಂದ ಅಂದಾಜು 500 ಕಲಾವಿದರು ಭಾಗವಹಿಸುವ ನಿರೀಕ್ಷೆಯಿದೆ. ಈ ಎಲ್ಲ ಕಲಾವಿದರಿಗೆ ವಾಸ್ತವ್ಯ, ಊಟ ಉಪಹಾರ ಸೇರಿದಂತೆ ಎಲ್ಲ ಅಗತ್ಯ ಸೌಕರ್ಯಗಳನ್ನು ಅಚ್ಚುಕಟ್ಟಾಗಿ ಒದಗಿಸಬೇಕೆಂದು ಜಿಲ್ಲಾಧಿಕಾರಿಯವರು ಸೂಚಿಸಿದರು.

ಕಲಾ ಪ್ರದರ್ಶನಕ್ಕೆ ಬೃಹತ್ ವೇದಿಕೆ, ಉತ್ತಮ ಧ್ವನಿ, ಬೆಳಕು, ವಿನ್ಯಾಸ ಇರಬೇಕು. ಎಲ್ಲವು ಗುಣಮಟ್ಟದ್ದಾಗಿರಬೇಕು. ಕಲಾವಿದರು ಪ್ರದರ್ಶನ ನೀಡಿದ 24 ಗಂಟೆಯೊಳಗೆ ಸಂಭಾವನೆ ಕಲಾವಿದರ ಬ್ಯಾಂಕ್ ಖಾತೆಗೆ ಜಮೆಯಾಗಬೇಕು. ಕಲಾ ಪ್ರದರ್ಶನ ಹಾಗೂ ತಾಲೀಮಿಗಾಗಿ ಕಲಾವಿದರು ಮುಂಚಿತವಾಗಿಯೇ ಆಗಮಿಸಲಿದ್ದಾರೆ. ಇದಕ್ಕೂ ಸೂಕ್ತ ಏರ್ಪಾಡು ಮಾಡಬೇಕು ಎಂದರು.




ಜಾನಪದ ಜಾತ್ರೆ ಸುಸೂತ್ರವಾಗಿ ನಡೆಯಲು ವಿವಿಧ ಸಮಿತಿಗಳನ್ನು ನೇಮಕ ಮಾಡಿ ಜವಾಬ್ದಾರಿ ನೀಡಲಾಗುತ್ತದೆ. ಶಿಷ್ಟಾಚಾರದ ಪ್ರಕಾರ ಆಹ್ವಾನ ಪತ್ರಿಕೆ ಮುದ್ರಣ ಇನ್ನಿತರ ಪ್ರಕ್ರಿಯೆಗಳು ಕೈಗೊಳ್ಳಬೇಕಿದೆ. ಯಾವುದೇ ಗೊಂದಲಕ್ಕೆ ಅವಕಾಶವಾಗದಂತೆ ಸಾಕಷ್ಟು ಮುಂಚಿತವಾಗಿಯೇ ಎಲ್ಲ ಸಿದ್ದತೆಗಳನ್ನು ಮಾಡಿಕೊಳ್ಳಬೇಕು. ರಾಜ್ಯಮಟ್ಟದ ಜಾನಪದ ಜಾತ್ರೆ ಯಶಸ್ವಿಗೊಳಿಸಲು ಹೊಣೆಗಾರಿಕೆಯಿಂದ ಕಾರ್ಯನಿರ್ವಹಿಸಿ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಮಲೈಮಹದೇಶ್ವರ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಎ.ಈ ರಘು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮೈಸೂರು ವಿಭಾಗದ ಜಂಟಿ ನಿರ್ದೇಶಕರಾದ ವಿ.ಎನ್. ಮಲ್ಲಿಕಾರ್ಜುನಸ್ವಾಮಿ, ಚಾಮರಾಜನಗರ ಜಿಲ್ಲೆಯ ಸಹಾಯಕ ನಿರ್ದೇಶಕರಾದ ಉದಯ್ ಕುಮಾರ್, ಜಾನಪದ ಜಾತ್ರೆ ಕಾರ್ಯಕ್ರಮದ ಪ್ರಧಾನ ನಿರ್ದೇಶಕರಾದ ಕುಂತೂರು ಕುಮಾರ್, ನಿರ್ದೇಶಕರಾದ ಹನುಮಂತನಾಯಕ, ಸಂಚಾಲಕರಾದ ಡಾ. ಸಬ್ಬನಹಳ್ಳಿ ರಾಜು, ಕೆ. ನಾಗರಾಜು, ಹೆಚ್.ಸಿ. ನಿಂಗರಾಜು, ಬಿ. ಅನಿಲ್ ಕುಮಾರ್, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಯೋಗಾನಂದ್, ಹನೂರು ತಹಶೀಲ್ದಾರ್ ಗುರುಪ್ರಸಾದ್, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ್, ಇನ್ನಿತರ ಅಧಿಕಾರಿಗಳು ಇದ್ದರು.

## ಜಮೀನಿನ ಅಕ್ರಮ ಸುಳ್ಳು ದಾಖಲೆ ಸೃಷ್ಟಿ; ವಜಾಗೊಳಿಸುವಂತೆ ಮನವಿ

**ದೇವನಹಳ್ಳಿ:** ತಾಲೂಕಿನಚನ್ನರಾಯಪಟ್ಟಣ ಹೋಬಳಿಯ ಮಲ್ಲೇಪುರಗ್ರಾಮದ ಸರ್ವೆ ನಂಬರ್ 50 /ಪಿ1 ,16 ಎಕರೆ 34 ಗುಂಟೆಜಮೀನಿಗೆ ಸಂಬಂಧಿಸಿದಂತೆ ಅಕ್ರಮವಾಗಿ ಸುಳ್ಳು ದಾಖಲೆಗಳನ್ನು ಸೃಷ್ಟಿಸಿಕೊಂಡು ಅಲ್ಲಿನ ಮೂಲ ನಿವಾಸಿಗಳು ಬದುಕುಕಟ್ಟಿಕೊಂಡಿದ್ದ ಪ್ರದೇಶ ಈಗ ಬೆಲೆ ಜಾಸ್ತಿಯಾಗಿದೆ ಎಂಬ ಕಾರಣಕ್ಕೆ ಅಧಿಕಾರಿಗಳೊಂದಿಗೆ ಶಾಮಿಲ್ ಆಗಿ ಕೆಲವು ವ್ಯಕ್ತಿಗಳ ಹೆಸರಿಗೆ ಮಾಡಿರುವುದು ಅಕ್ಷೇಪಾರ್ಹ 16.34 ಗುಂಟೆ ಜಮೀನಿನ ಅಕ್ರಮದಾಖಲೆ ಸೃಷ್ಟಿ ಮಾಡಿರುವುದು ವಜಾ ಮಾಡುವಂತೆ ಬಹುಜನ ಸಮಾಜ ಪಕ್ಷದ ಪ್ರಧಾನ ಕಾರ್ಯದರ್ಶಿ ಎಚ್. ನರಸಿಂಹಯ್ಯ ಆಗ್ರಹಿಸಿದರು .



ಪಟ್ಟಣದ ಪಟ್ಟಣದ ಪ್ರವಾಸಿಮಂದಿರದಲ್ಲಿ ಮಲ್ಲೇಪುರಗ್ರಾಮಸ್ಥರು ಮತ್ತು ಬಿಎಸ್ ಪಿ ಪಕ್ಷದ ಸಹಯೋಗದೊಂದಿಗೆ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ 1980 ರಿಂದಇದುವರೆಗೂ ಉಳಿಮೆ ಮಾಡಿಕೊಂಡುಜೀವನ ನಡೆಸುತ್ತಿರುವ ಭೂ ಸ್ವಾಧೀನಾಭವದಲ್ಲಿರುವ ಬಡ ಕುಟುಂಬಗಳಿಗೆ ಅನ್ಯಾಯ ಮಾಡುತ್ತಿರುವುದು ಸರಿಯಲ್ಲ, ಸುಪ್ರೀಂಕೋರ್ಟ್ ನಲ್ಲಿ ಜಿಲ್ಲಾಧಿಕಾರಿಗಳಿಗೆ ನೈಜತೆಯನ್ನು ಪರಿಶೀಲಿಸುವಂತೆ ಆದೇಶಿಸಲಾಗಿದೆ ಎಂದು ತಿಳಿಸಿದರು.

ಪಕ್ಷಾತೀತವಾಗಿ ಸ್ವಾಧೀನಅನುಭವ ದಲ್ಲಿರುವ ವ್ಯಕ್ತಿಗಳಿಗೆ ಜಮೀನನ್ನುಕೊಡ ಬೇಕುಇಲ್ಲವೇಊರಿಗೆ ಅವಶ್ಯಕತೆಗಳಾದ ಸರ್ಕಾರಿ ಶಾಲೆ,ಆಸ್ಪತ್ರೆ ಸೇರಿದಂತೆ ಸರ್ಕಾರಿ ಕಟ್ಟಡಗಳಿಗೆ ನೀಡಬೇಕುಅದನ್ನು ಹೊರತುಪಡಿಸಿ ಕೆಲವೇ ವ್ಯಕ್ತಿಗಳಿಗೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ನೀಡುವುದು ಸರಿಯಲ್ಲ ಹಾಗೂ ಜಾತಿಧರ್ಮ ಭೇದವಿಲ್ಲದೆ ಸ್ಥಳೀಯರಿಗೆ ಭೂಮಿಯನ್ನು ನೀಡಬೇಕುಇಲ್ಲವಾದಲ್ಲಿ ನಮ್ಮ ಭೂಮಿ ನಮ್ಮ ಹಕ್ಕು ಗ್ರಾಮಸ್ಥರ ಸಮ್ಮುಖದಲ್ಲಿಉಗ್ರ ಹೋರಾಟ ಮಾಡಲಾಗುವುದುಎಂದು ಎಚ್ಚರಿಸಿದರು. ಇದೇ ಸಂದರ್ಭದಲ್ಲಿ ಬಹುಜನ ಸಮಾಜ ಪಕ್ಷದ ಕಾರ್ಯದರ್ಶಿ ಬಂಗಾರಪ್ಪ ,ತಾಲೂಕುಅಧ್ಯಕ್ಷರಾಮಾಂಜಿನಪ್ಪ ,ವಕೀಲರಾದ ವೈ.ಡಿಜಯರಾಜ್, ಮಲ್ಲೇಪುರಗ್ರಾಮಸ್ಥರಾದ ಮುನಿಶಾಮಪ್ಪ ಮತ್ತು ಮುನಿರಾಜು ,ಮುಖಂಡರುಗಳಾದ ಎಂ. ಶ್ರೀನಿವಾಸ್, ಎಂ.ಎಸ್. ಶ್ರೀನಿವಾಸ್, ರಮೇಶ್ ಸೇರಿದಂತೆ ಮಲ್ಲೇಪುರಗ್ರಾಮಸ್ಥರು ಭಾಗಿಯಾಗಿದ್ದರು.

## ಮನೆಯಲ್ಲಿ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿ

**ಶಿಡ್ಲಘಟ್ಟ:** ಮಗುವಿನ ಶಿಕ್ಷಣ ಮನೆಯಿಂದಲೇ ಆರಂಭವಾಗುತ್ತದೆ ಹಾಗಾಗಿ ಮನೆಯಲ್ಲಿ ಪಾಲಕರು ಮಕ್ಕಳಿಗೆ ಉತ್ತಮ ಸಂಸ್ಕಾರ ರೂಪಿಸುವಂತಹ ವಾತಾವರಣ ನಿರ್ಮಿಸಬೇಕು ಎಂದು ಚಿಕ್ಕಬಳ್ಳಾಪುರ ಆದಿಚುಂಚನಗಿರಿ ಶಾಖಾ ಮಠದ ಶ್ರೀಮಂಗಳನಾಥ ಸ್ವಾಮೀಜಿ ತಿಳಿಸಿದರು.

ನಗರದ ಹೊರವಲಯದಲ್ಲಿರುವ ಬಿಜಿಎಸ್ ಪಬ್ಲಿಕ್ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಯುಕೆಜಿ ಮಕ್ಕಳ ಗ್ರಾಜುಯೇಷನ್ ಡೇ (ಪದವಿ ಪ್ರದಾನ) ಹಾಗೂ ಸ್ವಸ್ತಿ ಮಾತಾ ಪಿತೃ ವಂದನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಕ್ಕಳಿಗೆ ಶಿಕ್ಷಣದ ಜತೆಗೆ ಧರ್ಮ ಹಾಗೂ ಸಂಸ್ಕಾರದ ಜ್ಞಾನ ನೀಡಬೇಕು ಬಾಲ್ಯದಲ್ಲಿ ಕಲಿತದ್ದು, ಕಟ್ಟಡಕ್ಕೆ ಅಡಿಪಾಯದಂತೆ ಭವಿಷ್ಯದಲ್ಲಿ ನೆರವಾಗುತ್ತದೆ ಎಂದು ಹೇಳಿದರು.

ಪ್ರತಿಯೊಂದು ಮಗುವಿನಲ್ಲಿಯೂ ತನ್ನದೇ ಆದ ಪ್ರತಿಭೆಯಿರುತ್ತದೆ ಆ ಪ್ರತಿಭೆಯನ್ನು ಉತ್ತಮ ದಾರಿ ಹಾಗೂ ಸನ್ಮಾರ್ಗದಲ್ಲಿ ಹೊರ ತೆಗೆದಾಗ ಅಂತಹ ಮಗು ದೇಶದ ಉತ್ತಮ ಪ್ರಜೆಯಾಗಿ ರೂಪುಗೊಳ್ಳಲು ಸಾಧ್ಯ ಎಂದರು.




ಬಿಜಿಎಸ್ ವಿದ್ಯಾಸಂಸ್ಥೆ ಆಡಳಿತಾಧಿಕಾರಿ ಎನ್. ಶಿವರಾಮರೆಡ್ಡಿ ಮಾತನಾಡಿ,ಮಕ್ಕಳನ್ನು ಸಂಸ್ಕಾರವಂತರನ್ನಾಗಿಸುವ ಹಾಗೂ ದೇಶದ ಯಾವುದೇ ಸ್ಥಳದಲ್ಲಾದರೂ ಮಕ್ಕಳು ಪ್ರತಿಭೆ ಪ್ರದರ್ಶಿಸುವಂತಹ ಸಾಮರ್ಥ್ಯವುಳ್ಳವರನ್ನಾಗಿ ಮಾಡುವ ಧೈಯವನ್ನು ನಮ್ಮ ಸಂಸ್ಥೆ ಹೊಂದಿದ್ದು ಮಕ್ಕಳ ಸರ್ವತೋಮುಖ ಬೆಳವಣಿಗೆಯಲ್ಲಿ ಶಿಕ್ಷಕರ ಹಾಗೂ ಪಾಲಕರ ಪಾತ್ರ ಮಹತ್ತರವಾಗಿದೆ ಹಾಗಾಗಿ ಮಕ್ಕಳ ಶೈಕ್ಷಣಿಕ ಬೆಳವಣಿಗೆಗೆ ಪೂರಕವಾಗಿರುವ ಸಹಕಾರವನ್ನು ಪಾಲಕರು ಶಿಕ್ಷಕರಿಗೆ ನೀಡಬೇಕು ಎಂದರು.

ನಗರದ ಸಾರ್ವಜನಿಕ ಆಸ್ಪತ್ರೆಯ ಆಯುಷ್ ವೈದ್ಯ ಡಾ.ವಿಜಯ್ ಮಾತನಾಡಿ, ಪಾಲಕರು ಮಕ್ಕಳಿಗೆ ಚಿಕ್ಕಂದಿನಿಂದಲೇ ಸಹನೆ ಕಲಿಸಬೇಕು, ಹೆತ್ತವರಿಗಿಂತ ಮಿಗಿಲಾದ ದೇವರಿಲ್ಲ ಪ್ರತಿಯೊಬ್ಬ ಮಗುವೂ ಪಾಲಕರನ್ನು ಗೌರವಿಸುವುದನ್ನು ರೂಢಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ಈ ವೇಳೆ ನರ್ಸರಿ ವ್ಯಾಸಂಗ ಪೂರ್ಣಗೊಳಿಸಿದ ಯುಕೆಜಿ ಮಕ್ಕಳು ಗಣ್ಯರಿಂದ ಪದವಿ ಸ್ವೀಕರಿಸಿದರು. ಪುಟಾಣಿಗಳು ವಿವಿಧ ನೃತ್ಯ ಮಾಡುವುದರೊಂದಿಗೆ ಪಾಲಕರು ಹಾಗೂ ಶಿಕ್ಷಕರನ್ನು ಮನರಂಜಿಸಿದರು. ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳು ಪಾಲಕರಿಗೆ ಪಾದ ತೊಳೆದು, ಪುಷ್ಪ ಸಮರ್ಪಿಸಿ ನಮಸ್ಕರಿಸಿದರು.

ಈ ಸಂದರ್ಭದಲ್ಲಿ ಬಿಜಿಎಸ್ ಪಬ್ಲಿಕ್ ಶಾಲೆಯ ಪ್ರಾಂಶುಪಾಲ ಕೆ.ಮಹದೇವ್,ಮುಖಂಡರಾದ ಬಿ.ನಾರಾಯಣಸ್ವಾಮಿ, ಜೆ.ವಿ.ವೆಂಕಟಸ್ವಾಮಿ, ದೇವರಾಜ್ ಮುಂತಾದವರು ಹಾಜರಿದ್ದರು.

## ಕಪಿಲಮ್ಮ ಸಂಯುಕ್ತ ಕಾಲೇಜಿಗೆ ಅತ್ಯುತ್ತಮ ಶ್ರೇಣಿ

**ಶಿಡ್ಲಘಟ್ಟ:** ಜೆಇಇ ಮೇನ್ಸ್ 1ರ ಫಲಿತಾಂಶ ಪ್ರಕಟವಾಗಿದ್ದು ತಾಲ್ಲೂಕಿನ ನಡಿಪಿನಾಯಕನಹಳ್ಳಿಯ ಕಪಿಲಮ್ಮ ಸಂಯುಕ್ತ ಪದವಿ ಪೂರ್ವಕಾಲೇಜಿನ ವಿದ್ಯಾರ್ಥಿಗಳು ಅತ್ಯುತ್ತಮ ಶ್ರೇಣಿ ಗಳಿಸಿದ್ದಾರೆ.





ಎಂ.ಪ್ರಜ್ವಲ್ (96.78 ಪರ್ಸಂಟೈಲ್) ಅಂಕಗಳನ್ನು ಪಡೆದಿದ್ದು ತಾಲ್ಲೂಕಿಗೆ ಪ್ರಥಮ ಸ್ಥಾನ ಪಡೆದಿದ್ದಾನೆ.

ಎಸ್.ಆರ್.ಮೋಹನ್ (95.96 ಪರ್ಸಂಟೈಲ್) ಅಂಕಗಳನ್ನು ಪಡೆದಿದ್ದು ತಾಲ್ಲೂಕಿಗೆ ದ್ವಿತೀಯ ಸ್ಥಾನ ಪಡೆದಿದ್ದಾನೆ.

ಸಹನಾ (61.02),ಬಿ.ವಿ.ಚಂದನ (52.32) ಪರ್ಸಂಟೈಲ್ ಅಂಕಗಳನ್ನು ಗಳಿಸಿ ಅರ್ಹತೆ ಪಡೆದಿದ್ದಾರೆ.

## ಫೆ.20ರಂದು ದೇವಸ್ಥಾನದ ಗೋಲಕ ಹಣ ಎಣಿಕೆ

**ಚಾಮರಾಜನಗರ:** ಮಲೆ ಮಹದೇಶ್ವರ ಬೆಟ್ಟದ ಮಲೆ ಮಹದೇಶ್ವರಸ್ವಾಮಿ ದೇವಸ್ಥಾನದ ಗೋಲಕಗಳ ಎಣಿಕೆ ಕಾರ್ಯವು ಬೆಟ್ಟದ ಬಸ್ ನಿಲ್ದಾಣದಲ್ಲಿರುವ ವಾಣಿಜ್ಯ ಸಂಕೀರ್ಣ ಕಟ್ಟಡದ ಮೊದಲ ಮಹಡಿಯ ವಿಶ್ರಾಂತಿ ಗೃಹದಲ್ಲಿ ಫೆಬ್ರವರಿ 20ರಂದು ಬೆಳಿಗ್ಗೆ ನಡೆಯಲಿದೆ.

ಗೋಲಕಗಳಲ್ಲಿ ಸಂಗ್ರಹವಾಗಿರುವ ಹಣವನ್ನು ಸೂಕ್ತ ಪೊಲೀಸ್ ಬಂದೋಬಸ್ತೊಂದಿಗೆ ತೆರೆದು ಕೊಳ್ಳೇಗಾಲದ ಬ್ಯಾಂಕ್ ಆಫ್ ಬರೋಡ ಶಾಖೆಯ ಸಿಬ್ಬಂದಿ ಸಹಯೋಗದೊಂದಿಗೆ ಎಣಿಕೆ ಕಾರ್ಯವನ್ನು ನಡೆಸಲಾಗುವುದು ಎಂದು ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 6ನೇ ತರಗತಿ ಪ್ರವೇಶಕ್ಕೆ ಅರ್ಜಿ

**ಚಾಮರಾಜನಗರ:** ಚಾಮರಾಜನಗರ ತಾಲೂಕಿನ ಆದರ್ಶ ವಿದ್ಯಾಲಯದಲ್ಲಿ 2025–26ನೇ ಸಾಲಿನ 6ನೇ ತರಗತಿ ಪ್ರವೇಶಕ್ಕೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ತಾಲ್ಲೂಕಿನ ಸರ್ಕಾರಿ, ಅನುದಾನಿತ, ಅನುದಾನರಹಿತ ಶಾಲೆಯಲ್ಲಿ 2024–25ನೇ ಸಾಲಿನಲ್ಲಿ 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಮಾಡುತ್ತಿರುವ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಅರ್ಜಿ ಸಲ್ಲಿಸಬಹುದು.

ಬೇರೆ ತಾಲ್ಲೂಕಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಅರ್ಜಿ ಸಲ್ಲಿಸಲು ಬಯಸಿದ್ದಲ್ಲಿ ಇದೇ ತಾಲ್ಲೂಕಿನಲ್ಲಿ ವಾಸವಿರುವ ಬಗ್ಗೆ ಕಂದಾಯ ಇಲಾಖೆಯಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರ ಸಲ್ಲಿಸುವುದು ಕಡ್ಡಾಯವಾಗಿದೆ.

ಮೀಸಲಾತಿಯನ್ನು ಪಡೆಯುವ ವಿದ್ಯಾರ್ಥಿಗಳು ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ಆರ್.ಡಿ ಸಂಖ್ಯೆಯನ್ನು ನಮೂದಿಸಬೇಕು. ವಿಶೇಷಚೇತನ ವಿದ್ಯಾರ್ಥಿಗಳು ಸಕ್ಷಮ ಪ್ರಾಧಿಕಾರಗಳಿಂದ ಪಡೆದಿರುವ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವಾಗ ಅಪ್ ಲೋಡ್ ಮಾಡಬೇಕಿದೆ. ಪ್ರವೇಶ ಪರೀಕ್ಷೆ ಮಾರ್ಚ್ 23ರಂದು ನಡೆಯಲಿದೆ.

ಅರ್ಜಿ ಸಲ್ಲಿಕೆಗೆ https://schooleducation.kar.nic.in ಅಥವಾ https://vidyavahini.kar.nic.in ವೆಬ್‌ಸೈಟ್ ಬಳಸಬಹುದಾಗಿದೆ. ಅರ್ಜಿ ಸಲ್ಲಿಸಲು ಫೆ.28 ಕಡೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಆದರ್ಶ ವಿದ್ಯಾಲಯದ ಮುಖ್ಯಶಿಕ್ಷಕರಾದ ಆರ್. ಲಿಂಗರಾಜು (ಮೊ.ಸಂ 8217008446) ಅವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ರಾಷ್ಟ್ರೀಯ ಲೋಕ ಅದಾಲತ್ ಅವಕಾಶ ಸದುಪಯೋಗಪಡಿಸಿಕೊಳ್ಳಿ

**ನಾಗಮಂಗಲ:** ಸಾರ್ವಜನಿಕರು ನ್ಯಾಯಾಲಯದ ವ್ಯಾಪ್ತಿಯಲ್ಲಿ ಮಾ.8ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗುತ್ತಿದ್ದು ಇದರ ಸದುಪಯೋಗಪಡಿಸಿಕೊಳ್ಳಬೇಕೆಂದು ಸಿವಿಲ್ ನ್ಯಾಯಾಧೀಶರಾದ ಯೋಗೇಶ್ ತಿಳಿಸಿದ್ದಾರೆ.

ನಾಗಮಂಗಲ ಪಟ್ಟಣದ ನ್ಯಾಯಾಲಯದ ಕಚೇರಿಯಲ್ಲಿ ಅವರು ರಾಷ್ಟ್ರೀಯ ಲೋಕ ಅದಾಲತ್ ಪೂರ್ವಭಾವಿ ಸಭೆಯ ಪತ್ರಿಕಾಗೋಷ್ಠಿ ನಡೆಸಿದರು.

ಸಾರ್ವಜನಿಕರು ತಮ್ಮ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಪರಿಹರಿಸಿಕೊಳ್ಳಬಹುದು ಇದರಿಂದ ಹಣ ಮತ್ತು ಸಮಯ ಎಲ್ಲವೂ ಉಳಿಯುವುದರಿಂದ ನ್ಯಾಯದಾನದ ಸಮಯವು ಕಡಿಮೆಯಾಗುತ್ತದೆ. ಈ ರೀತಿ ಹಲವಾರು ಪ್ರಕರಣಗಳನ್ನು ಪರಿಹರಿಸಲಾಗುವುದು ಎಂದು ಭರವಸೆ ವ್ಯಕ್ತಪಡಿಸಿದರು.




ಅದಾಲತ್ ನಲ್ಲಿ ಸಮಸ್ಯೆ ಪರಿಹರಿಸಿಕೊಂಡರೆ ಸಂಕಷ್ಟಕ್ಕೆ ಸಿಲುಕಿದ ಜನರ ಹಣ, ಮೋಟಾರು ವಾಹನದ ಅಪಘಾತ ಪರಿಹಾರ ಪ್ರಕರಣಗಳು, ಭೂಸ್ವಾಧೀನ, ಬ್ಯಾಂಕುಗಳಿಗೆ ಸಂಬಂಧಿಸಿದ ಪ್ರಕರಣಗಳು, ರಾಜಿಯಾಗಬಲ್ಲ ಅಪರಾಧ ಪ್ರಕರಣಗಳು, ಆಸ್ತಿ ವಿಭಾಗ ಇತರ ಸಿವಿಲ್ ಪ್ರಕರಣಗಳು ಹಾಗೂ ರಾಜ್ಯ ಪೂರ್ವ ಪ್ರಕರಣಗಳಾದ ಬ್ಯಾಂಕ್ ಗಳಿಗೆ ಸಂಬಂಧಿಸಿದ ಪ್ರಕರಣಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳಿಗೆ ಸಂಬಂಧಿಸಿದ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಬಹುದಾಗಿದೆ ಎಂದು ವಿವರಿಸಿದರು.


ಈ ಪ್ರಕರಣಗಳಿಂದ ಜನರ ವ್ಯವಹಾರ ಮತ್ತು ಉತ್ತಮ ಬಾಂಧವ್ಯ ಉಳಿಯ ಬೇಕೆನ್ನುವ ಹಾಗೂ ಇಂತಹ ಅನೇಕ ಪ್ರಕರಣಗಳನ್ನು ಬಗೆಹರಿಸುವ ಪ್ರಯತ್ನ ಮುಖ್ಯ ಉದ್ದೇಶವಾಗಿದೆ ಎಂದು ಈ ಸಂದರ್ಭದಲ್ಲಿ ತಿಳಿಸಿದರು.

ಪೂರ್ವಭಾವಿ ಸಭೆಯ ಘನ ಅಧ್ಯಕ್ಷತೆಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶ್ರೀ ನರಸಿಂಹಮೂರ್ತಿ, ಶ್ರೀ ಶಿವರಾಜು ಎಚ್ ಎಸ್, ಸಿವಿಲ್ ನ್ಯಾಯಾಧೀಶರು, ಸಿದ್ದಪ್ಪಾಜಿ ಕೆ ಪಿ ಸಿವಿಲ್ ನ್ಯಾಯಾಧೀಶರು, ತಾಲೂಕು ದಂಡಾಧಿಕಾರಿಗಳಾದ ಜಿ.ಆದರ್ಶ, ಸಿಪಿಐ ನಿರಂಜನ್, ಪಟ್ಟಣ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಶಿವಕುಮಾರ್, ಪಿಎಸ್ಐ ಗಳಾದ ವೈ. ಎನ್.ರವಿಕುಮಾರ್, ರಾಜೇಂದ್ರ, ಮಾರುತಿ, ಅನ್ನಪೂರ್ಣ, ಬಿಇಓ ಯೋಗೇಶ್ ಕಾರ್ಮಿಕ ನಿರೀಕ್ಷಿತ ಎನ್.ಟಿ.ಶಿವಕುಮಾರ್, ಸಹಾಯಕ ಸರ್ಕಾರಿ ಅಭಿಯೋಜಕ ಟಿ.ಆರ್.ಶ್ರೀದೇವಿ, ಅರುಣಾಬಾಯಿ, ವಲಯ ಅರಣ್ಯಾಧಿಕಾರಿ ಸಂಪತ್ ಪಾಟೀಲ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಬ್ಯಾಂಕ್ ಅಧಿಕಾರಿಗಳು ಉಪಸ್ಥಿತರಿದ್ದರು.

## ಹಿಂದುಳಿದ ಜನಾಂಗಗಳ ನೂತನ ಒಕ್ಕೂಟ ರಚನೆ

**ಕೊರಟಗೆರೆ:** ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ಆಯೋಜಿಸಲಾಗಿದ್ದ ಅಲೆಮಾರಿ ಅರೆ ಅಲೆಮಾರಿ ಪ್ರವರ್ಗ–1 ಎಲ್ಲಾ ಉಪ ಜಾತಿಗಳ ಸದಸ್ಯರನ್ನು ಒಳಗೊಂಡು ನೂತನ ಪದಾಧಿಕಾರಿಗಳ ಆಯ್ಕೆಯನ್ನು ರಾಜ್ಯದ ಗೌರವಾಧ್ಯಕ್ಷ ರವೀಂದ್ರ ಶೆಟ್ಟಿ ರವರ ಆದೇಶದ ಮೇರೆಗೆ ಮಾಡಲಾಯಿತು.

ನೂತನ ತಾಲೂಕು ಒಕ್ಕೂಟದ ಅಧ್ಯಕ್ಷರಾಗಿ ಆಯ್ಕೆಯದ ಅಧ್ಯಕ್ಷರಾದ ಜಿ.ಎ ಹನುಮಯ್ಯ ಮಾತನಾಡಿ, ನಮ್ಮ ಅಲೆಮಾರಿ ಅರೆ ಅಲೆಮಾರಿ ಜನಾಂಗದ ಸಮುದಾಯದ ಜನರು ಬಹಳಷ್ಟು ಕಷ್ಟದಲ್ಲಿದ್ದಾರೆ ಪ್ರತಿ ರಂಗದಲ್ಲೂ ನಮ್ಮ ಜನಾಂಗ ಬಹಳಷ್ಟು ಹಿಂದೆ ಉಳಿದಿದೆ ಆದ್ದರಿಂದ ಇನ್ನು ಮುಂದಾದರೂ ನಮ್ಮ ಪ್ರವರ್ಗ–1 ಜನಾಂಗದ ಒಕ್ಕೂಟವು 46 ಜಾತಿಗಳನ್ನು ಒಳಗೊಂಡಿದೆ ಈ ಎಲ್ಲಾ ಜಾತಿಯ ಜನರು ಹಿಂದೂ ಶೈಕ್ಷಣಿಕ ರಾಜಕೀಯ ಹಾಗೂ ಆರ್ಥಿಕವಾಗಿ ಅತ್ಯಂತ ಹಿಂದುಳಿದಿದೆ ಸರ್ಕಾರದ ಯಾವುದೇ ಸವಲತ್ತುಗಳು ಸರಿಯಾಗಿ ಸಿಗದೇ ವಂಚಿತರಾಗಿರುವುದು ವಿಷಾದನೀಯ ಆದ್ದರಿಂದ ಈಗಾಗಲೇ ಕರ್ನಾಟಕ ರಾಜ್ಯಾದ್ಯಂತ ಎಲ್ಲಾ ಜಿಲ್ಲೆಗಳಲ್ಲಿ ಒಕ್ಕೂಟಗಳನ್ನು ರಚನೆ ಮಾಡಲಾಗಿದೆ ತುಮಕೂರು ಜಿಲ್ಲೆಯ ದಿನಾಂಕ ಒಕ್ಕೂಟ ರಚನೆ ಮಾಡಬೇಕಾಗಿದೆ ಇದೀಗ ಕೊರಟಗೆರೆ ತಾಲೂಕಿನಲ್ಲಿ ಒಕ್ಕೂಟ ರಚನೆಯಾಗಿದ್ದು ಸಂತಸ ತಂದಿದೆ ತಾಲೂಕಿನಲ್ಲಿ ಒಕ್ಕೂಟದ ಶಕ್ತಿಯನ್ನು ಬಳಸಿಕೊಂಡು ಸರ್ಕಾರದಿಂದ ಸಿಗುವ ನಮ್ಮ ಸಮುದಾಯದ 46 ಜಾತಿಗಳಿಗೆ ಸರ್ಕಾರದ ಎಲ್ಲಾ ಸವಲತ್ತುಗಳನ್ನು ಪಡೆಯಲು ನಾವೆಲ್ಲರೂ ಸಜ್ಜಾಗಬೇಕಿದೆ ಎಂದು ತಿಳಿಸಿದರು.



ನಂತರ ತುಮಕೂರು ಜಿಲ್ಲಾ ಕಾರ್ಯದರ್ಶಿ ಎಂವಿ ಮೂಡ್ಲ ಗಿರೀಶ್ ಮಾತನಾಡಿ :– ನಮ್ಮ ಅಲೆಮಾರಿ ಅರೆ ಅಲೆಮಾರಿ ಜನಾಂಗವು 46 ಉಪಜಾತಿಗಳನ್ನ ಹೊಂದಿದ್ದು ಇಷ್ಟು ಜನಾಂಗವನ್ನು ಹೊಂದಿದ್ದರೂ ಕೂಡ ನಮ್ಮ ಜನಾಂಗವು ಬಹಳಷ್ಟು ಹಿಂದೆ ಉಳಿದಿದೆ ಆದ್ದರಿಂದ ಇನ್ನು ಮುಂದಾದರೂ ನಾವೆಲ್ಲರೂ ಒಗ್ಗಟ್ಟಿನಿಂದ ಹೋರಾಡಿ ಸರ್ಕಾರದಿಂದ ಬರುವ ಸವಲತ್ತುಗಳನ್ನ ಪಡೆಯಬೇಕಾಗಿದೆ ಬನ್ನಿ ಎಲ್ಲರೂ ಸಂಘಟನೆಯೊಂದಿಗೆ ಕೈಜೋಡಿಸಿ ಸಂಘವನ್ನು ಬೆಳೆಸಿ ನಮ್ಮ ಜಾತಿಗಳಿಗೆ ನ್ಯಾಯ ಒದಗಿಸೋಣ.

ಕೊರಟಗೆರೆ ನೂತನ ಕಾರ್ಯದರ್ಶಿಯಾಗಿ ಆಯ್ಕೆಯಾದ ಶ್ರೀನಿವಾಸ್ ಜಿಕೆ ಗಟ್ಲ ಗೊಲ್ಲಹಳ್ಳಿ ಮಾತನಾಡಿ, ನಮ್ಮ ಜನಾಂಗಗಳ ಜನರು ಎಲ್ಲಿಯೇ ಹೋದರು ಅವರನ್ನ ಅಸ್ಪುರುಷರಾಗಿ ನೋಡುತ್ತಾರೆ ನಮಗೂ ಇತರೆ ಜನಾಂಗಗಳಿಗೆ ನೀಡುವ ಸೌಲಭ್ಯದೊಂದಿಗೆ ಸರ್ಕಾರದ ಪ್ರತಿ ಯೋಜನೆಗಳು ನಮಗೂ ಸಿಗುವಂತೆ ಆಗಬೇಕು ಎಲ್ಲ ಇತರ ಜನಗಳಿಗೆ ಸಿಗುವ ರೀತಿ ಸಮಾನತೆ ನಮ್ಮ ಅರೆ ಅಲೆಮಾರಿ ಜನಾಂಗಕ್ಕೂ ಸಿಗಬೇಕು ಇದು ನಮ್ಮ ಎಲ್ಲಾ 46 ಉಪಜಾತಿಗಳ ಪ್ರತಿಯೊಬ್ಬ ಪ್ರಜೆಗೂ ಸಿಗುವಂತೆ ಆಗಬೇಕು ಮುಂದಿನ ದಿನಗಳಲ್ಲಿ ನಮ್ಮ ಸಂಘಟನೆಯು ಎಲ್ಲ ರೀತಿಯಲ್ಲೂ ಸರ್ಕಾರದ ಕಣ್ಣು ತೆರೆಸುವ ಕೆಲಸವನ್ನು ಮಾಡಬೇಕು ಇಂದು ನಮ್ಮ ತಾಲೂಕಿನಲ್ಲಿ ನೂತನ ಸಂಘಟನೆ ರಚನೆಯಾಗಿರುವುದು ನಮ್ಮೆಲ್ಲರಿಗೂ ಸಂತಸದ ವಿಷಯ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಒಕ್ಕೂಟದ ಅಧ್ಯಕ್ಷರಾದ ಮಂಜುನಾಥ್, ಜಿಲ್ಲಾ ಉಪಾಧ್ಯಕ್ಷ ಮಧುಸೂದನ್ ಮಲ್ಲಘಟ್ಟ,ಜಿಲ್ಲಾ ಖಜಾಂಚಿ, ಜಯರಾಮ್, ತಾಲೂಕು ಗೌರವಾಧ್ಯಕ್ಷ ನಾಗರಾಜು ಉಪಾಧ್ಯಕ್ಷ ನಾಗರಾಜು ಬುಕ್ಕಾಪಟ್ಟಣ ತಿಪ್ಪೇಸ್ವಾಮಿ, ಸಿದ್ದೇಗೌಡ, ಸಂಘಟನಾ ಕಾರ್ಯದರ್ಶಿ ವೆಂಕಟೇಶ್ ಯಾದವ್, ರಂಗನಾಥ್, ಕಾಮರಾಜು, ಖಜಂಚಿ ರಾಮಾಂಜನೇಯ ಜಂಪೇನಹಳ್ಳಿ, ನಿರ್ದೇಶಕರಾದ ಗೋಪಾಲ್ ಮುರುಳಿಧರ್ ಭೀಮರಾಜು,ತಿಮ್ಮಯ್ಯ, ಚಿಕ್ಕನಮಯ್ಯ, ಅಂಜನಪ್ಪ, ನರಸಿಂಹಮೂರ್ತಿ, ಕೊರಟಗೆರೆ ಕುಮಾರ್ ನೇಗ್ಲಾಲಾ ಮಂಜುನಾಥ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಕೊಪ್ಪಳ ವಿಶ್ವವಿದ್ಯಾಲಯ ರದ್ದತಿಗೆ ವಿರೋಧ

**ಕೊಪ್ಪಳ:** ಈ ಹಿಂದಿನ ಬಿಜೆಪಿ ಸರ್ಕಾರ ಅಸ್ತಿತ್ವಕ್ಕೆ ಬಂದಿದ್ದ ರಾಜ್ಯದ 10 ಹೊಸ ವಿಶ್ವವಿದ್ಯಾಲಯಗಳಲ್ಲಿ ಕೊಪ್ಪಳ, ಮಂಡ್ಯ, ಹಾಸನ, ಚಾಮರಾಜನಗರ, ಹಾವೇರಿ, ಕೊಡಗು, ಬಾಗಲಕೋಟೆ, ಮಹಾರಾಣಿ ಕ್ಲಸ್ಟರ್, ನೃಪತುಂಗ ವಿಶ್ವವಿದ್ಯಾಲಯಗಳನ್ನು ಮುಚ್ಚುವ ರಾಜ್ಯ ಸರ್ಕಾರದ ಪ್ರಸ್ತಾವನೆಗೆ ಜಿಲ್ಲಾ ಜೆಡಿಎಸ್ ವಕ್ತಾರ ಮಲ್ಲನಗೌಡ ಕೋನನಗೌಡರ್ ವಿರೋಧ ವ್ಯಕ್ತಪಡಿಸಿದ್ದಾರೆ.



ಡಿಕೆ ಶಿವಕುಮಾರ್ ನೇತೃತ್ವದ ಉಪ ಸಮಿತಿಯು ವಿಶ್ವವಿದ್ಯಾಲಯಗಳ ವ್ಯಾಪ್ತಿಗೆ ಒಳಪಡುವ ಸರ್ಕಾರಿ, ಅನುದಾನಿತ ಕಾಲೇಜುಗಳ ಸಂಖ್ಯೆ ಕಡಿಮೆ ಇದೆ ಎನ್ನುವ ಒಂದೇ ಕಾರಣವನ್ನು ಇಟ್ಟುಕೊಂಡು ಮುಚ್ಚುತ್ತಿರುವುದು ಸರಿಯಾದ ಕ್ರಮವಲ್ಲ. ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕ, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಹಾಗೂ ಮಾಜಿ ಉನ್ನತ ಶಿಕ್ಷಣ ಸಚಿವರಾದ ಬಸವರಾಜ ರಾಯರೆಡ್ಡಿಯವರು ಕೊಪ್ಪಳ ವಿಶ್ವವಿದ್ಯಾಲಯ ರದ್ದತಿಯ ಬಗ್ಗೆ ಪ್ರತಿಕ್ರಿಯೆ ಕೊಡಬೇಕು ಎಂದು ಮಲ್ಲನಗೌಡ ಹೇಳಿದರು. ರಾಯರಡ್ಡಿ ಅವರು ಈ ಹಿಂದೆ ಅನೇಕ ಸಮಾರಂಭಗಳಲ್ಲಿ ಜಿಲ್ಲೆಗೊಂದು ವಿಶ್ವವಿದ್ಯಾಲಯವನ್ನು ಸ್ಥಾಪಿಸಬೇಕು ಎನ್ನುವ ಪರಿಕಲ್ಪನೆಯನ್ನು ಹೊಂದಿದ್ದೇನೆ, ನನ್ನ ಕಲ್ಪನೆಯ ಕೂಸು, ಇಂದಿನ ಕೊಪ್ಪಳ ವಿಶ್ವವಿದ್ಯಾಲ ಎಂದು ಹೇಳಿದಂತೆ ಡಿಕೆ ಶಿವಕುಮಾರ್ ಅವರ ಉಪ ಸಮಿತಿಯ ವರದಿಯನ್ನು ವಿರೋಧಿಸಿ ಕೊಪ್ಪಳದಲ್ಲಿ ವಿಶ್ವವಿದ್ಯಾಲಯವನ್ನು ಮುಂದುವರಿಸಲು ಸರ್ಕಾರಕ್ಕೆ ಮನವಿ ಮಾಡಿಕೊಳ್ಳಬೇಕು.

ಕಲ್ಯಾಣ ಕರ್ನಾಟಕ ಭಾಗದ 9 ಜಿಲ್ಲೆಯ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪ್ರಗತಿಗೆ ಅನುಕೂಲದ ದೃಷ್ಟಿಯಿಂದ ಕೊಪ್ಪಳ ವಿಶ್ವವಿದ್ಯಾಲಯ ಮುಂದುವರಿಸಲು ಸಂಸದ ರಾಜಶೇಖರ್ ಹಿಟ್ನಾಳ್, ಉಸ್ತುವಾರಿ ಮಂತ್ರಿ ಶಿವರಾಜ್ ತಂಗಡಗಿ, ಶಾಸಕ ರಾಯರಡ್ಡಿ ಸರ್ಕಾರಕ್ಕೆ ಮನವರಿಕೆ ಮಾಡಿಕೊಡಬೇಕು ಎಂದು ಮಲ್ಲನಗೌಡ ಕೋನನಗೌಡರ್ ಆಗ್ರಹಿಸಿದ್ದಾರೆ.

# ವೈಶ್ಯ ಗಾಣಿಗ ಸಂಘವನ್ನು ಸದೃಡವಾಗಿ ಕಟ್ಟಲು ಮುಂದಾಗಿ

**ಮುಳಬಾಗಿಲು:** ಶ್ರೀ ಜನೋಪಕಾರಿ ದೊಡ್ಡಣ್ಣಶೆಟ್ಟರ ಆದರ್ಶ, ತತ್ವ ಹಾಗೂ ವಿಚಾರಧಾರೆಗಳನ್ನು ಆಧಾರವಾಗಿಟ್ಟುಕೊಂಡು ಅಖಿಲ ಕರ್ನಾಟಕ ಜ್ಯೋತಿ ನಗರ ವೈಶ್ಯ ಗಾಣಿಗ ಸಂಘವನ್ನು ಸದೃಡವಾಗಿ ಕಟ್ಟಲು ಸಮುದಾಯದವರು ಮುಂದಾಗಬೇಕು ಎಂದು ಸಮುದಾಯದ ರಾಜ್ಯ ಹಿರಿಯ ಮುಖಂಡ ಜಿ. ವೇಣುಗೋಪಾಲ್ ತಿಳಿಸಿದ್ದಾರೆ.

ಅವರು ತಾಲೂಕಿನ ಕುರುಡುಮಲೆ ವಿನಾಯಕ ದೇವಾಲಯದ ಆವರಣದಲ್ಲಿ ಇಟ್ಟಿಕೊಂಡು ಅಖಿಲ ಕರ್ನಾಟಕ ಜ್ಯೋತಿ ನಗರ ವೈಶ್ಯ ಗಾಣಿಗ ಸಂಘಕ್ಕೆ ಸದಸ್ಯತ್ವ ಆಂದೋಲನ ಹಾಗೂ ಕಾರ್ಯಚಟುವಟಿಕೆಗಳಿಗೆ ಚಾಲನೆ ನೀಡಿ ಮಾತನಾಡಿದರು.

ಸಮುದಾಯದ ಮಕ್ಕಳು ಉತ್ತಮ ವಿದ್ಯಾಬ್ಯಾಸ ಪಡೆಯಲು ಹಾಗೂ ಪ್ರತಿಭಾವಂತರನ್ನು ಗುರುತಿಸಿ ಪ್ರೋತ್ಸಾಹಿಸುವ ಕೆಲಸ ಸಂಘ ಮಾಡಬೇಕಾಗಿದೆ ಎಂದು ತಿಳಿಸಿದರು. ಸಮುದಾಯದ ಪ್ರತಿ ಮನೆಯವರು ಸದಸ್ಯತ್ವ ಪಡೆದುಕೊಂಡು ಸಂಘದ ಸಂಘಟನೆಗೆ ಸಂಪೂರ್ಣ ಸಹಕಾರ ನೀಡಬೇಕೆಂದು ತಿಳಿಸಿದರು. ಸಮುದಾಯದ ಮಹಿಳೆಯರ ಸಬಲೀಕರಣಕ್ಕೆ ಹೆಚ್ಚು ಒತ್ತು ನೀಡುವ ಕೆಲಸ ನಡೆಯಬೇಕಾಗಿದೆ. ಸಂಘದ ಸಮಗ್ರ ಅಭಿವೃದ್ದಿಗೆ ಸಂಪೂರ್ಣ ಸಹಕಾರ ನೀಡಲಾಗುವುದೆಂದು ತಿಳಿಸಿದರು.

ಸಮುದಾಯದ ಹಿರಿಯರು ಹಾಗೂ ಜಿ.ಪಂ ಮಾಜಿ ಸದಸ್ಯ ಜಿ.ಎಸ್. ಅಮರನಾಥ್ ಮಾತನಾಡಿ, ಜ್ಯೋತಿ ನಗರ ವೈಶ್ಯ ಗಾಣಿಗರ ಸಂಘಟನೆ ಮಾಡುವುದರ ಜೊತೆಗೆ ಸರಕಾರದ ಸೌಲಭ್ಯಗಳನ್ನು ಪಡೆಯುವ ಉದ್ದೇಶದಿಂದ ಅಖಿಲ ಕರ್ನಾಟಕ ಜ್ಯೋತಿ ನಗರ ವೈಶ್ಯ ಗಾಣಿಗರ ಸಂಘ ಅಸ್ತಿತ್ವಕ್ಕೆ ಬಂದಿರುವುದು ಒಳ್ಳೆಯ ಬೆಳವಣಿಗೆಯಾಗಿದೆ ಸಮುದಾಯದವರು ಯಾವುದೇ ರೀತಿಯ ಬಿನ್ನಾಭಿಪ್ರಾಯ ಇದ್ದರೂ



ಅದನ್ನು ಬದಿಗೊತ್ತಿ ಸಮುದಾಯದ ಅಭಿವೃದ್ದಿ ವಿಷಯಕ್ಕೆ ಮುಂದಾಗಬೇಕೆಂದು ತಿಳಿಸಿದರು. ಸಮುದಾಯದ ಬಡ ಮಕ್ಕಳು ಉನ್ನತ ಶಿಕ್ಷಣ ಪಡೆಯುತ್ತಿದ್ದರೆ ಅವರಿಗೆ ಸಹಕಾರ ನೀಡುವುದು ಅತ್ಯಗತ್ಯವಾಗಿದೆ ಈಗಾಗಲೇ ನಾನು ಹೆಚ್ಚು ಮಕ್ಕಳಿಗೆ ಉನ್ನತ ಶಿಕ್ಷಣಕ್ಕೆ ಆರ್ಥಿಕ ಸಹಾಯವನ್ನು ಮಾಡುತ್ತಿದ್ದು ಅದನ್ನು ಮುಂದುವರೆಸುತ್ತೇನೆ ಎಂದು ತಿಳಿಸಿದರು.

ಎಸ್‌ಎಲ್‌ಎನ್ ಧರ್ಮ ಸಂಸ್ಥೆಯ ಮಾಜಿ ಅಧ್ಯಕ್ಷರಾದ ಬಿ.ಜಿ. ರಮೇಶ್ ಹಾಗೂ ಮೋಹನ್ ಮೂರ್ತಿ, ಮಾತನಾಡಿ, ಜ್ಯೋತಿನಗರ ವೈಶ್ಯ ಗಾಣಿಗ ಸಮುದಾಯ ಸಂಘಟಿತರಾಗುವುದರ ಮೂಲಕ ತಮ್ಮ ಒಗ್ಗಟ್ಟಿನ ಪ್ರದರ್ಶನ ಮಾಡಬೇಕು ಎಂದು ತಿಳಿಸಿದರು. ಸಂಘದ ಕಾರ್ಯ ಚಟುವಟಿಕೆಗಳಲ್ಲಿ ಪ್ರತಿಯೊಬ್ಬರು ಸಕ್ರಿಯವಾಗಿ ಭಾಗವಹಿಸಬೇಕೆಂದು ತಿಳಿಸಿದರು. ಸಂಘದ ಅಭಿವೃದ್ದಿಗೆ ಸಂಪೂರ್ಣ ಸಹಕಾರ ನೀಡುವುದರ ಜತೆಗೆ ಸದಸ್ಯತ್ವಕ್ಕೆ ಹೆಚ್ಚು ಒತ್ತು ನೀಡಲಾಗುವುದೆಂದು ತಿಳಿಸಿದರು. ಎಸ್‌ಎಲ್‌ಎನ್ ಧರ್ಮ ಸಂಸ್ಥೆಯನ್ನು ರಕ್ಷಿಸುವ ವಿಷಯದಲ್ಲಿ ಸಮುದಾಯದವರು ತಮ್ಮ ಒಗ್ಗಟ್ಟಿನ ಪ್ರದರ್ಶನ ಮಾಡಬೇಕೆಂದು ತಿಳಿಸಿದರು.

ಸಂಘದ ರಾಜ್ಯಾಧ್ಯಕ್ಷ ಪಿ.ಜಿ ವಿಜಯ್ ಕುಮಾರ್ ಗಾಣಿಗ ಮಾತನಾಡಿ, ಜ್ಯೋತಿನಗರ ವೈಶ್ಯ ಗಾಣಿಗ ಸಮುದಾಯದ ಹಿತಕಾಪಾಡುವ ದೃಷಿಯಿಂದ ಅಖಿಲ ಕರ್ನಾಟಕ ಜ್ಯೋತಿನಗರ ವೈಶ್ಯ ಗಾಣಿಗ ಸಂಘವನ್ನು ರಚಿಸಿದ್ದು, ಮೊದಲ ಹಂತದಲ್ಲಿ 5 ಸಾವಿರ ಮಂದಿ ಸದಸ್ಯತ್ವ ಮಾಡಲು ಯೋಜನೆ ರೂಪಿಸಲಾಗಿದೆ ಎಂದರು. ಮುಂದಿನ ದಿನಗಳಲ್ಲಿ ರಾಜ್ಯದ ಪ್ರತಿ ತಾಲೂಕು, ಜಿಲ್ಲಾ ಮಟ್ಟದಲ್ಲಿ ಸಂಘ ರಚನೆ ಮಾಡಲಾಗುವುದು ಎಂದು ತಿಳಿಸಿದರು. ಸಮುದಾಯದ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ದಿಗೆ ಹಾಗೂ ಮಹಿಳೆಯರ ಆರ್ಥಿಕ ಅಭಿವೃದ್ದಿಗೆ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು. ಸಮುದಾಯದವರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಸಹಕಾರಿ ಬ್ಯಾಂಕ್‌ನ್ನು ಪ್ರಾರಂಭಿಸಲು ಅಗತ್ಯ ಕ್ರಮ ತೆಗೆದುಕೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಸಂಘ ಯಾವುದೇ ಸಂಸ್ಥೆ ಅಥವಾ ವ್ಯಕ್ತಿಯ ವಿರುದ್ದ ರಚನೆಯಾಗಿಲ್ಲ ಎಂದು ಸ್ಪಷ್ಟಪಡಿಸಿದರು.

ಸಂಘದ ಗೌರವಾಧ್ಯಕ್ಷ ಟಿ.ಎಸ್. ರಮೇಶ್ ಮಾತನಾಡಿ, ಸಮುದಾಯದವರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಮೂಲಕ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಅಗತ್ಯ ಕ್ರಮ ತೆಗೆದುಕೊಳ್ಳಬೇಕು ಎಂದು ತಿಳಿಸಿದರು. ಸಂಘವು ಸಮುದಾಯದ ಬಡ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಹಾಗೂ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡುವ ಕಾರ್ಯಕ್ಕೆ ಸಂಪೂರ್ಣ ಸಹಕಾರ ನೀಡಬೇಕೆಂದು ತಿಳಿಸಿದರು.

ಸಂಘದ ಮುಖಂಡರು ಕುರುಡುಮಲೆ ವಿನಾಯಕನಿಗೆ ವಿಶೇಷ ಪೂಜೆ ಸಲ್ಲಿಸಿ ಸಂಘದ ಕಾರ್ಯಗಳಿಗೆ ಯಾವುದೇ ರೀತಿಯ ನಿರ್ವಿಘ್ನಗಳು ಉಂಟಾಗದಂತೆ ಅನುಗ್ರಹಿಸಬೇಕೆಂದು ವಿಶೇಷ ಪೂಜೆ ಸಲ್ಲಿಸಿದರು. ಬಹುತೇಕರು ಸಂಘದ ಸದಸ್ಯತ್ವಕ್ಕೆ ನೊಂದಣಿ ಮಾಡಿಸಿದರು.

ಎಸ್‌ಡಿಸಿ ಕಾಲೇಜಿನ ಪ್ರಿನ್ಸಿಪಾಲ್ ಮುರಳಿಕೃಷ್ಣ, ಸಂಘದ ಖಜಾಂಚಿ ಕೃಷ್ಣಮೂರ್ತಿ, ಎಸ್.ಎಲ್.ಎನ್ ಆಶ್ರಮ ಸದಸ್ಯ ಮಧು, ವಿ.ಸಿ. ಮೋಹನ್, ಶಾಪೂರ್ ರಘು, ಭಗವಾನ್ ರಾಮು, ಜಂಟಿ ಕಾರ್ಯದರ್ಶಿಗಳಾದ , ನಾರಾಯಣಸ್ವಾಮಿ, ವಿ. ರಾಮಕೃಷ್ಣ, ಸಂಚಾಲಕ ಕೆ. ಪ್ರಕಾಶ್, ಸದಸ್ಯರಾದ ರವಿಕುಮಾರ್, ಚಂದ್ರಶೇಖರ್, ಚಲಪತಿ, ಸತೀಶ್, ವೆಂಕಟ್ರಾಮ್, ಚಂದ್ರಣ್ಣ, ಬಸವರಾಜು, ಲೀಲಾವತಿ, ಮುಖಂಡರಾದ ಗೋವಿಂದರಾಜು, ಅಂಕಣ್ಣ, ಭೂಷಣ್ ಬಾರತೀಯ, ಚಂದ್ರಣ್ಣ, ಸಂಪಗಿರಾಮು, ಶ್ರೀನಾಥ್, ಅಶ್ವಥ್, ಮಂಜು, ಇದ್ದರು.

ಮುಳಬಾಗಲು ತಾಲೂಕಿನ ಕುರುಡುಮಲೆ ಶ್ರೀ ವಿನಾಯಕ ದೇವಾಲಯ ಆವರಣದಲ್ಲಿ ಅಖಿಲ ಕರ್ನಾಟಕ ಜ್ಯೋತಿ ನಗರ ವೈಶ್ಯ ಗಾಣಿಗ ಸಂಘದ ಸದಸ್ಯತ್ವ ಆಂದೋಲನಕ್ಕೆ ಚಾಲನೆ ನೀಡಲಾಯಿತು.



# ಎನ್‌ಎಸ್‌ಎಸ್ ಶಿಬಿರ ವಿದ್ಯಾರ್ಥಿಗಳಿಗೆ ದೇಶ ಪ್ರೇಮ ಬೆಳಸುತ್ತದೆ

**ಶಿಡ್ಲಘಟ್ಟ:** ವಿದ್ಯಾರ್ಥಿಗಳಿಗೆ ದೇಶಪ್ರೇಮ, ಸಂಸ್ಕಾರ ಮೈಗೂಡಲು ಎನ್.ಎಸ್.ಎಸ್ ಶಿಬಿರ ಪೂರಕವಾಗಿ ಕಾರ್ಯನಿರ್ವಹಿಸುತ್ತದೆ ಇಂತಹ ಮೌಲ್ಯಗಳನ್ನು ಅಳವಡಿಸಿ ಜೀವನದಲ್ಲಿ ಗೌರವದಿಂದ ಬದುಕುವ, ಸ್ವಾವಲಂಬಿತ ಜೀವನ ಕಲಿಸಿಕೊಡುತ್ತದೆ ಎಂದು ಸಾವಯವ ಕೃಷಿಕರು, ಪ್ರಗತಿಪರ ರೈತರಾದ ಬೋದಗೂರು ವೆಂಕಟಸ್ವಾಮಿರೆಡ್ಡಿ ತಿಳಿಸಿದರು.

ತಾಲ್ಲೂಕಿನ ಬೋದಗೂರು ಗ್ರಾಮದಲ್ಲಿ ದೇವನಹಳ್ಳಿ ತಾಲ್ಲೂಕಿನ ಕುಂದಾಣ ಬಳಿಯ ಕೇಂಬ್ರಿಡ್ಜ್ ತಾಂತ್ರಿಕ ಮಹಾವಿದ್ಯಾಲಯ ಉತ್ತರ ವಲಯದ ಇಂಜಿನಿಯರಿಂಗ್ ವಿದ್ಯಾರ್ಥಿಗಳಿಂದ ಎನ್.ಎಸ್.ಎಸ್. ಶಿಬಿರದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿ ದೆಸೆಯಿಂದಲೇ ವಿದ್ಯಾರ್ಥಿಗಳಲ್ಲಿ ಧೈರ್ಯ, ಗುರಿ,ಪ್ರಯತ್ನ, ಶಿಸ್ತು, ಬದ್ಧತೆ ಹಾಗು ಸೇವಾ ಮನೋಭಾವನೆ ರೂಡಿಸಿಕೊಂಡಾಗ ಮಾತ್ರ ನಿಮ್ಮ ಜೀವನದಲ್ಲಿ ಮಹತ್ತರ ಸಾಧನೆಗಳನ್ನು ಸಾದಿಸಬಹುದು ಎಂದು ಹೇಳಿದರು.

ತಂದೆ,ತಾಯಿ,ಗುರು ಹಾಗು ಹಿರಿಯರಿಗೆ ಗೌರವ ನೀಡುವ ಗುಣಗಳು ಬಾಲ್ಯದಿಂದಲೇ ಬೆಳೆಸಿಕೊಂಡು ಇತರರಿಗೆ ಮಾದರಿಯಾಗಿ ಬದುಕಬೇಕು ಎಂದರು.

ಹಾಲು ಉತ್ಪಾದಕರ ಸಹಕಾರ ಸಂಘದ ಮಾಜಿ ಅಧ್ಯಕ್ಷ ಮುನಿರಾಜು ಮಾತನಾಡಿ,ಸಮಾಜಕ್ಕೆ ಭಾರವಾಗಿ ಬದುಕಿದರೆ ಜೀವನಕ್ಕೆ ಅರ್ಥವಿಲ್ಲ ಸಮಾಜವು ನಿಮ್ಮನ್ನು ಗುರುತಿಸುವ ರೀತಿಯಲ್ಲಿ ಕೆಲಸ ಮಾಡುವಂತೆ ವಿದ್ಯಾರ್ಥಿಗಳಿಗೆ ವಿವರಿಸಿದರು.

ಕವಿಗಳಾದ ದೇವರಮಳ್ಳೂರು ಚೆನ್ನಕೃಷ್ಣ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಸೇವಾ ಬದ್ಧತೆ ಮೂಡಿಸುವುದಕ್ಕೆ, ಪರಿಪೂರ್ಣ ವ್ಯಕ್ತಿತ್ವ ವಿಕಸನಕ್ಕಾಗಿ ಎನ್.



ಎಸ್.ಎಸ್. ಶಿಬಿರ ನಡೆಯುತ್ತದೆ ಪ್ರತಿಯೊಬ್ಬ ವಿದ್ಯಾರ್ಥಿ ಇದರ ಅನುಭವ ಪಡೆದುಕೊಳ್ಳಿ ಎಂದರು. ತ

ಕೇಂಬ್ರಿಡ್ಜ್ ಕಾಲೇಜಿನ ನಿರ್ದೇಶಕ ಡಾಕ್ಟರ್ ಕೆ.ಉದಯ್ ಕುಮಾರ್ ಅಧ್ಯಕ್ಷತೆ ವಹಿಸಿ ಮಾತನಾಡಿ,ಹಿಂದಿನ ಕಾಲದಂತೆ ಹೀಗಿಲ್ಲ ಪ್ರತಿಯೊಬ್ಬ ವ್ಯಕ್ತಿಗೂ ಈಗ ಒಳ್ಳೆಯ ಅವಕಾಶವಿದೆ, ವಿದ್ಯಾರ್ಥಿ ದೆಸೆಯಿಂದಲೇ ನಿರಂತರವಾಗಿ ಪ್ರಯತ್ನ ಮಾಡಬೇಕು, ಸಮಯಕ್ಕೆ ಹೆಚ್ಚು ಮಹತ್ವ ನೀಡಿ, ಪ್ರಾಮಾಣಿಕತೆ ಬೆಳೆಸಿಕೊಳ್ಳಿ, ಅಧ್ಯಯಯನ ಶೀಲರಾಗಿ ದೇಶವನ್ನು ಅಭಿವೃದ್ಧಿಪಡಿಸಬೇಕು ಎಂದು ತಿಳಿ ಹೇಳಿದರು.

ಶಿಬಿರದ ಅವಧಿಯಲ್ಲಿ ಎನ್.ಎಸ್.ಎಸ್. ವಿದ್ಯಾರ್ಥಿಗಳಿಂದ ಬೋದಗೂರು ಹಾಗು ಆನೂರು ಗ್ರಾಮದಲ್ಲಿ ಪ್ಲಾಸ್ಟಿಕ್ ಮುಕ್ತ ಗ್ರಾಮ,ಆರೋಗ್ಯ ಶಿಬಿರ , ಸ್ವಚ್ಛತೆ ಬಗ್ಗೆ ಅರಿವು ,ರೈತರ ಜೊತೆ ಸಂವಾದ , ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.

ಇದೇ ವೇಳೆ ಜಾನಪದ ಕಲಾವಿದೆ ದ್ಯಾವಮ್ಮ ಹಾಗು ಗಣ್ಯರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ವಿಶ್ವಾಸ್, ಎಂ.ಪಿ.ಸಿ.ಎಸ್. ಕಾರ್ಯದರ್ಶಿ ಚಂದ್ರಪ್ಪ, ಎನ್‌ಎಸ್.ಎಸ್. ಕಾರ್ಯಕ್ರಮಾಧಿಕಾರಿ ಎಂ.ಜೆ. ಶಂಕರ್, ವಿಟಿಯು ಪ್ರಾದೇಶಿಕ ಕೇಂದ್ರದ ನಿರ್ದೇಶಕ ಡಾ.ಸುದರ್ಶನರೆಡ್ಡಿ,ಮೀರಾ, ಬಿಂದು,ಸರ್ಕಾರಿ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕರಾದ ವಿಶ್ವನಾಥ್ , ಗ್ರಾಮದವರಾದ ದೊಡ್ಡಮಾರಪ್ಪ, ರಾಮಮೂರ್ತಿ, ನಾಗೇಶ್, ರಾಕೇಶ್,ಸುರೇಶ್ ಮುಂತಾದವರು ಪಾಲ್ಗೊಂಡಿದ್ದರು.

# ಬೇಡಿಕೆ ಈಡೇರಿಸಿ ಗ್ರಾಮೀಣ ಸೇವೆಗಳಿಗೆ ಮುಕ್ತಿ

**ಮುಳಬಾಗಿಲು:** ಗ್ರಾಮಾಡಳಿತ ಅಧಿಕಾರಿಗಳ ನ್ಯಾಯಯುತ ಬೇಡಿಕೆಗಳನ್ನು ಸರ್ಕಾರ ಈಡೇರಿಸಿ ಸ್ಥಗಿತಗೊಂಡಿರುವ ಗ್ರಾಮೀಣ ಸೇವೆಗಳಿಗೆ ಮುಕ್ತಿ ನೀಡಬೇಕೆಂದು ರೈತಸಂಘದ ರಾಜ್ಯ ಉಪಾಧ್ಯಕ್ಷ ಕೆ.ನಾರಾಯಣ ಗೌಡ ಕಂದಾಯ ಸಚಿವರನ್ನು ಆಗ್ರಹಿಸಿದ್ದಾರೆ.

ತಾಲೂಕು ಕಚೇರಿ ಮುಂದೆ ವಿವಿಧ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸುವಂತೆ ಗ್ರಾಮಾಡಳಿತ ಅಧಿಕಾರಿಗಳು ನಡೆಸುತ್ತಿರುವ ಮುಷ್ಕರಕ್ಕೆ ರೈತಸಂಘದಿಂದ ಬೆಂಬಲ ನೀಡಿ ಮಾತನಾಡಿದ ಅವರು, ಗ್ರಾಮಾಡಳಿತ ಅಧಿಕಾರಿಗಳಿಗೆ ಮೂಲಭೂತ ಸೌಕರ್ಯಗಳಾದ ಸುಸಜ್ಜಿತವಾದ ಕಚೇರಿ, ಪಿಠೋಪಕರಣಗಳು, ಗುಣಮಟ್ಟದ ಮೊಬೈಲ್ ಫೋನ್, ಸಿಮ್, ಡೇಟಾ, ಲ್ಯಾಪ್ ಟಾಪ್, ಪ್ರಿಂಟರ್ ಮತ್ತಿತರ ಎಲ್ಲಾ ಸೌಲಭ್ಯಗಳನ್ನು ನೀಡದೆ ಕಂದಾಯ ಸಚಿವರು ವಾರಕ್ಕೊಂದು ಆದೇಶವನ್ನು ಮಾಡುವ ಮುಖಾಂತರ ಗ್ರಾಮಾಡಳಿತ ಅಧಿಕಾರಿಗಳ ಮೇಲೆ ಒತ್ತಡ ಹಾಕಿ ಮಾನಸಿಕವಾಗಿ, ದೈಹಿಕವಾಗಿ ಅಧಿಕಾರಿಗಳ ಮೇಲೆ ನಿರಂತರ ದಬ್ಬಾಳಿಕೆ ಒತ್ತಡ ನಿಲ್ಲಬೇಕೆಂದು ಒತ್ತಾಯಿಸಿದರು.

ಸಿಬ್ಬಂದಿ ಕೊರತೆಯ ಮಧ್ಯೆಯೂ ನಿರಂತರವಾಗಿ ರೈತರಿಗೆ ಅನುಕೂಲಕರವಾದ ಪಿ ನಂಬರ್ ದುರಸ್ಥಿ, ಇ-ಖಾತಾ, ಬೆಳೆಹಾನಿ, ಮಳೆಹಾನಿ ಮತ್ತಿತರ ಸಮಸ್ಯೆಗಳು ಎದುರಾದಾಗ ತಮ್ಮ ಕುಟುಂಬಗಳನ್ನು ಬಿಟ್ಟು



ನಿರಂತರವಾಗಿ ಒತ್ತಡ ಹೆಚ್ಚಾಗಿ ಆರೋಗ್ಯ ಹದಗೆಟ್ಟು ಪ್ರಾಣಹಾನಿಯು ಸಂಭವಿಸುತ್ತಿರುವ ಉದಾಹರಣೆಗಳಿದ್ದರೂ ಸರ್ಕಾರ ಮಾತ್ರ ಯಾವುದೇ ಸೌಲಭ್ಯಗಳನ್ನು ನೀಡದೆ ವಂಚನೆ ಮಾಡುತ್ತಿದ್ದಾರೆಂದು ಅಸಮಧಾನ ವ್ಯಕ್ತಪಡಿಸಿದರು.

21 ತಂತ್ರಾಂಶಗಳನ್ನು ಏಕಕಾಲದಲ್ಲಿ ನಿರ್ವಹಿಸುವ ಜೊತೆಗೆ ಆಧಾರ್ ಸೀಡ್ ಎಂಬ ಅವೈಜ್ಞಾನಿಕ ಕಂದಾಯ ಮಂತ್ರಿಗಳ ಆದೇಶ ಜಿಲ್ಲೆಯ ಯಾವುದೇ ಹಳ್ಳಿಯಲ್ಲಿದ್ದರೂ ಆ ರೈತರ ಆಧಾರ್ ಮತ್ತಿತರ ದಾಖಲೆಗಳನ್ನು ಪರಿಶೀಲಿಸಬಹುದು. ಆದರೆ, ಬೆಂಗಳೂರಿನ ವ್ಯಕ್ತಿಗಳು ಜಿಲ್ಲೆಯಲ್ಲಿ ಕೃಷಿ ಜಮೀನು ಖರೀದಿ ಮಾಡಿ ವಾಸ ಬೆಂಗಳೂರಿನಲ್ಲಿದ್ದರೆ ಆ ವ್ಯಕ್ತಿಗಳನ್ನು ಕಂದಾಯ ಅಧಿಕಾರಿಗಳು ಹುಡುಕಿಕೊಂಡು ಹೋಗಬೇಕಾದರೆ ಅವರಿಗೆ ಯಾವುದೇ ಸರ್ಕಾರದಿಂದ ವೇತನ ಭತ್ಯ ನೀಡುವುದಿಲ್ಲ. ಅದೂ ಸಹ ಅವೈಜ್ಞಾನಿಕವಾಗಿದೆ. 24 ಗಂಟೆಯಲ್ಲಿ ಗ್ರಾಮ ಆಡಳಿತಾಧಿಕಾರಿಗಳ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಬೇಕು. ಇಲ್ಲವಾದರೆ ಗ್ರಾಮೀಣ ಪ್ರದೇಶದ ಎಲ್ಲಾ ರಸ್ತೆಗಳನ್ನು ಜಾನುವಾರುಗಳ ಸಮೇತ ಬಂದ್ ಮಾಡಿ ಸರ್ಕಾರದ ವಿರುದ್ಧ ಹೋರಾಟ ರೂಪಿಸಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆಯ ಜೊತೆಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಈಕಂಬಳ್ಳಿ ಮಂಜುನಾಥ್, ಬಂಗಾರಿ ಮಂಜು, ರಾಜ್ಯ ಪ್ರಧಾನ ಕಾರ್ಯದರ್ಶಿ ಪಾರುಖಪಾಷ, ಜುಬೇರ್ ಪಾಷ, ಶ್ರೀನಿವಾಸ್, ರಾಜೇಶ, ಬಾಸ್ಕರ್, ಹೆಬ್ಬಣಿ, ಅನಂದ ರೆಡ್ಡಿ, ಸುನೀಲ್ ಕುಮಾರ್ ಮುಂತಾದವರಿದ್ದರು.

# ಜಾತಿ, ಆದಾಯ ಪ್ರಮಾಣ ಪತ್ರಕ್ಕಾಗಿ ಸಹಾಯವಾಣಿ

**ಚಾಮರಾಜನಗರ:** ಪರೀಕ್ಷೆ ಹಾಗೂ ನೇಮಕಾತಿ ಉದ್ದೇಶಗಳಿಗಾಗಿ ತ್ವರಿತವಾಗಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಅವಶ್ಯಕತೆಯಿರುವ ವಿದ್ಯಾರ್ಥಿಗಳು, ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 08226-223160, ಮೊ.ಸಂ 9740942901 ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದ್ದಾರೆ.

ಗ್ರಾಮ ಆಡಳಿತ ಅಧಿಕಾರಿಗಳ ಮುಷ್ಕರದಿಂದ ಜಾತಿ, ಆದಾಯ ಪ್ರಮಾಣ ಪತ್ರ ಪಡೆಯಲು ವಿಳಂಬವಾಗುತ್ತಿದ್ದು, ವಿದ್ಯಾರ್ಥಿಗಳು ಹಾಗೂ ಅಭ್ಯರ್ಥಿಗಳ ಅನುಕೂಲಕ್ಕಾಗಿ ಚಾಮರಾಜನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿರುವ ಕೊಠಡಿ ಸಂಖ್ಯೆ 104/1 ರಲ್ಲಿ ಸಹಾಯವಾಣಿ ಸ್ಥಾಪಿಸಲಾಗಿದೆ. ಜಾತಿ ಮತ್ತು ಆದಾಯ ಪ್ರಮಾಣ ಪತ್ರಕ್ಕೆ ಸಂಬಂಧಿಸಿದಂತೆ ಸ್ವೀಕೃತ ಕರೆಗಳಿಗೆ ಕೂಡಲೇ ಸ್ಪಂದಿಸಿ ಕ್ರಮವಹಿಸಲಾಗುವುದು. ಯಾವುದೇ ವಿದ್ಯಾರ್ಥಿಗಳು ಹಾಗೂ ಪೋಷಕರು ಆತಂಕಪಡುವ ಅಗತ್ಯವಿಲ್ಲ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕ್ರೀಡೆಗಳು ದೈಹಿಕ ಮತ್ತು ಮಾನಸಿಕವಾಗಿ ಸದೃಢಗೊಳಿಸುತ್ತದೆ: ದಿಲೀಪ್ ಕುಮಾರ್



**ದೇವನಹಳ್ಳಿ:** ಜಿಲ್ಲಾ ಮಟ್ಟದ ಕ್ರೀಡಾ ಮತ್ತು ಸಾಂಸ್ಕೃತಿಕ ಕಾರ್ಯಕ್ರಮ ಸತತ ನಾಲ್ಕು ವರ್ಷಗಳಿಂದ ಆಯೋಜಿಸಿದ್ದೇವೆ, ಸರ್ಕಾರಿ ನೌಕರರು ಪ್ರತಿ ದಿನ ಒತ್ತಡದಲ್ಲಿ ಕರ್ತವ್ಯ ನಿರ್ವಹಿಸುತ್ತಾರೆ ಒಂದು ದಿನದ ಮಟ್ಟಿಗೆ ಕ್ರೀಡೆಯಲ್ಲಿ ತೊಡಗಿ ಯಾವುದೇ ಒತ್ತಡವಿಲ್ಲದೇ ಸಹೋದ್ಯೋಗಿಗಳೊಂದಿಗೆ ಕ್ರೀಡೆ ಮತ್ತು ಇತರೆ ಚಟುವಟಿಕೆಗಳಲ್ಲಿ ಭಾಗಿಯಾಗುವ ವೇದಿಕೆ ಇದಾಗಿದ್ದು ಕ್ರೀಡೆಗಳು ದೈಹಿಕ ಮತ್ತು ಮಾನಸಿಕವಾಗಿ ಸದೃಢಗೊಳಿಸುತ್ತದೆ ಎಂದು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸಂಘದ ಜಿಲ್ಲಾಧ್ಯಕ್ಷ ದಿಲೀಪ್ ಕುಮಾರ್ ಹೇಳಿದ್ದಾರೆ.

ಪಟ್ಟಣದ ಸೂಲಿಬೆಲೆ ರಸ್ತೆಯಲ್ಲಿರುವ ಬ್ರಿಗೇಡ್ ಆರ್ಚರ್ಡ್ ಕ್ರೀಡಾಂಗಣದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತಿ , ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಎಲ್ಲಾ ವೃಂದದ ಅಧಿಕಾರಿ ಮತ್ತು ನೌಕರರ ಸಂಘದ ಸಹಯೋಗದಲ್ಲಿ 2024-25 ನೇ ಸಾಲಿನ ಜಿಲ್ಲಾ ಮಟ್ಟದ ಕ್ರೀಡಾ ಮತ್ತು ಸಾಂಸ್ಕೃತಿಕ ಕಾರ್ಯಕ್ರಮವನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಕೆ .ಎನ್ ಅನುರಾಧ ಉದ್ಘಾಟಿಸಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಟಿ .ಕೆ ರಮೇಶ್, ಜಿಲ್ಲಾ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಬಿ .ರಾಜಣ್ಣ ,ತಾಲೂಕು ಕಾರ್ಯ ನಿರ್ವಹಣಾಧಿಕಾರಿ ಶ್ರೀನಾಥ್ ಗೌಡ,ನಾಲ್ಕು ತಾಲ್ಲೂಕಿನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಿಬ್ಬಂದಿ ವರ್ಗ ಮತ್ತಿತರರಿದ್ದರು.

# ಸಮಾಜದಲ್ಲಿ ಗೌರವಯುತವಾಗಿ ಬದುಕುವ ಹಕ್ಕು ಎಲ್ಲರಿಗೂ ಇದೆ

ಚಾಮರಾಜನಗರ: ಸಮಾಜದಲ್ಲಿ ಗೌರವಯುತವಾಗಿ ಬದುಕುವ ಹಕ್ಕು ಎಲ್ಲರಿಗೂ ಇದ್ದು, ಸಂವಿಧಾನದಲ್ಲಿ ಪ್ರತಿಯೊಬ್ಬರಿಗೂ ನೀಡಿರುವ ಮೂಲಭೂತ ಹಕ್ಕುಗಳ ಉಲ್ಲಂಘನೆಯಾಗದಂತೆ ಎಚ್ಚರ ವಹಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಈಶ್ವರ ಅವರು ತಿಳಿಸಿದ್ದಾರೆ.

ನಗರದ ಜಿಲ್ಲಾಡಳಿತ ಭವನದಲ್ಲಿರುವ ಹಳೇ ಕೆ.ಡಿ.ಪಿ ಸಭಾಂಗಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಹಯೋಗದಲ್ಲಿ ಜೀತಪದ್ದತಿ ನಿರ್ಮೂಲನಾ ದಿನಾಚರಣೆ ಅಂಗವಾಗಿ ಜಿಲ್ಲಾ ಹಾಗೂ ತಾಲೂಕುಮಟ್ಟದ ಅಧಿಕಾರಿಗಳಿಗೆ ಏರ್ಪಡಿಸಲಾಗಿದ್ದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಡತನವನ್ನೆ ಬಂಡವಾಳವಾಗಿಸಿಕೊಂಡು ಬಡವರನ್ನು ಜೀವನಪೂರ್ತಿ ದುಡಿಸಿಕೊಳ್ಳಬಾರದು. ಅದು ವ್ಯಕ್ತಿಯ ಮೂಲಭೂತ ಹಕ್ಕುಗಳ ನೇರ ಉಲ್ಲಂಘನೆಯಾಗಲಿದೆ. ಜೀತಪದ್ದತಿ ನಿರ್ಮೂಲನಾ ಕಾಯ್ದೆಯನ್ನು ಸರ್ಕಾರವು 1976ರಲ್ಲಿ ಜಾರಿಗೊಳಿಸಿದೆ. ದೇಶದ ಪ್ರತಿಯೊಬ್ಬರು ಗೌರವದಿಂದ ಬದುಕಲು ಡಾ. ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನದಲ್ಲಿ ಸಮಾನತೆ ಕುರಿತ ಹಲವಾರು ಅನುಚ್ಛೇದಗಳನ್ನು ಅಡಕಗೊಳಿಸಿದ್ದಾರೆ. ಎಲ್ಲಿಯೇ ಆಗಲಿ ಜೀತಪದ್ದತಿ ಕಂಡುಬಂದರೆ ಅಂತಹವರನ್ನು ಗುರುತಿಸಿ ಅವರಿಗೆ ಪುನರ್ವಸತಿ ಕಲ್ಪಿಸುವ ಕೆಲಸವಾಗಬೇಕು ಎಂದು ನ್ಯಾಯಾಧೀಶರಾದ ಈಶ್ವರ ಅವರು ತಿಳಿಸಿದರು.

ಜೀತಪದ್ದತಿ ನಿರ್ಮೂಲನೆಯ ಅರಿವು ಮೂಡಿಸುವ ಧ್ಯೇಯವಾಕ್ಯಗಳನ್ನು ಮರದ ಪ್ರತಿಕೃತಿಗೆ ಅಳವಡಿಸಿ ಮಾತನಾಡಿದ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಕನಿಷ್ಠ ಬಡವರು, ಸಮಾಜದ ಕಟ್ಟಕಡೆಯ ವ್ಯಕ್ತಿಗಳು ಜೀತ ಪದ್ದತಿಗೆ ಸಿಲುಕಿರುವುದನ್ನು ನೋಡಿದ್ದೇವೆ. ಕನಿಷ್ಠ ವೇತನ ನೀಡದೇ ಒತ್ತಾಯಪೂರ್ವಕವಾಗಿ ದುಡಿಸಿಕೊಳ್ಳುವುದು ತಪ್ಪಾಗಲಿದೆ ಎಂದರು.




ಜೀತಪದ್ದತಿಯನ್ನು ತೊಲಗಿಸಲು ಜೀತ ವ್ಯಕ್ತಿಗಳನ್ನು ಗುರುತಿಸಿ, ಪರಿಹಾರ ನೀಡಿ ಸಂಪೂರ್ಣವಾಗಿ ಅವಶ್ಯ ಪುನರ್ವಸತಿ ಕಲ್ಪಿಸುವುದು ಜಿಲ್ಲಾಮಟ್ಟದ ಅಧಿಕಾರಿಗಳ ಜವಾಬ್ದಾರಿಯೂ ಆಗಿದೆ. ಜಿಲ್ಲೆಯಲ್ಲಿ 2015-16, 2017ರಲ್ಲಿ ಜೀತಪದ್ದತಿ ಸಮೀಕ್ಷೆ ನಡೆಸಿ 45-52 ಜನರನ್ನು ಗುರುತಿಸಲಾಗಿತ್ತು. ಜೀತದಾಳುಗಳ ಪುನರ್ವಸತಿ ಕಾರ್ಯ ಸದ್ಯದಲ್ಲಿಯೇ ಸಂಪೂರ್ಣಗೊಳ್ಳಲಿದೆ. ಸರ್ಕಾರದ ನೀತಿ, ನಿಯಮಗಳನ್ವಯ ಅವರಿಗೆ ಸಹಾಯಹಸ್ತ ಚಾಚಬೇಕಿದೆ. ಅದು ನಮ್ಮೆಲ್ಲರ ಕರ್ತವ್ಯವೂ ಆಗಿದೆ. ಜೀತಪದ್ದತಿ ನಿರ್ಮೂಲನೆಯನ್ನು ಜಿಲ್ಲಾಡಳಿತ ಗಂಭೀರವಾಗಿ ಪರಿಗಣಿಸಿದೆ. ಚಾಮರಾಜನಗರವನ್ನು ಜೀತ ಮುಕ್ತ ಜಿಲ್ಲೆಯನ್ನಾಗಿಸಲು ಎಲ್ಲರೂ ಪಣ ತೊಡೋಣ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ಜೀತಪದ್ದತಿ ನಿರ್ಮೂಲನೆಯ ಪ್ರತಿಜ್ಞಾವಿಧಿ ಬೋಧಿಸಿ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತ ಅವರು ಜೀತ ಸಾಮಾಜಿಕ ಅನಿಷ್ಠ ಪದ್ದತಿ. ಯಾವುದೋ ಕಾರಣಕ್ಕಾಗಿ ವ್ಯಕ್ತಿಯ ಹಕ್ಕುಗಳನ್ನು, ವೈಯಕ್ತಿಕ ಬದುಕನ್ನು ಬಲವಂತವಾಗಿ ಕಸಿಯುವುದೇ ಜೀತಪದ್ದತಿ. ಜೀತ ನಿರ್ಮೂಲನೆಯ ಬಗ್ಗೆ ಜಾಗೃತಿ ಮೂಡಿಸಿ ನಾಗರಿಕ ಸಮಾಜದಿಂದ ಜೀತಪದ್ದತಿಯನ್ನು ಸಂಪೂರ್ಣವಾಗಿ ತೊಲಗಿಸಲು ಎಲ್ಲರ ಸಹಕಾರ ಅಗತ್ಯವಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಮಾತನಾಡಿ ಜೀತಪದ್ದತಿ ನಿರ್ಮೂಲನೆ ಕಾರ್ಯದಲ್ಲಿ ಎಲ್ಲಾ ಇಲಾಖೆ ಅಧಿಕಾರಿಗಳು ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಮುಖ್ಯವಾಗಿ ಗ್ರಾಮಪಂಚಾಯಿತಿ ಮಟ್ಟದಲ್ಲಿ ಜೀತಪದ್ದತಿಯನ್ನು ಗುರುತಿಸಿ ಜೀತವಿಮುಕ್ತರಿಗೆ ಪರಿಹಾರ, ಪುನರ್ವಸತಿ ಕಲ್ಪಿಸಲು ಅಧಿಕಾರಿಗಳ ತಂಡ ಮುಂದಾಗಬೇಕು ಎಂದರು.

ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ್ದ ವಕೀಲರಾದ ರೂಪಶ್ರೀ ಅವರು ಮಾತನಾಡಿ ಜೀತಪದ್ದತಿ ನಿರ್ಮೂಲನೆ ಕುರಿತು ಕಾರ್ಯಗಾರದಲ್ಲಿ ಭಾಗವಹಿಸಿದ್ದ ಅಧಿಕಾರಿಗಳಿಗೆ ಸವಿವರವಾಗಿ ಮಾಹಿತಿ ನೀಡಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಪಿ. ಲಕ್ಷ್ಮೀ, ಜೀತ ವಿಮುಕ್ತ ಸಂಘಟನೆಯ ಆರ್.ಎಫ್.ಎಫ್ ಜಿಲ್ಲಾ ಸಂಚಾಲಕರಾದ ಜಿ.ಕೆ. ಕುನ್ನಹೊಳಿಯಯ್ಯ, ಇತರರು

# ಫೆ.22ಕ್ಕೆ ಕೇಂದ್ರದ ನಡುವೆ ಸೌಹಾರ್ದಯುತ ಸಭೆ ಮಾತುಕತೆ



ಚಂಡೀಗಢ: ರೈತರ ಒಂದು ವರ್ಷದ ಪ್ರತಿಭಟನೆಯ ನಂತರ ಕನಿಷ್ಠ ಬೆಂಬಲ ಬೆಲೆ ವಿಚಾರವಾಗಿ ಕೇಂದ್ರ ತಂಡ ಪ್ರತಿಭಟನೆ ನಿರತ ರೈತ ಸಂಘಟನೆಗಳ ಮುಖಂಡರೊಂದಿಗೆ ಸೌಹಾರ್ದಯುತ ಸಭೆ ನಡೆಸಿದೆ.

ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ನೇತೃತ್ವದ ಕೇಂದ್ರ ತಂಡ ಮತ್ತು ರೈತ ಪ್ರತಿನಿಧಿಗಳ ನಡುವ ಚಂಡೀಗಢದಲ್ಲಿ ಸಭೆ ನಡೆದಿದೆ. ಮುಂದಿನ ಸುತ್ತಿನ ಮಾತುಕತೆ ಫೆ.22ರಂದು ನಡೆಯಲಿದೆ ಎಂದು ಎರಡೂ ಕಡೆಯವರು ತಿಳಿಸಿದ್ದಾರೆ. ರೈತ ಸಮುದಾಯದ ಕಲ್ಯಾಣಕ್ಕಾಗಿ ನರೇಂದ್ರ ಮೋದಿ ಸರ್ಕಾರ ಕೈಗೊಂಡಿರುವ ಕ್ರಮಗಳ ಕುರಿತು ಜೋಶಿ ಮಾತನಾಡಿದರೆ, ರೈತ ಮುಖಂಡರು ತಮ್ಮ ಅಭಿಪ್ರಾಯಗಳನ್ನು ಬಲವಾಗಿ ಮಂಡಿಸಿದರು.

ಮಹಾತ್ಮಾ ಗಾಂಧಿ ಸ್ಟೇಟ್ ಇನ್ಸಿಟ್ಯೂಟ್ ಆಫ್ ಪಬ್ಲಿಕ್ ಅಡ್ಮಿನಿಸ್ಟ್ರೇಷನ್ನಲ್ಲಿ ಎರಡೂವರೆ ಗಂಟೆಗಳ ಕಾಲ ನಡೆದ ಸಭೆಯ ನಂತರ ಜೋಶಿ ಮತ್ತು ರೈತ ಮುಖಂಡ ಜಗಜಿತ್ ಸಿಂಗ್ ಡಲ್ಲೆವಾಲ್ ಇಬ್ಬರೂ ಪ್ರತ್ಯೇಕವಾಗಿ ಸುದ್ದಿಗಾರರೊಂದಿಗೆ ಮಾತನಾಡಿದರು.

ಶಂಭು ಮತ್ತು ಖಾನೌರಿ ಗಡಿಗಳಲ್ಲಿ ಆಂದೋಲನದ ನೇತೃತ್ವ ವಹಿಸಿರುವ ಎರಡು ವೇದಿಕೆಗಳ ರೈತ ಪ್ರತಿನಿಧಿಗಳು ಭಾಗವಹಿಸಿದ್ದರು. ಮತ್ತು ಪಂಜಾಬ್ ಕೃಷಿ ಸಚಿವ ಗುರ್ಮೀತ್ ಸಿಂಗ್ ಖುದ್ದಿಯಾನ್, ರಾಜ್ಯ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಲಾಲ್ ಚಂದ್ ಕಟಾರುಚಕ್ ಮತ್ತು ಇತರ ರಾಜ್ಯ ಸರ್ಕಾರದ ಪ್ರತಿನಿಧಿಗಳು ಸಭೆಯಲ್ಲಿ ಭಾಗವಹಿಸಿದ್ದು, ಸೌಹಾರ್ದಯುತ ಮಾತುಕತೆ ನಡೆಯಿತು ಎಂದು ಜೋಶಿ ಹೇಳಿದರು. ಫೆಬ್ರವರಿ 22 ರಂದು ಇಲ್ಲಿ ರೈತ ಪ್ರತಿನಿಧಿಗಳೊಂದಿಗೆ ಮತ್ತೊಂದು ಸುತ್ತಿನ ಮಾತುಕತೆ ನಡೆಯಲಿದ್ದು, ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಕೇಂದ್ರ ತಂಡವನ್ನು ಮುನ್ನಡೆಸಲಿದ್ದಾರೆ ಎಂದು ಜೋಶಿ ತಿಳಿಸಿದರು. ಆ ಸಭೆಯಲ್ಲಿ ತಾವು ಸಹ ಭಾಗಿಯಾಗುವುದಾಗಿ ಮಾಹಿತಿ ನೀಡಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ರೈತ ಮುಖಂಡ ಸರ್ವಾನ್ ಸಿಂಗ್ ಪಂಧೇರ್, "ಬೆಳೆಗಳ ಮೇಲಿನ ಎಂಎಸ್ಪಿಯ ಕಾನೂನು ಖಾತರಿಯ ವಿಷಯದ ಬಗ್ಗೆ ಸಭೆಯಲ್ಲಿ ವಿವರವಾಗಿ ಚರ್ಚಿಸಲಾಗಿದೆ ಎಂದರು.

ಸಭೆಯಲ್ಲಿ 2004ರಿಂದ 2014ರವರೆಗೆ ಬೆಳೆ ದರದಲ್ಲಿ ಶೇ.100ರಷ್ಟು ಹೆಚ್ಚಳವಾಗಿದೆ ಎಂದು ರೈತ ಮುಖಂಡರು ಗಮನ ಸೆಳೆದರು. ಕಳೆದ 11 ವರ್ಷಗಳಲ್ಲಿ ಹಣದುಬ್ಬರವೂ ಶೇ.59ರಷ್ಟು ಏರಿಕೆಯಾಗಿದ್ದು, ಬೆಳೆ ದರ ಏರಿಕೆಯಿಂದ ರೈತರಿಗೆ ಲಾಭವಾಗಿಲ್ಲ. ಬೆಳೆಯನ್ನು ಎಂಎಸ್ಪಿ ದರದಲ್ಲಿ ಮಾರಾಟ ಮಾಡಿದರೆ ಆಂದೋಲನ ನಡೆಸುವ ಅಗತ್ಯ ಏನಿದೆ ಎಂದು ನಾವು ಹೇಳಿದ್ದೇವೆ. ಕೇಂದ್ರದ ಪ್ರಕಾರ ಹೆಚ್ಚಿನ ಬೆಳೆಗಳು ಎಂಎಸ್ಪಿ ಮೇಲೆ ಮಾರಾಟವಾಗಿದ್ದರೆ, ಕಾನೂನು ಖಾತರಿ ನೀಡಲು ಏನು ತೊಂದರೆ, ಇದು ಇಚ್ಛಾಶಕ್ತಿಯ ಪ್ರಶ್ನೆಯಾಗಿದೆ ಎಂದು ರೈತ ಮುಖಂಡರು ಇದೇ ವೇಳೆ ಆಕ್ರೋಶ ವ್ಯಕ್ತಪಡಿಸಿದರು.

# ನಾಗ್ಪುರದಲ್ಲಿ ಜಿಬಿಎಸ್ ಸಿಂಡ್ರೋಂಗೆ ಮೊದಲ ಬಲಿ



**ನಾಗ್ಪುರ:** ಮಹಾರಾಷ್ಟ್ರದಲ್ಲಿ ಕಾಣಿಸಿಕೊಂಡಿರುವ ಗಿಲೆನ್ ಬರೆ ಸಿಂಡ್ರೋಮ್ ಕಾಯಿಲೆ (ಜಿಬಿಎಸ್) ಗೆ ನಾಗ್ಪುರದ 45 ವರ್ಷದ ವ್ಯಕ್ತಿ ಮೃತಪಟ್ಟಿದ್ದಾರೆ. ನಾಗ್ಪುರದ ಸರ್ಕಾ ಆಸ್ಪತ್ರೆಯಲ್ಲಿ ಆತ ಸಾವನ್ನಪ್ಪಿದ್ದಾನೆ. ಆಸ್ಪತ್ರೆಗೆ ದಾಖಲಾಗಿದ್ದ ಇಬ್ಬರು ಜಿಬಿಎಸ್ ರೋಗಿಗಳಲ್ಲಿ ಒಬ್ಬ ಮೃತಪಟ್ಟಿದ್ದಾರೆ. ಈ ಮೂಲಕ ನಾಗ್ಪುರದಲ್ಲಿ ಜಿಬಿಎಸ್ಗೆ ಮೊದಲ ಬಲಿಯಾಗಿದೆ.

ಪಾರ್ಡಿ ಪ್ರದೇಶದ 45 ವರ್ಷದ ವ್ಯಕ್ತಿ ಈ ಸಿಂಡ್ರೋಮ್ ನಿಂದ ಸಾವನ್ನಪ್ಪಿದ್ದಾರೆ. ಈತನನ್ನು ಆರಂಭದಲ್ಲಿ ಪಾರ್ಶ್ವವಾಯು ಪೀಡಿತ ರೋಗಿ ಎಂದು ಗುರುತಿಸಲಾಗಿತ್ತು. ರೋಗಿಯ ಲಕ್ಷಣಗಳನ್ನು ಗಮನಿಸಿದ ಬಳಿಕ ಅವರಿಗೆ ವೆಂಟಿಲೇಟರ್ ಚಿಕಿತ್ಸೆ ನೀಡಬೇಕಾದ ಅಗತ್ಯವನ್ನು ಅರಿತು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಆರಂಭಿಸಲಾಗಿತ್ತು.

ಅಧಿಕ ರಕ್ತದೊತ್ತ ಹೊಂದಿದ್ದ ಇವರಿಗೆ ಪರೀಕ್ಷೆ ನಡೆಸಿದಾಗ ಜಿಬಿಎಸ್ ದೃಢಪಟ್ಟಿತು. ಫೆ.11ರಂದು ದಾಖಲಾಗಿದ್ದ ವ್ಯಕ್ತಿ ಸ್ಥಿತಿ ಗಂಭೀರವಾಗಿತ್ತು. ಅವರ ಪರಿಸ್ಥಿತಿ ಗಂಭೀರಗೊಂಡು ಸಾವನ್ನಪ್ಪಿದ್ದಾರೆ ಎಂದು ಆಸ್ಪತ್ರೆ ತಿಳಿಸಿದೆ.

ಗಿಲೆನ್ ಬರೆ ಸಿಂಡ್ರೋಮ್ ಕಾಯಿಲೆಯು ಈ ವರ್ಷದ ಆರಂಭದಿಂದ ದೇಶದಲ್ಲಿ ಕಂಡು ಬರುತ್ತಿದ್ದು, ಮಹಾರಾಷ್ಟ್ರದಲ್ಲಿ ಹೆಚ್ಚಿನ ಪ್ರಕರಣಗಳು ದಾಖಲಾಗಿವೆ. ಇದೊಂದು ರೀತಿಯ ವಿಭಿನ್ನ ಬಗೆಯ ಪಾರ್ಶ್ವವಾಯುವಾಗಿದೆ. ಇದು ಚಲನಶೀಲ ನರಗಳ ಮೇಲೆ ಪರಿಣಾಮ ಬೀರುತ್ತದೆ. ಪ್ರತಿರೋಧಕ ವ್ಯವಸ್ಥೆಯ ನರದ ಮೇಲೆ ದಾಳಿ ಮಾಡುತ್ತದೆ. ಇದರಿಂದ ರೋಗಿ ಓಡಾಡುವುದು ಮತ್ತು ಉಸಿರಾಡುವುದು ಕಷ್ಟವಾಗುತ್ತದೆ.

ಇದು ಮಕ್ಕಳಿಗೆ ಮತ್ತು ಹಿರಿಯ ನಾಗರಿಕರಿಗೆ ಅಪಾಯಕಾರಿಯಾಗಿದೆ. ಈ ಲಕ್ಷಣಗಳು ಕಂಡು ಬಂದಾಕ್ಷಣ ವೈದ್ಯರ ಬಳಿ ಕರೆತರುವುದು ಅಗತ್ಯವಾಗಿದೆ. ರೋಗಿಯ ಲಕ್ಷಣದ ಆಧಾರದ ಮೇಲೆ ಅಂದಾಜು ಮಾಡಲಾಗುವುದು. ನರದ ಮೇಲೆ ಪರಿಣಾಮ ಬೀರುವ ರೋಗವಾಗಿದ್ದು, ರೋಗವೂ ನರದ ಮೇಲೆ ವೇಗವಾಗಿ ಪರಿಣಾಮ ಬೀರುತ್ತದೆ. ತಕ್ಷಣಕ್ಕೆ ಇದಕ್ಕೆ ಚಿಕಿತ್ಸೆ ನೀಡದಿದ್ದರೆ, ಅದು ಪ್ರಮಾದಕ್ಕೆ ಗುರಿಯಾಗುತ್ತದೆ ಎಂದು ಡಾಕ್ಟರ್ಸ್ ತಿಳಿಸಿದ್ದಾರೆ.

# ಅಪಘಾತ: ಮಹಾಕುಂಭಕ್ಕೆ ತೆರಳುತ್ತಿದ್ದ 10 ಮಂದಿ ಸಾವು



**ಪ್ರಯಾಗ್ರಾಜ್:** ಪ್ರಯಾಗರಾಜ್–ಮಿರ್ಜಾಪುರ ಹೆದ್ದಾರಿಯಲ್ಲಿ ಮಹಾಕುಂಭಕ್ಕೆ ತೆರಳುತ್ತಿದ್ದ ಛತ್ತೀಸ್ಗಢದ ಭಕ್ತರಿದ್ದ ಕಾರು ಬಸ್ಗೆ ಡಿಕ್ಕಿ ಹೊಡೆದಿದೆ.

ಶುಕ್ರವಾರ ರಾತ್ರಿ 2 ಗಂಟೆಗೆ ಮೇಜಾ ಪ್ರದೇಶದಲ್ಲಿ ಈ ಅಪಘಾತ ಸಂಭವಿಸಿದೆ. ಕಾರಿನಲ್ಲಿ ಪ್ರಯಾಣಿಸುತ್ತಿದ್ದ ಛತ್ತೀಸ್ಗಢದ ಎಲ್ಲಾ 10 ಭಕ್ತರು ಅಪಘಾತದಲ್ಲಿ ಮೃತಪಟ್ಟಿದ್ದಾರೆ. ಬಸ್ನಲ್ಲಿ ಪ್ರಯಾಣಿಸುತ್ತಿದ್ದ ಮಧ್ಯಪ್ರದೇಶದ 19 ಭಕ್ತರು ಗಾಯಗೊಂಡಿದ್ದಾರೆ. ಸುದ್ದಿ ತಿಳಿದು ಸ್ಥಳಕ್ಕೆ ಆಗಮಿಸಿದ ಪೊಲೀಸರು ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಿದ್ದಾರೆ.

ಛತ್ತೀಸ್ಗಢದ ಕೊರ್ಬಾ ಜಿಲ್ಲೆಯ 10 ಮಂದಿ ಬೊಲೆರೊದಲ್ಲಿ ಮಹಾಕುಂಭ ಸ್ನಾನಕ್ಕೆ ತೆರಳುತ್ತಿದ್ದರು. ಕಾರು ರಾತ್ರಿ 2 ಗಂಟೆ ಸುಮಾರಿಗೆ ಪ್ರಯಾಗ್ರಾಜ್–ಮಿರ್ಜಾಪುರ ಹೆದ್ದಾರಿಯಲ್ಲಿ ಭಾರಿ ವೇಗದಲ್ಲಿ ಹಾದು ಹೋಗುತ್ತಿತ್ತು. ಈ ವೇಳೆ ಮಧ್ಯಪ್ರದೇಶದ ರಾಜ್ಗಢ್ ಜಿಲ್ಲೆಯ ಮೇಜಾ ಪ್ರದೇಶದಲ್ಲಿ ಭಕ್ತರು ತುಂಬಿದ್ದ ಬಸ್ಗೆ ಡಿಕ್ಕಿ ಹೊಡೆದಿದೆ. ಬಸ್ ಸವಾರರು ಸಂಗಮ ಸ್ನಾನ ಮುಗಿಸಿ ವಾರಾಣಸಿಗೆ ತೆರಳುತ್ತಿದ್ದರು.

ಅಪಘಾತದ ತೀವ್ರತೆಗೆ ಕಾರು ನಜ್ಜುಗುಜ್ಜಾಗಿದೆ. ಕಾರಿನಲ್ಲಿದ್ದ ಎಲ್ಲರೂ ಗಂಭೀರವಾಗಿ ಗಾಯಗೊಂಡು ಮೃತಪಟ್ಟಿದ್ದಾರೆ. ಬಸ್ನಲ್ಲಿ ಪ್ರಯಾಣಿಸುತ್ತಿದ್ದ ಭಕ್ತರಿಗೂ ಗಾಯಗಳಾಗಿವೆ. ಕಿರುಚಾಟ ಕೇಳಿ ಜನರ ಗುಂಪು ಜಮಾಯಿಸಿತ್ತು. ಅಪಘಾತದ ಮಾಹಿತಿ ಪಡೆದ ಪೊಲೀಸರು ತಕ್ಷಣವೇ ಸ್ಥಳಕ್ಕೆ ಆಗಮಿಸಿದ್ದಾರೆ.

ಕಾರಿನಲ್ಲಿದ್ದವರು ಡಿಕ್ಕಿ ರಭಸಕ್ಕೆ ಅಪ್ಪಚ್ಚಿಯಾಗಿದ್ದರು, ಸಾಕಷ್ಟು ಪ್ರಯತ್ನದ ನಂತರ ಗ್ಯಾಸ್ ಕಟರ್ ಸಹಾಯದಿಂದ ಅವರನ್ನು ಹೊರಕ್ಕೆ ತೆಗೆಯಲಾಗಿದೆ.

ಅಪಘಾತದಲ್ಲಿ ಗಾಯಗೊಂಡವರನ್ನು ಆಸ್ಪತ್ರೆಗೆ ರವಾನಿಸಲಾಗಿದೆ. ಕಾರಿನಲ್ಲಿದ್ದ 10 ಮಂದಿ ಮೃತಪಟ್ಟಿದ್ದಾರೆ ಎಂದು ವೈದ್ಯರು ಘೋಷಿಸಿದ್ದಾರೆ. ಗಾಯಗೊಂಡ 19 ಮಂದಿಯಲ್ಲಿ ನಾಲ್ವರ ಸ್ಥಿತಿ ಚಿಂತಾಜನಕವಾಗಿದೆ ಎಂದು ತಿಳಿದು ಬಂದಿದೆ.

15 ಮಂದಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಅಪಘಾತದ ನಂತರ ಪ್ರಯಾಗರಾಜ್ ಪೊಲೀಸ್ ಕಮಿಷನರ್ ತರುಣ್ ಗಾಬಾ ಮತ್ತು ಡಿಎಂ ರವೀಂದ್ರ ಕುಮಾರ್ ಮಂದರ್ ಕೂಡ ಸ್ಥಳಕ್ಕೆ ಆಗಮಿಸಿ ಘಟನೆಯ ಬಗ್ಗೆ ಮಾಹಿತಿ ಪಡೆದರು.

ಭೀಕರ ಅಪಘಾತದಲ್ಲಿ 10 ಮಂದಿ ಸಾವನ್ನಪ್ಪಿದ್ದಾರೆ ಎಂದು ಮೇಜಾ ಪೊಲೀಸ್ ಠಾಣೆಯ ಇನ್ಸ್ಪೆಕ್ಟರ್ ರಾಜೇಶ್ ಉಪಾಧ್ಯಾಯ ತಿಳಿಸಿದ್ದಾರೆ. ಸುದ್ದಿ ತಿಳಿದು ಸ್ಥಳಕ್ಕೆ ಧಾವಿಸಿ, ಗಾಯಾಳುಗಳನ್ನು ಸ್ಥಳೀಯ ಆಸ್ಪತ್ರೆಗೆ ರವಾನಿಸಿದೆವು . ಘಟನೆ ಬಗ್ಗೆ ಸಂಪೂರ್ಣ ತನಿಖೆ ನಡೆಸಲಾಗುತ್ತಿದೆ. ಮೃತ ದೇಹಗಳನ್ನು ಗುರುತಿಸುವ ಪ್ರಯತ್ನ ನಡೆಯುತ್ತಿದ್ದು, ಗಾಯಾಳುಗಳ ಬಗ್ಗೆಯೂ ಮಾಹಿತಿ ಸಂಗ್ರಹಿಸಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಈ ಅಪಘಾತದ ಸುದ್ದಿ ತಿಳಿದ ತಕ್ಷಣ ಸಿಎಂ ಯೋಗಿ ಆದಿತ್ಯನಾಥ್ ಎಕ್ಸ್ನಲ್ಲಿ ಪೋಸ್ಟ್ ಸಂತಾಪ ವ್ಯಕ್ತಪಡಿಸಿದ್ದಾರೆ. ದುರಂತದಲ್ಲಿ ಸಾವನ್ನಪ್ಪಿದ ಕುಟುಂಬದವರಿಗೆ ನೋವು ಭರಿಸುವ ಶಕ್ತಿಯನ್ನು ಆ ದೇವರು ನೀಡಲಿ ಎಂದು ಪ್ರಾರ್ಥಿಸಿದ್ದಾರೆ. ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆಗೆ ಸೂಚನೆ ನೀಡಲಾಗಿದೆ ಎಂದು ಅವರು ಇದೇ ವೇಳೆ ಸೂಚನೆ ನೀಡಿದ್ದಾರೆ.

# ಮಣಿಪುರದಲ್ಲಿ 9 ಉಗ್ರರನ್ನು ಬಂಧಿಸಿದ ಪೊಲೀಸರು



ಮಣಿಪುರ: ಇಂಫಾಲ್ ಪೂರ್ವ ಮತ್ತು ತೌಬಲ್ ಜಿಲ್ಲೆಗಳಲ್ಲಿ ನಿಷೇಧಿತ ವಿವಿಧ ಸಂಘಟನೆಗಳಿಗೆ ಸೇರಿದ 9 ಉಗ್ರರನ್ನು ಭದ್ರತಾ ಪಡೆಗಳು ಬಂಧಿಸಿವೆ ಎಂದು ಪೊಲೀಸರು ಶನಿವಾರ ತಿಳಿಸಿದ್ದಾರೆ.

ಅಪಹರಣ ಮತ್ತು ಸುಲಿಗೆ ಚಟುವಟಿಕೆಗಳಲ್ಲಿ ಭಾಗಿಯಾಗಿರುವ ನಿಷೇಧಿತ ಸಂಘಟನೆ ಕಂಗ್ಲೇಪಕ್ ಕಮ್ಯುನಿಸ್ಟ್ ಪಕ್ಷದ (ನೊಯಾನ್) ನಾಲ್ವರು ಸದಸ್ಯರನ್ನು ತೌಬಲ್ ಜಿಲ್ಲೆಯ ಚಿಂಗ್ಡೊಂಪಾಕ್ ಪ್ರದೇಶದಲ್ಲಿ ಬಂಧಿಸಲಾಗಿದೆ ಎಂದು ಮಾಹಿತಿ ನೀಡಿದರು.

ಮತ್ತೊಂದು ಕಾರ್ಯಾಚರಣೆಯಲ್ಲಿ, ಇಂಫಾಲ್ ಪೂರ್ವ ಜಿಲ್ಲೆಯ ಖಬೀಸೊಯ್ ಪ್ರದೇಶದಲ್ಲಿ ಸುಲಿಗೆ ಚಟುವಟಿಕೆಯಲ್ಲಿ ತೊಡಗಿದ್ದ ಕೆಸಿಪಿ (ಪಿಡಬ್ಲ್ಯೂಜಿ)ಯ ನಾಲ್ವರು ಸಕ್ರಿಯ ಸದಸ್ಯರನ್ನು ಬಂಧಿಸಲಾಗಿದೆ. ಇಂಫಾಲ್ ಪೂರ್ವ ಜಿಲ್ಲೆಯ ನುಂಗೋಯ್ ಅವಾಂಗ್ ಲೈಕೈ ಪ್ರದೇಶದಿಂದ ಯುಎನ್ಎಲ್ಎಫ್ (ಪಂಬೈ)ನ ಒಬ್ಬ ಸದಸ್ಯನನ್ನು ಅರೆಸ್ಟ್ ಮಾಡಲಾಗಿದೆ. ಈತನ ಬಳಿಯಿದ್ದ ಒನ್ 32 ಪಿಸ್ತೂಲ್ ವಶಕ್ಕೆ ಪಡೆಯಲಾಗಿದೆ. ಈತ ಇಂಫಾಲ್ ನಗರ ಮತ್ತು ಸುತ್ತಮುತ್ತ ಸುಲಿಗೆ ಚಟುವಟಿಕೆಗಳು ಮತ್ತು ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳ ಸಾಗಣೆಯಲ್ಲಿ ತೊಡಗಿಸಿಕೊಂಡಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

ಈ ನಡುವೆ ಭದ್ರತಾ ಸಿಬ್ಬಂದಿ ಎರಡು ಬ್ಯಾರೆಲ್ ಗನ್, ಸ್ಕೋಪ್ ಹೊಂದಿರುವ ಮಾರ್ಪಡಿಸಿದ ಸ್ನೈಪರ್ ರೈಫಲ್, ಒಂದು ದೇಶೀ ನಿರ್ಮಿತ ಪಿಸ್ತೂಲ್, ಐದು ಹ್ಯಾಂಡ್ ಗ್ರೆನೇಡ್ಗಳು, ನಾಲ್ಕು ಐಇಡಿಗಳು, ಐಎನ್ಎಸ್ಎಎಸ್ ರೈಫಲ್ನ ಲೈವ್ ಸುತ್ತುಗಳು, ಎರಡು ಹ್ಯಾಂಡ್ಸೆಟ್ಗಳು ಮತ್ತು 9 ಎಂಎಂ ಪಿಸ್ತೂಲ್ ಮತ್ತು ಚೀನಾ ನಿರ್ಮಿತ ಡ್ರೋನ್ ಅನ್ನು ಹಿಯಾಂಗ್ಲಾಮ್ ನಟೆಖೋಂಗ್ನ ನದಿ ದಂಡೆಯಿಂದ ವಶಪಡಿಸಿಕೊಂಡಿವೆ.

# ಮಾಜಿ ಪ್ರಧಾನಿ ರಿಷಿ ಸುನಕ್ ದಂಪತಿ 2 ದಿನಗಳ ಭಾರತ ಭೇಟಿ



**ಆಗ್ರಾ:** ಇಂಗ್ಲೆಂಡ್ನ ಮಾಜಿ ಪ್ರಧಾನಿ ರಿಷಿ ಸುನಕ್ ಮತ್ತು ಅವರ ಪತ್ನಿ ಅಕ್ಷತಾ ನಾರಾಯಣ ಮೂರ್ತಿ ಅವರು ಎರಡು ದಿನಗಳ ಭೇಟಿಗಾಗಿ ಶನಿವಾರ ಆಗ್ರಾಕ್ಕೆ ಆಗಮಿಸುತ್ತಿದ್ದಾರೆ. ರಾತ್ರಿ ಇಲ್ಲೇ ತಂಗಲಿರುವ ಈ ದಂಪತಿ ತಮ್ಮ ನಿಯೋಗದೊಂದಿಗೆ ತಾಜ್ ಮಹಲ್ಗೆ ಭೇಟಿ ನೀಡಲಿದ್ದಾರೆ. ಈ ನಿಟ್ಟಿನಲ್ಲಿ ಮಾಜಿ ಪ್ರಧಾನಿಯವರ ಎರಡು ದಿನಗಳ ಆಗ್ರಾ ಭೇಟಿಯ ವೇಳಾಪಟ್ಟಿಯನ್ನು ಜಿಲ್ಲಾಡಳಿತ ಬಿಡುಗಡೆ ಮಾಡಿದೆ. ಮಾಜಿ ಪ್ರಧಾನಿ ರಿಷಿ ಸುನಕ್, ಅವರ ಪತ್ನಿ ಮತ್ತು ನಿಯೋಗ ದೆಹಲಿಯಿಂದ ವಿಶೇಷ ವಿಮಾನದ ಮೂಲಕ ಶನಿವಾರ ಎರಡು ದಿನಗಳ ಭೇಟಿಗಾಗಿ ಆಗ್ರಾಕ್ಕೆ ಆಗಮಿಸಲಿದೆ.

ನವದೆಹಲಿಯಿಂದ ವಿಶೇಷ ವಿಮಾನದ ಮೂಲಕ ಖೇರಿಯಾ ಸಿವಿಲ್ ಏರ್ಪೋರ್ಟ್ಗೆ ಶನಿವಾರ ಆಗಮಿಸಲಿದ್ದಾರೆ. ಅಲ್ಲಿಂದ ಅವರು ಶಿಲ್ಪಗ್ರಾಮ್ ಬಳಿ ಇರುವ ಹೋಟೆಲ್ ಒಬೆರಾಯ್ ತಲುಪಲಿದ್ದು, ಅಲ್ಲೇ ರಾತ್ರಿ ಉಳಿಯುತ್ತಾರೆ. ಭಾನುವಾರ ಬೆಳಗ್ಗೆ ತಾಜ್ ಮಹಲ್ಗೆ ಭೇಟಿ ನೀಡಲಿದ್ದಾರೆ. ಇದರೊಂದಿಗೆ ಇತರ ಸ್ಮಾರಕಗಳಿಗೂ ಭೇಟಿ ಕೊಡಲಿದ್ದಾರೆ ಎಂದು ಡಿಎಂ ಅರವಿಂದ ಮಲ್ಲಪ್ಪ ಬಂಗಾರಿ ತಿಳಿಸಿದ್ದಾರೆ.

ಭಾನುವಾರವೂ ಹೋಟೆಲ್ನಲ್ಲಿ ರಾತ್ರಿ ತಂಗಲಿದ್ದಾರೆ. ನಂತರ ಫೆಬ್ರವರಿ 17 ಸೋಮವಾರ ಬೆಳಗ್ಗೆ 9 ಗಂಟೆಗೆ ಖೇರಿಯಾ ವಿಮಾನ ನಿಲ್ದಾಣದಿಂದ ದೆಹಲಿಗೆ ಹೊರಡಲಿದ್ದಾರೆ. ಬ್ರಿಟನ್ನ ಮಾಜಿ ಪ್ರಧಾನಿ ರಿಷಿ ಸುನಕ್ ಭಾರತ ಮತ್ತು ಭಾರತೀಯ ಸಂಸ್ಕೃತಿಯೊಂದಿಗೆ ಆಳವಾದ ಬಾಂಧವ್ಯವನ್ನು ಹೊಂದಿದ್ದಾರೆ. ಅವರ ಪತ್ನಿ ಅಕ್ಷತಾ ನಾರಾಯಣ ಮೂರ್ತಿ ಅವರು ಪ್ರಸಿದ್ಧ ಫ್ಯಾಷನ್ ಡಿಸೈನರ್. ಅಕ್ಷತಾ ನಾರಾಯಣ ಮೂರ್ತಿ ಮತ್ತು ರಿಷಿ ಸುನಕ್ ತಾಜ್ ಮಹಲ್ ನೋಡುವ ಬಯಕೆಯನ್ನು ಹಲವು ಬಾರಿ ವ್ಯಕ್ತಪಡಿಸಿದ್ದರು.


# ಸವದತ್ತಿ ಎಲ್ಲಮ್ಮ ದೇವಿ ಜಾತ್ರಾ ಮಹೋತ್ಸವ

**ನಾಗಮಂಗಲ:** ಪಟ್ಟಣದ ಸಹಸ್ರಾರು ಭಕ್ತರ ಆರಾಧ್ಯ ದೇವಿ ಸವದತ್ತಿ ಎಲ್ಲಮ್ಮನವರ ಜಾತ್ರಾ ಮಹೋತ್ಸವವು ಫೆ.17 ಮತ್ತು 18 ರಂದು ವಿಜೃಂಭಣೆಯಿಂದ ಜರುಗಲಿದೆ ಎಂದು ಪ್ರಧಾನ ಅರ್ಚಕರಾದ ಎನ್ ಬಿ ನರಸಿಂಹರವರು ತಿಳಿಸಿದ್ದಾರೆ.

ಅವರು ನಾಗಮಂಗಲ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ಇಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರುಸೋಮವಾರದಂದು(17ರ) ಬೆಳಿಗ್ಗೆ 11:00 ಗಂಟೆಗೆ ನಾಗಮಂಗಲ ಪಟ್ಟಣದ ಪ್ರಮುಖ ಬೀದಿಗಳಲ್ಲಿ ದೇವಿಯ ಉತ್ಸವ ಮಧ್ಯಾಹ್ನ 3:30ಕ್ಕೆ ದೀಪ ಪ್ರಜ್ವಾಲನಾ, ಅನುಜ್ಞೆ ಗಂಗೆ ಪೂಜೆ, ಮಹಾಗಣಪತಿ ಹೋಮ, ನವಗ್ರಹ ಶಾಂತಿ ಹೋಮ, ಮೃತ್ಯುಂಜಯ ಹೋಮ ಹಾಗೂ ದುರ್ಗಿ ಹೋಮ ಸಂಜೆ 6:00 ಗಂಟೆಗೆ ಮಹಾ ಮಂಗಳಾರತಿ,ತೀರ್ಥ ಪ್ರಸಾದ ವಿನಿಯೋಗ ಮತ್ತು ಜಮದಗ್ನಿ ಮತ್ತು ಸವದತ್ತಿ ಎಲ್ಲಮ್ಮನವರ ಕಲ್ಯಾಣೋತ್ಸವ ಕಾರ್ಯಕ್ರಮಗಳು ಜರುಗಲಿವೆ.

ದಿನಾಂಕ 18.02.2025 ರ ಮಂಗಳವಾರ ಬೆಳಿಗ್ಗೆ 9:30 ಗಂಟೆಗೆ ಟಿ ಬಿ ಸರ್ಕಲ್ ನಲ್ಲಿರುವ ಗಣಪತಿ ದೇವಸ್ಥಾನದಿಂದ ಹೂ ಹೊಂಬಾಳೆ, ವೀರಗಾಸೆ ಕುಣಿತ ಮತ್ತು ತಮಟೆ ವಾದ್ಯದೊಂದಿಗೆ ಶ್ರೀ ಸವದತ್ತಿ ಎಲ್ಲಮ್ಮ, ಆಂಜನೇಯ ಸ್ವಾಮಿ, ಬಡಗುಡಮ್ಮ ದೇವರುಗಳ ಕಳಸ ಉತ್ಸವ . ಸವದತ್ತಿ ಎಲ್ಲಮ್ಮ ದೇವಿಯ ರಥೋತ್ಸವ ಜಾತ್ರಾ ಮಹೋತ್ಸವ ಮತ್ತು ಮಧ್ಯಾಹ್ನ 1:00 ಗಂಟೆಗೆ ಅನ್ನ ಸಂತರ್ಪಣೆಯನ್ನು ಏರ್ಪಡಿಸಲಾಗಿದ್ದು ದೇವಿಯ ಸದ್ಭಕ್ತರು ಎಲ್ಲಾ ಕಾರ್ಯಕ್ರಮಗಳಲ್ಲಿಯು ಭಾಗವಹಿಸಿ ಜಾತ್ರಾ ಮಹೋತ್ಸವವನ್ನು ಯಶಸ್ವಿಗೊಳಿಸಬೇಕೆಂದು ಕೋರಿದರು.

# ಮಹಾಕುಂಭಕ್ಕೆ ಶಿಕ್ಷಕರಿಗೆ 2 ದಿನ ರಜೆ ಕೊಡಿ



**ಬಿಹಾರ:** ಉತ್ತರ ಪ್ರದೇಶದ ಪ್ರಯಾಗ್ರಾಜ್ನಲ್ಲಿ ನಡೆಯುವ ಮಹಾಕುಂಭಕ್ಕೆ ದೇಶ – ವಿದೇಶಗಳಿಂದ ಭಕ್ತರು ಆಗಮಿಸುತ್ತಿದ್ದಾರೆ. ಮಹಾಜಾತ್ರೆಯನ್ನು ಕಣ್ತುಂಬಿಕೊಂಡು, ಸಾಧು ಸಂತರಿಂದ ಆಶೀರ್ವಾದ ಪಡೆದು ಪುನೀತರಾಗುತ್ತಿದ್ದಾರೆ. ಆದರೆ, ರಜೆ ಇಲ್ಲದ ಕಾರಣ ಸರ್ಕಾರಿ ಉದ್ಯೋಗದಲ್ಲಿರುವವರು ಮೇಳದಲ್ಲಿ ಪಾಲ್ಗೊಳ್ಳಲು ಸಾಧ್ಯವಾಗುತ್ತಿಲ್ಲ. ಈ ಬಗ್ಗೆ ಬಿಹಾರದ ಬರಚಟ್ಟಿ ಶಾಸಕಿ ಜ್ಯೋತಿ ಮಾಂಝಿ ಸಿಎಂ ನಿತೀಶ್ ಕುಮಾರ್ ಮುಂದೆ ದೊಡ್ಡ ಬೇಡಿಕೆ ಇಟ್ಟಿದ್ದಾರೆ. ಜ್ಯೋತಿ ಮಾಂಝಿ ಅವರು ಮುಖ್ಯಮಂತ್ರಿಗಳಿಗೆ ಲಿಖಿತ ಅರ್ಜಿ ಸಲ್ಲಿಸಿದ್ದು, ಎರಡು ದಿನಗಳ ಕಾಲ ಸರ್ಕಾರಿ ರಜೆ ಘೋಷಿಸುವಂತೆ ಮನವಿ ಮಾಡಿದ್ದಾರೆ. ಗಯಾಕ್ಕೆ ಭೇಟಿ ನೀಡಿದ ಸಿಎಂ ಶಂಕುಸ್ಥಾಪನೆ ನೆರವೇರಿಸಿದರು. ಈ ವೇಳೆ, ಬರಚಟ್ಟಿ ಶಾಸಕಿ ಜ್ಯೋತಿ ಮಾಂಝಿ, ಸರ್ಕಾರಿ ನೌಕರರ ಪರವಾಗಿ ಅರ್ಜಿ ಸಲ್ಲಿಸಿದರು. ಮಹಾಕುಂಭ ಸ್ನಾನಕ್ಕೆ ತೆರಳಲು ಸರಕಾರಿ ನೌಕರಿಯಲ್ಲಿರುವ ಶಿಕ್ಷಕರು ಹಾಗೂ ನೌಕರರಿಗೆ ಎರಡು ದಿನ ಸರಕಾರಿ ರಜೆ ನೀಡುವಂತೆ ಬೇಡಿಕೆ ಇಟ್ಟರು.

ಸರ್ಕಾರಿ ಶಿಕ್ಷಕರು, ನೌಕರರು ಪ್ರತಿದಿನ ಕೆಲಸಕ್ಕೆ ಹೋಗುತ್ತಾರೆ. ಮಹಾಕುಂಭಕ್ಕೆ ರಜೆ ಘೋಷಿಸಬೇಕು ಎಂಬುದು ಈ ಜನರ ಆಗ್ರಹವಾಗಿದೆ. ಎಲ್ಲಾ ಸರ್ಕಾರಿ ನೌಕರರು ಮತ್ತು ಶಿಕ್ಷಕರಿಗೆ ಎರಡು ದಿನ ಸರ್ಕಾರಿ ರಜೆ ನೀಡಬೇಕು ಎಂದು ಸಿಎಂ ನಿತೀಶ್ ಕುಮಾರ್ ಅವರಲ್ಲಿ ಮನವಿ ಮಾಡಿಕೊಳ್ಳುತ್ತಿದ್ದೇನೆ ಎಂದು ಬರಚಟ್ಟಿ ಶಾಸಕಿ ಜ್ಯೋತಿ ಮಾಂಝಿ ಹೇಳಿದರು.

ಸರ್ಕಾರಿ ನೌಕರರ ಪರ ವಕಾಲತ್ತು ಈ ಬೇಡಿಕೆ ಬಗ್ಗೆ ಪತ್ರಕರ್ತರ ಜತೆ ಮಾತನಾಡಿದ ಜ್ಯೋತಿ ಮಾಂಝಿ, ತಮ್ಮ ಬೇಡಿಕೆಗಳನ್ನು ನೌಕರರು ತಮ್ಮ ಮುಂದಿಟ್ಟರು. ಸರ್ಕಾರಿ ನೌಕರರು ನಿಯಮಗಳಿಗೆ ಬದ್ಧರಾಗಿರುತ್ತೇವೆ ಎಂದು ಹೇಳಿದರು. ಅನೇಕ ಶಿಕ್ಷಕರು ಮತ್ತು ಇತರ ಇಲಾಖೆಗಳ ಸರ್ಕಾರಿ ನೌಕರರು ಬಿಹಾರದ ಸರ್ಕಾರಿ ನೌಕರರಿಗೆ ಮಹಾಕುಂಭ ಸ್ಥಳಕ್ಕೆ ಅವಕಾಶ ನೀಡುವಂತೆ ನನ್ನ ಬಳಿ ತಮ್ಮ ಅಹವಾಲು ಸಲ್ಲಿಕೆ ಮಾಡಿದರು, ನನಗೂ ಇದು ಸರಿ ಎನಿಸಿತು. ಹಾಗಾಗಿ ಈ ಬಗ್ಗೆ ಸಿಎಂ ಬಳಿ ಪ್ರಾರ್ಥನೆ ಸಲ್ಲಿಸಿದೆ. ಅಷ್ಟೇ ಅಲ್ಲ ಮಹಾಕುಂಭ ಸ್ನಾನಕ್ಕೆ ಎರಡು ದಿನ ಸರ್ಕಾರಿ ರಜೆ ಘೋಷಿಸುವಂತೆ ಲಿಖಿತ ಅರ್ಜಿ ಕೊಟ್ಟಿದ್ದೇನೆ ಎಂದು ಅವರು ಸ್ಪಷ್ಟನೆ ನೀಡಿದರು.

ಸಿಎಂ ಬೇಡಿಕೆ ಈಡೇರಿಸಲಿದ್ದಾರೆ ಎಂಬ ವಿಶ್ವಾಸ ಇದೆ ಶಾಸಕಿ ಜ್ಯೋತಿ ಮಾಂಝಿ ಕೂಡ ತಮ್ಮ ಬೇಡಿಕೆ ಈಡೇರುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಮುಖ್ಯಮಂತ್ರಿ ನಿತೀಶ್ ಕುಮಾರ್ ಈ ಬೇಡಿಕೆ ಈಡೇರಿಸಲಿದ್ದಾರೆ. ಬಿಹಾರದಲ್ಲಿ ಎರಡು ದಿನಗಳ ರಜೆ ಘೋಷಿಸಿದರೆ, ಸರ್ಕಾರಿ ನೌಕರರು ಪ್ರಯಾಗ್ರಾಜ್ ಮಹಾಕುಂಭದಲ್ಲಿ ಸ್ನಾನ ಮಾಡಲು ಅವಕಾಶ ನೀಡುತ್ತಾರೆ ಎಂದು ಹೇಳಿದರು.

# ಮಹಾಕುಂಭ: ವಂದೇ ಭಾರತ್ ವಿಶೇಷ ರೈಲು ಸಂಚಾರ




**ನವದೆಹಲಿ:** ಮಹಾ ಕುಂಭಮೇಳಕ್ಕೆ ಭೇಟಿ ನೀಡಲು ಉದ್ದೇಶಿಸಿರುವ ಭಕ್ತರ ಅನುಕೂಲಕ್ಕಾಗಿ ಉತ್ತರ ರೈಲ್ವೆಯು ಫೆಬ್ರವರಿ 15, 16 ಮತ್ತು 17 ರಂದು ನವದೆಹಲಿ ಮತ್ತು ವಾರಾಣಸಿ (ಪ್ರಯಾಗರಾಜ್ ಮೂಲಕ) ನಡುವೆ ವಂದೇ ಭಾರತ್ ವಿಶೇಷ ರೈಲು ಸಂಖ್ಯೆ 02252/02251 ಓಡಿಸಲಿದೆ.

ವಂದೇ ಭಾರತ್ ವಿಶೇಷ ರೈಲು ಸಂಖ್ಯೆ 02252 ನವದೆಹಲಿಯಿಂದ ಬೆಳಗ್ಗೆ 5.30 ಕ್ಕೆ (ಪ್ರಯಾಗರಾಜ್ ಮೂಲಕ 12.00 ಗಂಟೆಗೆ) ವಾರಾಣಸಿಗೆ 14.20 ಗಂಟೆಗೆ ತಲುಪಲಿದೆ ಎಂದು ಉತ್ತರ ರೈಲ್ವೆ ಹೊರಡಿಸಿದ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಲಾಗಿದೆ. ಅಲ್ಲಿಂದ ವಾಪಸ್ ರೈಲು ಸಂಖ್ಯೆ 02251 ವಾರಾಣಸಿಯಿಂದ 15:15 ಗಂಟೆಗೆ (ಪ್ರಯಾಗರಾಜ್ 17.20 ಗಂಟೆಗೆ) ಹೊರಟು ಅದೇ ದಿನ 23.50 ಗಂಟೆಗೆ ನವದೆಹಲಿ ತಲುಪಲಿದೆ ಎಂದು ಉತ್ತರ ರೈಲ್ವೆಯ ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಹಿಮಾಂಶು ಶೇಖರ್ ಉಪಾಧ್ಯಾಯ ಮಾಹಿತಿ ಒದಗಿಸಿದ್ದಾರೆ.

ವಾರಾಂತ್ಯದಲ್ಲಿ ಕುಂಭಮೇಳಕ್ಕೆ ನೂಕು ನುಗ್ಗಲು ಉಂಟಾದ ಹಿನ್ನೆಲೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. 144 ವರ್ಷಗಳಿಗೊಮ್ಮೆ ನಡೆಯುವ ಮಹಾಕುಂಭ ಮೇಳ ಜನವರಿಯಿಂದ ಆರಂಭವಾಗಿದ್ದು, ಇದೇ ಫೆಬ್ರವರಿ 26 ರಂದು ಮಹಾ ಶಿವರಾತ್ರಿ ದಿವಸ ಅಂತ್ಯಗೊಳ್ಳಲಿದೆ. ಈಗಾಗಲೇ ಮಹಾಕುಂಭದಲ್ಲಿ ಸುಮಾರು 50 ಕೋಟಿ ಜನ ಪುಣ್ಯಸ್ನಾನ ಮಾಡಿದ್ದಾರೆ.

ಇದು ಮೆಕ್ಕಾ– ಮದಿನಾ ಹಾಗೂ ರಿಯೋ ಡಿ ಜನೈರೋ ದಲ್ಲಿ ನಡೆಯುವಂತಹ ಇವೆಂಟ್ ಗಳನ್ನು ಮೀರಿದ ಜನಸಂಖ್ಯೆಯ ಸೇರುವಿಕೆಗೆ ಕಾರಣವಾಗಿ ದಾಖಲೆ ಬರೆದಿದೆ. ಅಪರೂಪದ ಮಹಾಕುಂಭವನ್ನು ಕಣ್ತುಂಬಿಕೊಳ್ಳಲು ಜನ ಪ್ರಯಾಗರಾಜ್ ಗೆ ಬರುತ್ತಿರುವುದರಿಂದ ಅಲ್ಲಿ ಕಿಮೀ ಗಟ್ಟಲೇ ಟ್ರಾಫಿಕ್ ಜಾಮ್ ಕಂಡು ಬರುತ್ತಿದೆ. ಇದನ್ನು ಸುಗಮಗೊಳಿಸಲು ಉತ್ತರಪ್ರದೇಶ ಪೊಲೀಸರು ಹರಸಾಹಸ ಮಾಡಬೇಕಾದ ಪರಿಸ್ಥಿತಿ ಇದೆ.

ಇನ್ನು ಭಾರಿ ಜನಸಂದಣಿ ಹಿನ್ನೆಲೆಯಲ್ಲಿ ಸಂಗಮ್ ರೈಲ್ವೆ ನಿಲ್ದಾಣವನ್ನು ಕೆಲ ದಿನಗಳ ಕಾಲ ಬಂದ್ ಮಾಡಲಾಗಿತ್ತು. ಇನ್ನು ಉತ್ತರಪ್ರದೇಶದ ಅಕ್ಕಪಕ್ಕದ ರಾಜ್ಯಗಳಿಂದ ಪ್ರಯಾಗರಾಜ್ ಕಡೆ ಬರುತ್ತಿದ್ದ ವಾಹನಗಳನ್ನು ಅಲ್ಲಲ್ಲೇ ತಡೆದು ನಿಲ್ಲಿಸಲಾಗಿತ್ತು. ಟ್ರಾಫಿಕ್ ಕಡಿಮೆ ಆಗುವುದನ್ನು ಖಚಿತ ಪಡಿಸಿಕೊಂಡು ಬಿಡುವ ವ್ಯವಸ್ಥೆಯನ್ನು ಅಲ್ಲಲ್ಲಿ ಪೊಲೀಸರು ಮಾಡಿದ್ದರು.

ಇನ್ನು ಭಾರಿ ಟ್ರಾಫಿಕ್ ಜಾಮ್ ಬಗ್ಗೆ ಉತ್ತರಪ್ರದೇಶದ ವಿರೋಧ ಪಕ್ಷದ ನಾಯಕ ಅಖಿಲೇಶ್ ಯಾದವ್ ತೀವ್ರವಾಗಿ ಟೀಕಿಸಿದ್ದರು. ಸುಗಮ ಸಂಚಾರ ಹಾಗೂ ಜನರ ಕಷ್ಟಗಳನ್ನು ಪರಿಸಲು ಸರ್ಕಾರ ಮುಂದಾಗಬೇಕು ಎಂದು ಒತ್ತಾಯಿಸಿದ್ದರು.

# ವೀಸಾ ನಿಯಮಗಳಲ್ಲಿ ಬದಲಾವಣೆ ಭಾರತೀಯರ ಮೇಲೆ ಪರಿಣಾಮ




ಅಮೆರಿಕ: ವೀಸಾ ನವೀಕರಣಕ್ಕೆ ತಂದಿದ್ದ 'ಡ್ರಾಪ್ ಬಾಕ್ಸ್' ನಿಯಮಗಳನ್ನು ಅಮೆರಿಕ ಸರ್ಕಾರ ಬಿಗಿಗೊಳಿಸಿದೆ ಎಂದು ವರದಿಯಾಗಿದೆ. ಇನ್ನು ಮುಂದೆ ಈ ನೀತಿಯ ಅಡಿ ಕಳೆದ 12 ತಿಂಗಳುಗಳಲ್ಲಿ ಅವಧಿ ಮುಗಿದ ವೀಸಾಗಳನ್ನು ಸಂದರ್ಶನವಿಲ್ಲದೇ ನವೀಕರಿಸಬಹುದು. ಮೊದಲು ಈ ಸೌಲಭ್ಯವು 48 ತಿಂಗಳ ಅವಧಿಗೆ ಲಭ್ಯವಿತ್ತು. ಇತ್ತೀಚಿನ ನಿಯಮಗಳನ್ನು ತಕ್ಷಣವೇ ಜಾರಿಗೆ ತರಲಾಗಿದೆ ಎಂಬಂತೆ ಕಂಡು ಬರುತ್ತಿದೆ. ಆದರೆ ಈ ಬಗ್ಗೆ ಯಾವುದೇ ಅಧಿಕೃತ ಘೋಷಣೆ ಹೊರಬಿದ್ದಿಲ್ಲ.

ವೀಸಾ ಅರ್ಜಿ ಕೇಂದ್ರಗಳಲ್ಲಿ ಈಗಾಗಲೇ ಹೊಸ ನಿಯಮಗಳನ್ನು ಜಾರಿಗೊಳಿಸಲಾಗುತ್ತಿದೆ ಎಂದು ರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ. ಹೊಸ ನಿಯಮಗಳೊಂದಿಗೆ, ಊ–1ಃ ಸೇರಿದಂತೆ ಃ1/ಃ2 ನಂತಹ ವಲಸೆಯೇತರ ವೀಸಾಗಳ ಅರ್ಜಿಗಳು ತೀವ್ರವಾಗಿ ಪರಿಣಾಮ ಬೀರುತ್ತವೆ. ವೀಸಾ ನವೀಕರಣಕ್ಕಾಗಿ ಅವರು ದೀರ್ಘಕಾಲ ಕಾಯಬೇಕಾಗಬಹುದು.

ಈಗಿರುವ ನಿಯಮದ ಪ್ರಕಾರ ಕಳೆದ 48 ತಿಂಗಳಲ್ಲಿ ವೀಸಾ ಅವಧಿ ಮುಗಿದಿರುವವರು ಡ್ರಾಪ್ ಬಾಕ್ಸ್ ವ್ಯವಸ್ಥೆಯ ಮೂಲಕ ನವೀಕರಣಕ್ಕೆ ಅರ್ಜಿ ಸಲ್ಲಿಸಬಹುದು. ಅಂಥವರಿಗೆ ಸಂದರ್ಶನವೇ ಇರಲಿಲ್ಲ. ಈಗ ನಿಯಮವನ್ನು ಬದಲಿಸಿ, ಕಳೆದ 12 ತಿಂಗಳುಗಳಲ್ಲಿ ವೀಸಾ ಅವಧಿ ಮುಗಿದವರಿಗೆ ಮಾತ್ರ ಡ್ರಾಪ್ಬಾಕ್ಸ್ನಲ್ಲಿ ನವೀಕರಿಸಲು ಅನುಮತಿಸಲಾಗಿದೆ. ಅಂದರೆ ವೀಸಾ ಮುಕ್ತಾಯ ದಿನಾಂಕವನ್ನು ದಾಟಿದವರು ಮತ್ತು ನವೀಕರಣಕ್ಕಾಗಿ ಮತ್ತೆ ವೈಯಕ್ತಿಕ ಸಂದರ್ಶನಗಳಿಗೆ ಹಾಜರಾಗಬೇಕಾಗುತ್ತದೆ

ಕೋವಿಡ್ಗೆ ಮೊದಲು ಸಂದರ್ಶನವಿಲ್ಲದೇ ವೀಸಾ ನವೀಕರಣಕ್ಕಾಗಿ ಈ 12 ತಿಂಗಳ ನಿಯಮ ಜಾರಿಯಲ್ಲಿತ್ತು. ಅದರ ನಂತರ, ವೀಸಾ ಅನುದಾನ ಮತ್ತು ನವೀಕರಣಕ್ಕೆ ತೆಗೆದುಕೊಂಡ ಸಮಯವನ್ನು ಗಮನದಲ್ಲಿಟ್ಟುಕೊಂಡು, ಈ 'ಡ್ರಾಪ್ಬಾಕ್ಸ್' ನೀತಿಯನ್ನು 2022 ರಲ್ಲಿ ಜಾರಿಗೆ ತರಲಾಗಿತ್ತು. ಅಂದಿನಿಂದ ಕಳೆದ 48 ತಿಂಗಳಲ್ಲಿ ಅವಧಿ ಮೀರಿದವರೂ ಸಂದರ್ಶನವಿಲ್ಲದೆ ನವೀಕರಣಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. ಈಗ ಟ್ರಂಪ್ ಸರ್ಕಾರ ಹಳೆಯ ವಿಧಾನವನ್ನು ಮರಳಿ ತರಲು ಮುಂದಾಗಿದೆ. ನಾಲ್ಕು ವರ್ಷಗಳ ಅವಧಿ ತೆಗೆದು ಹಾಕಿರುವುದು ಬಹಳಷ್ಟು ಜನರಿಗೆ ತೊಂದರೆಯನ್ನುಂಟು ಮಾಡುವ ಸಾಧ್ಯತೆಗಳಿವೆ.

ವೀಸಾ ನವೀಕರಣಕ್ಕಾಗಿ 'ಡ್ರಾಪ್ಬಾಕ್ಸ್' ನಿಯಮಗಳಲ್ಲಿನ ಬದಲಾವಣೆಗಳಿಂದಾಗಿ ಭಾರತೀಯ ಅರ್ಜಿದಾರರಿಗೆ ವೀಸಾ ನವೀಕರಣವು ಮತ್ತಷ್ಟು ವಿಳಂಬವಾಗಲಿದೆ. ಈಗಾಗಲೇ ದೆಹಲಿ ಮತ್ತು ಮುಂಬೈನಂತಹ ಪ್ರಮುಖ ನಗರಗಳಲ್ಲಿ, ಃ1/ಃ2 ವೀಸಾ ಅರ್ಜಿದಾರರು ಸಂದರ್ಶನ ನೇಮಕಾತಿಗಳಿಗಾಗಿ 440 ದಿನಗಳಿಗಿಂತ ಹೆಚ್ಚು ಕಾಲ ಕಾಯುತ್ತಿದ್ದಾರೆ. ಈಗ ಹೆಚ್ಚು ಹೆಚ್ಚು ಮಂದಿ ಸಂದರ್ಶನಕ್ಕೆ ಬಂದರೆ ಈ ವೀಸಾ ನೀಡಿಕೆ ಮತ್ತಷ್ಟು ವಿಳಂಬವಾಗುವ ಸಾಧ್ಯತೆ ಇದೆ. ಡ್ರಾಪ್ಬಾಕ್ಸ್ ಅನ್ನು ಅವಲಂಬಿಸಿರುವ ವ್ಯಾಪಾರ ಪ್ರಯಾಣಿಕರು ಮತ್ತು ವೃತ್ತಿಪರರು ವೀಸಾಗಳನ್ನು (ಊ–1ಃ) ನವೀಕರಿಸಲು ಸಂದರ್ಶನ ಸ್ಲಾಟ್ಗಳಿಗಾಗಿ ಕಾಯಬೇಕಾಗುತ್ತದೆ.

# ‘ಬ್ರೇಕಪ್ ಆದ ಬೇಸರಕ್ಕೆ ಬಿಕಿನಿ, ಬ್ರೇಕ್ ಬೇಕು ಅಂತ ಬಾಲಿಗೆ ಹೋದೆ’



ಇಂದು ಸೋಶಿಯಲ್ ಮೀಡಿಯಾದಲ್ಲಿ ಪಾಸಿಟಿವ್ ಪ್ರತಿಕ್ರಿಯೆಗಿಂತ ಜಾಸ್ತಿ ನೆಗೆಟಿವ್ ಮಾತುಗಳೇ ಕೇಳಿ ಬರುತ್ತವೆ. ಅದರಲ್ಲಿಯೂ ನಟಿಯರ ಸೋಶಿಯಲ್ ಮೀಡಿಯಾ ಅಕೌಂಟ್‌ಗಳಲ್ಲೇ ನೆಗೆಟಿವ್ ಕಾಮೆಂಟ್‌ಗಳು ರಾರಾಜಿಸೋದು ಜಾಸ್ತಿ.

ನಟಿ ನಮ್ರತಾ ಗೌಡ ಒಮ್ಮೆ ಬಿಕಿನಿ ಫೋಟೋದಿಂದ ಸಾಕಷ್ಟು ಮಾತುಗಳನ್ನು ಕೇಳುವ ಹಾಗಾಯ್ತು. ಬಾಲಿ ಪ್ರವಾಸ ಹೋದಾಗ ನಮ್ರತಾ ಗೌಡ ಅವರು ಬಿಕಿನಿ ಧರಿಸಿದ್ದರು. ಈ ಫೋಟೋಗಳನ್ನು ಅವರು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದರು. ಆಗೆಲ್ಲ ಪಾಸಿಟಿವ್, ನೆಗೆಟಿವ್ ಪ್ರತಿಕ್ರಿಯೆ ಸಿಕ್ಕಿತ್ತು. ಈ ಬಗ್ಗೆ ಅವರು ಆರ್‌ಜೆ ರಾಜೇಶ್ ಯುಟ್ಯೂಬ್ ಚಾನೆಲ್‌ನಲ್ಲಿ ಮಾತನಾಡಿದ್ದಾರೆ.

“ಬ್ರೇಕಪ್ ಆಗಿ ಆರು ತಿಂಗಳಾಗಿತ್ತು. ನಾನು ಜೀವನದಲ್ಲಿ ಏನಾದರೂ ಸಾಧಿಸಬೇಕು ಅಂತ ಅನಿಸಿತು. ಆ ರೆಬೆಲ್ ಹಂತ ನನ್ನದಾಗಿತ್ತು. ಬ್ರೇಕಪ್ ಆದರೆ ಹುಡುಗರು ಸಿಕ್ಸ್‌ಪ್ಯಾಕ್ ಮಾಡ್ತಾರೆ, ನಾನು ಬಿಕಿನಿ ಬಾಡಿ ಮಾಡಿಕೊಳ್ಳಬೇಕು ಅಂತ ಅನಿಸಿತ್ತು. ಭಾವನಾತ್ಮಕವಾಗಿ ನಾನು ತುಂಬ ಒದ್ದಾಡ್ತಿದ್ದೆ. ನನಗೊಂದು ಬ್ರೇಕ್ ಬೇಕಿತ್ತು. ನಾನು ಸಿಕ್ಕಾಪಟ್ಟೆ ಡಯೆಟ್ ಮಾಡಿದೆ, ವರ್ಕೌಟ್ ಮಾಡಿದೆ.

ಬಿಕಿನಿ ಬಾಡಿ ತೋರಿಸೋಕೆ ಹಾಗೆ ನಾವು ವರ್ಕೌಟ್ ಮಾಡಬೇಕಾಗುತ್ತದೆ. ಐಶ್ವರ್ಯಾ ಸಿಂಧೋಗಿ ನಾನು ಸೇರಿಕೊಂಡು ಬಾಲಿಗೆ ಹೋದೆವು. ಎಲ್ಲವನ್ನು ನಾವೇ ರಿಸರ್ಚ್ ಮಾಡಿ, ರೂಮ್ ಬುಕ್ ಮಾಡಿದೆವು, ಡ್ರೈವರ್ ಬುಕ್ ಮಾಡಿಕೊಂಡೆವು” ಎಂದು ನಮ್ರತಾ ಗೌಡ ಹೇಳಿದ್ದಾರೆ.

## ಬಾಲಿ ಟ್ರಿಪ್ ಯಾಕೆ ಫೇಮಸ್ ಆಯ್ತು?

“ನಾವಂತೂ ಫುಲ್ ಶಾಪ್ ಮಾಡಿಕೊಂಡು ಬಾಲಿಗೆ ಹೋದೆ. ಬಾಲಿಯಿಂದ ಬೆಂಗಳೂರಿಗೆ ಬರುತ್ತಿದ್ದಂತೆ ಫುಲ್ ಟ್ರೋಲ್ ಆಗಿದೆ. ನಾನು ವರ್ಕೌಟ್ ಮಾಡಿರೋ ಬಾಡಿ ಅದು, ನನ್ನ ಬಟ್ಟೆ ಅದು, ನಾನು ದುಡಿದ ದುಡ್ಡಿನಲ್ಲಿ ತಗೊಂಡ ಬಿಕಿನಿ ಅದು. ಆಗ ನಾನು ತಪ್ಪು ಮಾಡಿದ್ನಾ ಅಂತ ಅನಿಸಿತು. ನನ್ನ ತಾಯಿ ಬಳಿ ಕೇಳಿದಾಗ ಅವರು ಏನೂ ತಪ್ಪಿಲ್ಲ ಅಂದ್ರು. ಆಗ ಸಮಾಧಾನ ಆಯ್ತು. ನಾನು ಟ್ರೋಲ್‌ಗಳ ಬಗ್ಗೆ, ನೆಗೆಟಿವ್ ಕಾಮೆಂಟ್‌ಗಳ ಬಗ್ಗೆ ನಾನು ರಿಯಾಕ್ಟ್ ಮಾಡಲಿಲ್ಲ. ಹೀಗಾಗಿ ನನ್ನ ಬಾಲಿ ಟ್ರಿಪ್ ಮೆಮೊರೆಬೆಲ್ ಆಗಿ ಉಳಿದಿದೆ” ಎಂದು ನಮ್ರತಾ ಗೌಡ ಅವರು ಹೇಳಿದ್ದಾರೆ.

## ನನ್ನ ದುಡ್ಡು, ನನ್ನ ಬಟ್ಟೆ!

“ಬಿಕಿನಿ ಹಾಕಿದಮೇಲೆ, ಬಿಗ್ ಬಾಸ್ ಶೋ ಆದನಂತರ ಸಿಕ್ಕಾಪಟ್ಟೆ ನೆಗೆಟಿವ್ ಮಾತು ಬಂತು. ನನ್ನ ತಂದೆ-ತಾಯಿ ಅಥವಾ ಮನೆಯಲ್ಲಿ ಆ ರೀತಿ ಭಾಷೆಯನ್ನು ಕೇಳಲು ಕೂಡ ರೆಡಿ ಇರೋದಿಲ್ಲ. ಆ ನೆಗೆಟಿವಿಟಿ ನೋಡಿದಾಗ ನಾನು ಇನ್‌ಸ್ಟಾಗ್ರಾಮ್ ಅಕೌಂಟ್ ಡಿಲಿಟ್ ಮಾಡಲಾ? ಸೋಶಿಯಲ್ ಮೀಡಿಯಾದಿಂದ ಹೊರಗಡೆ ಬರಲಾ ಅಂತ ಕೂಡ ಆಲೋಚನೆ ಮಾಡಿದ್ದೆ. ಆಮೇಲೆ ಆ ರೀತಿ ಕಾಮೆಂಟ್‌ಗಳಿಗೆ ತಲೆ ಕೆಡಿಸಿಕೊಳ್ಳಲಿಲ್ಲ. ಬದಲಾಗಿ ಆ ನೆಗೆಟಿವ್ ಕಾಮೆಂಟ್ ಮಾಡೋರ ಮನಸ್ಥಿತಿ ಸರಿ ಇಲ್ಲದೆ ಇರಬಹುದು, ಅವರ ಮೇಲೆ ಏನೋ ದೌರ್ಜನ್ಯ ಆಗ್ತಿರಬಹುದು. ಅದಕ್ಕಾಗಿ ನನಗೆ ಈ ರೀತಿ ಕಾಮೆಂಟ್ ಮಾಡ್ತಿರಬಹುದು ಎಂದು ಅನಿಸಿತು. ಅವರನ್ನು ನೋಡಿದ್ರೆ ಬೇಸರ ಆಗುತ್ತದೆ” ಎಂದು ನಮ್ರತಾ ಗೌಡ ಹೇಳಿದ್ದಾರೆ.

ನಮ್ರತಾ ಗೌಡ ಅವರು ರಶ್ಮಿಕಾ ಮಂದಣ್ಣ ಕುರಿತಂತೆ ಮಾತನಾಡಿದ್ದು, “ರಶ್ಮಿಕಾ ಮಂದಣ್ಣಗೆ ಸಿಗುವ ನೆಗೆಟಿವ್ ಕಾಮೆಂಟ್ ನೋಡಿದರೆ ಬೇಸರ ಆಗುತ್ತದೆ, ಕಾಮೆಂಟ್ ಮಾಡೋರು ಅಲ್ಲೇ ಇದ್ದಾರೆ, ಆದರೆ ರಶ್ಮಿಕಾ ಮಂದಣ್ಣ ಇಂದು ಎಲ್ಲಿದ್ದಾರೆ? ಹೀಗೆ ಉತ್ತರ ಕೊಡಬೇಕು” ಎಂದು ಹೇಳಿದ್ದಾರೆ.

ಒಬ್ಬ ನಟಿ ಒಂದು ಹಂತದಲ್ಲಿ ಹೆಸರು ಮಾಡಿದ್ದಾಳೆ ಎಂದಾಕ್ಷಣ, ಅದರ ಹಿಂದೆ ಆಕೆ ಬೇರೆಯದ್ದೇ ಹಾದಿ ತುಳಿದಿರುತ್ತಾಳೆ ಎನ್ನುವ ಮಾತು ಬಣ್ಣದ ಲೋಕದಲ್ಲಿ ಹೊಸತೇನಲ್ಲ. ಸ್ವಲ್ಪ ಫೇಮಸ್ ಆಗುತ್ತಿದ್ದಂತೆಯೇ ಆಕೆಯ ಸುತ್ತ ಗಾಸಿಪ್‌ಗಳ ಸುರಿಮಳೆಯಾಗುತ್ತದೆ.

ಯಾರದ್ದೋ ಜೊತೆ ಸಂಬಂಧ ಕಲ್ಪಿಸಲಾಗುತ್ತದೆ. ಯಾರದ್ದಾದರೂ ಜೊತೆ ಸ್ವಲ್ಪ ಕ್ಲೋಸ್ ಆಗಿದ್ದರೆ ಸಾಕು ಅವರ ಜೊತೆ ಹೆಸರು ಥಳಕು ಹಾಕಿಕೊಳ್ಳುತ್ತದೆ. ಇಂಥ ಹೀನ ಮನಸ್ಥಿತಿ ಕೇವಲ ಬಣ್ಣದ ಲೋಕದಲ್ಲಿ ಮಾತ್ರವಲ್ಲದೇ ಸಾಮಾನ್ಯ ಹೆಣ್ಣುಮಕ್ಕಳ ಜೀವನದಲ್ಲಿಯೂ ನಡೆಯುವುದು ಇದೆ. ಆದರೆ ಚಿತ್ರರಂಗದಲ್ಲಿ ಇದು ಒಂದು ಹಂತ ಮೇಲಕ್ಕೆ ಹೋಗಿರುತ್ತದೆಯಷ್ಟೇ. ನಟಿಯೊಬ್ಬಳು ಸ್ವಲ್ಪ ಐಷಾರಾಮಿಯಾಗಿ ಬದುಕಿದರಂತೂ ಮುಗಿದೇ ಹೋಯ್ತು. ಆಕೆ ಈ ಹಂತಕ್ಕೆ ಬರಲು ಅಡ್ಡದಾರಿ ಹಿಡಿದಿದ್ದಾಳೆ, ಅವನ ಜೊತೆ ಸಂಬಂಧ ಬೆಳೆಸಿದ್ದಾಳೆ ಎನ್ನುವ ಮಾತುಗಳಿಗೇನೂ ಕೊರತೆ ಇಲ್ಲ.

ನಾನು ಎಷ್ಟು ಕಷ್ಟಪಟ್ಟಿದ್ದೇನೆ ಎನ್ನುವುದು ನನಗೆ ಗೊತ್ತು. ಯಾರ ಹಂಗಿಲ್ಲದೇ ಹಗಲೂ ರಾತ್ರಿ ದುಡಿದು ಇಷ್ಟು ಖ್ಯಾತಿ, ಹಣ ಗಳಿಸಿದ್ದೇನೆ. ಆದರೆ ಅಡ್ಡದಾರಿ ಹಿಡಿದಿದ್ದಾಳೆ ಎನ್ನುವ ರೀತಿಯಲ್ಲಿ ಬರುವ ಕಮೆಂಟ್ಸ್ ನೋಡಿದರೆ ತುಂಬಾ ನೋವಾಗುತ್ತದೆ. ಒಬ್ಬ ಹೆಣ್ಣು ಪ್ರಸಿದ್ಧಿಗೆ ಬಂದರೆ, ಆಕೆ ಷಾರ್ಟ್‌ಕಟ್‌ನಲ್ಲಿಯೇ ಹೋಗಿದ್ದಾಳೆ ಎನ್ನುವ ಮನಸ್ಥಿತಿ ಎಷ್ಟು ಕೆಟ್ಟಿದ್ದು, ಜನರು ಯಾಕೆ ಇಷ್ಟು ಹೀನ ಮನಸ್ಥಿತಿ ಹೊಂದಿರುತ್ತಾರೆಯೋ ಗೊತ್ತಿಲ್ಲ. ನಾನು ದುಡಿದ ದುಡ್ಡಿನಲ್ಲಿ ನಿಯತ್ತಾಗಿ ಬದುಕುತ್ತಿದ್ದೇನೆ. ಆದರೆ ಫೇಮಸ್ ಆದ ತಕ್ಷಣ ಬುಲ್‌ಷಿಟ್ ಅದೆಂಥ ಕೆಟ್ಟ ಸಂದೇಶ ಕಳುಹಿಸುತ್ತಾರೆ, ಎಷ್ಟೋ ಬಾರಿ ನಾನು ತುಂಬಾ ನೊಂದುಕೊಂಡು ಕಣ್ಣೀರು ಹಾಕಿರುವುದು ಇದೆ ಎಂದಿದ್ದಾರೆ ನಮ್ರತಾ.

ಯಾರೋ ಒಬ್ಬಾತ ನನಗೆ ಕಳುಹಿಸಿದ್ದ ಮೇಸೇಜ್‌ನಿಂದ ನಾನು ಅದೆಷ್ಟೋ ಕೊರಗಿದೆನೋ ಗೊತ್ತಿಲ್ಲ. ನಿನ್ನಂಥ ಮಗಳನ್ನು ಹೆತ್ತ ನಿನ್ನ ಅಪ್ಪ-ಅಮ್ಮ ಸ್ಯೂಸೈಡ್ ಮಾಡ್ಕೋಬೇಕು ಅಂತ ಆತ ಕಳಿಸಿದ್ದ. ಅವನು ಯಾರೋ ಗೊತ್ತಿಲ್ಲ. ಇಡೀ ದಿನ ಕೊರಗಿದೆ ನಾನು. ಯಾವುದೇ ಕೆಟ್ಟ ಹಾದಿಯನ್ನು ತುಳಿಯದೇ ನಾನು ಪಟ್ಟ ಕಷ್ಟವನ್ನು ಅರಿತುಕೊಳ್ಳದೇ ಒಬ್ಬ ಹೆಣ್ಣಿನ ಬಗ್ಗೆ ಇಷ್ಟು ಕೀಳಾಗಿ ಮಾತನಾಡಿದರೆ ಅವರಿಗೆ ಏನು ಸಿಗುತ್ತದೆ? ನಾನು ಇಂಥ ಕೆಟ್ಟ ಪದಗಳನ್ನು ನನ್ನ ಶತ್ರುವಿಗೂ ಬಳಸುವುದಿಲ್ಲ. ಅಷ್ಟು ಕೆಟ್ಟ ಪದಗಳನ್ನು ಬಳಸುತ್ತಾರೆ ಎಂದು ನಮ್ರತಾ ಗೌಡ ನೊಂದು ನುಡಿದಿದ್ದಾರೆ.

ಆದರೆ ಇದೀಗ ಇವುಗಳಿಗೆಲ್ಲಾ ತಲೆ ಕೆಡಿಸಿಕೊಳ್ಳಲು ಹೋಗುವುದಿಲ್ಲ. ಆರಂಭದಲ್ಲಿ ತುಂಬಾ ನೊಂದುಕೊಳ್ಳುತ್ತಿದ್ದೆ. ಆದರೆ ಕೆಟ್ಟ ಕಮೆಂಟ್ಸ್‌ಗೆ ಪಾಪ ಕೆಲವರು ರಿಪ್ಲೈ ಮಾಡಿ, ಇಲ್ಲ ಆಕೆ ತುಂಬಾ ಒಳ್ಳೆಯವರು ಎನ್ನುತ್ತಾರೆ. ಅದನ್ನೆಲ್ಲಾ ನೋಡಿದಾಗ ಅಯ್ಯೋ ಎನ್ನಿಸುತ್ತದೆ. ಆದರೆ ಕೆಟ್ಟ ಕಮೆಂಟ್ಸ್‌ಗೆ ತಲೆ ಕೆಡಿಸಿಕೊಳ್ಳುತ್ತಾ ಕುಳಿತುಕೊಂಡರೆ ಆಗುವುದಿಲ್ಲ ಎನ್ನುವುದು ನನಗೆ ಅರಿವಾಗಿದೆ. ಅದಕ್ಕಾಗಿ ಅದನ್ನೆಲ್ಲಾ ಸದ್ಯ ಬಿಟ್ಟಿದ್ದೇನೆ ಎಂದಿದ್ದಾರೆ ನಮ್ರತಾ.

# ಬಿಳಿ ಹುಡುಗಿ ಪತ್ತೆ ಇಲ್ಲ



ಡಾಲಿ ಧನಂಜಯ ಮದುವೆಯ ಸಂಭ್ರಮದಲ್ಲಿದ್ದಾರೆ. ನಾಳೆ ನಾಡಿದ್ದು ನಡೆಯೋ ಮದುವೆ ಕಾರ್ಯಕ್ರಮಕ್ಕೆ ಭರ್ಜರಿ ತಯಾರಿ ನಡೆಯುತ್ತಿದೆ. ಹಾಗೆ ನೋಡಿದರೆ ಡಾಲಿ ಪಾರ್ಟನರ್‌ನ ಸೆಲೆಕ್ಟ್ ಮಾಡಿದ್ದು, ಅವರ ಮದುವೆಯ ಪ್ಲಾನ್, ಇನ್ವಿಟೇಶನ್ ಎಲ್ಲವೂ ಯುನೀಕ್ ಅನ್ನೋ ಹಾಗೇ ಇತ್ತು.

ಇನ್‌ಲ್ಯಾಂಡ್ ಲೆಟರ್ ಮಾದರಿ ವ್ಯಾಪಕ ವೈರಲ್ ಆಗಿತ್ತು. ಈ ಡಿಸೈನ್ ಅಂಚೆ ಇಲಾಖೆಗೂ ಭರ್ಜರಿ ಲಾಭ ತಂದುಕೊಟ್ಟಿದೆಯಂತೆ. 'ನಿಮ್ಮ ನಡೆಯಿಂದ ಮತ್ತೆ ಇನ್ ಲ್ಯಾಂಡ್ ಲೇಟರ್‌ಗಳಿಗೆ ಬೇಡಿಕೆ ಬಂದಿದೆ. ಜನರು ಮತ್ತೆ ಅಂಚೆ ಕಚೇರಿಯಲ್ಲಿ ಇನ್ ಲ್ಯಾಂಡ್ ಲೇಟರ್ ಕೇಳಿ ಪಡೆಯುತ್ತಿದ್ದಾರೆ. ಮದುವೆಯ ಮೂಲಕ ಮಾದರಿಯಾದ ನಿಮಗೆ ಅಭಿನಂದನೆಗಳು' ಎಂದು ಅಂಚೆ ಇಲಾಖೆ ಅಧಿಕಾರಿಗಳು ಡಾಲಿ ಧನಂಜಯ ಅವರಿಗೆ ಶುಭಕೋರಿದ್ದಾರೆ.

ಅಷ್ಟೇ ಅಲ್ಲ, ಅಂಚೆ ಇಲಾಖೆ ಧನಂಜಯ್-ಧನ್ಯತಾ ಮದುವೆಗೆ ವಿಶೇಷ ಸ್ಟ್ಯಾಂಪ್ ನೀಡಿ ಶುಭಾಶಯ ತಿಳಿಸಿದೆ. ಶುಭ ವಿವಾಹ ಎಂಬ ಮುದ್ರಣದೊಂದಿಗೆ ವಿಶೇಷವಾಗಿರುವ 12 ಸ್ಟ್ಯಾಂಪ್ ಗಳನ್ನ ಉಡುಗೊರೆಯಾಗಿ ನೀಡಿದೆ. ಮೈಸೂರು ಅಂಚೆ ವಿಭಾಗದ ಅಧಿಕಾರಿಗಳು ಧನಂಜಯ್ ಅವರನ್ನು ಭೇಟಿಯಾಗಿ ಗಿಫ್ಟ್ ನೀಡಿದ್ದಾರೆ.

ಈಗಾಗಲೇ ಡಾಲಿ ಹಾಗೂ ಧನ್ಯತಾ ಮನೆಯಲ್ಲಿ ಮದುವೆ ಸಂಭ್ರಮ ಮನೆ ಮಾಡಿದೆ. ಧನಂಜಯ್ ಹಾಗೂ ಧನ್ಯತಾ ಮನೆಯಲ್ಲಿ ಮದುವೆ ಶಾಸ್ತ್ರಗಳು ಶುರುವಾಗಿದೆ. ತಮ್ಮ ಕುಟುಂಬದ ಸಂಪ್ರದಾಯದಂತೆ ಅರಸೀಕೆರೆಯ ಜೇನುಕಲ್ಲು ಸಿದ್ದೇಶ್ವರ ದೇವರ ಕೆಂಡ ತುಳಿದಿದ್ದಾರೆ ವರ ಧನಂಜಯ್. ಆನಂತರ ಮನೆ ದೇವರಿಗೆ ಪೂಜೆ ನೆರವೇರಿಸಿ ಮದುವೆ ಶಾಸ್ತ್ರಗಳಲ್ಲಿ ಧನಂಜಯ್ ಭಾಗಿಯಾದರು. ಡಾಕ್ಟರ್ ಧನ್ಯತಾ ಮನೆಯಲ್ಲಿ ಮೆಹಂದಿ ಶಾಸ್ತ್ರ ಕೂಡ ನಡೆದಿದೆ. ಫೋಟೋಗಳು ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.

ವಿಷ್ಯ ಏನಪ್ಪ ಅಂದರೆ ಇವರಿಬ್ಬರ ಲವ್ವು ರಿವೀಲ್ ಆಗೋಕೂ ಮೊದಲು ಧನಂಜಯ ಜೊತೆ ಹೆಚ್ಚಾಗಿ ಕಾಣಿಸಿಕೊಳ್ತಿದ್ದವರು ಅಮೃತಾ ಅಯ್ಯಂಗಾರ್.




ಆನ್‌ಸ್ಕ್ರೀನ್‌ನಲ್ಲೂ ಇವರಿಬ್ಬರ ಜೋಡಿ ಸಖತ್ ಫೇಮಸ್ ಆಗಿತ್ತು. ಆಫ್‌ಸ್ಕ್ರೀನ್‌ನಲ್ಲೂ ಇವರಿಬ್ಬರು ಸದಾ ಜೊತೆಯಾಗಿ ಕಾಣಿಸಿಕೊಳ್ತಿದ್ದರು. ಸ್ನೇಹಿತರ ಮದುವೆ ಕಾರ್ಯಕ್ರಮಗಳಲ್ಲೆಲ್ಲ ಜೊತೆಯಾಗಿ ಓಡಾಡ್ತಿದ್ದರು. ಆದರೆ ಧನಂಜಯ ಮದುವೆ ಸಂಗತಿ ಹೊರಬೀಳ್ತಿದ್ದ ಹಾಗೆ ಅಪ್ಪಿತಪ್ಪಿಯೂ ಅಮೃತಾ ಡಾಲಿ ಜೊತೆ ಕಾಣಿಸಿಕೊಂಡಿಲ್ಲ. ಅವರಿಬ್ಬರ ಫ್ರೆಂಡ್‌ಸರ್ಕಲ್‌ನವರ ಯಾವ ಕಾರ್ಯಕ್ರಮದಲ್ಲೂ ಈಕೆ ಕಾಣಿಸಿಕೊಂಡಿಲ್ಲ. ಇಲ್ಲಿ ಡಾಲಿ ಮದುವೆ ಆಗ್ತಿದ್ರೆ ಅಮೃತಾ ಇನ್‌ಸ್ಟಾ ಸ್ಟೇಟಸ್‌ನಲ್ಲಿ ವ್ಯಾಲೆಂಟೇನ್ ಡೇಯನ್ನು ಒಬ್ಬಳೇ ಆಚರಿಸುತ್ತಿರುವ ಫೋಟೋ ಪೋಸ್ಟ್ ಮಾಡಿದ್ದಾರೆ. ಡಾರ್ಲಿಂಗ್ ಕೃಷ್ಣ ಅವರ ಆನಿವರ್ಸರಿಗೂ ವಿಶ್ ಮಾಡಿದ್ದಾರೆ. ಆದರೆ ಧನಂಜಯ ಮದುವೆ ಬಗ್ಗೆ ಕಮಕ್ ಕಿಮಕ್ ಅಂದಿಲ್ಲ. ಅರಿಶಿನ ಶಾಸ್ತ್ರದಲ್ಲಿ ಸಪ್ತಮಿ ಗೌಡ ಸೇರಿದಂತೆ ಫ್ರೆಂಡ್‌ಸರ್ಕಲ್‌ನ ಹಲವರು ಭಾಗಿಯಾಗಿದ್ದಾರೆ. ಆದರೆ ಅಲ್ಲೆಲ್ಲೂ ಅಮೃತಾ ಅಯ್ಯಂಗಾರ್ ಅನ್ನೋ ಬಿಳಿ ಹುಡುಗಿ ಪತ್ತೆ ಇರಲಿಲ್ಲ.

ಹಾಗೆ ನೋಡಿದರೆ 'ಹೊಯ್ಸಳ' ಸಿನಿಮಾದ ಉಡುಪಿ ಹೋಟೆಲು ಹಾಡಿನ ಕೆಲವು ಸಾಲನ್ನು ಅವರು ಅಮೃತಾರನ್ನು ಮನಸ್ಸಲ್ಲಿಟ್ಟುಕೊಂಡೇ ಬರೆದಿದ್ದರು. ಟಿವಿ ಶೋದಲ್ಲಿ ಆಕೆಗೆ ಕವಿತೆಯನ್ನು ಹೇಳಿ ಪ್ರೊಪೋಸ್ ಮಾಡುವ ರೀತಿ ಕಾಣಿಸಿಕೊಂಡಿದ್ರು. ಅವರ ಆ ನಡೆ ನೋಡಿ ಖಂಡಿತಾ ಇವರಿಬ್ಬರೂ ಪ್ರೀತಿಸುತ್ತಿದ್ದಾರೆ ಎಂದು ಜನ ಮಾತಾಡಿಕೊಂಡರು.

ಸೋ, ಸದ್ಯ ನಮ್ಮ ಮುಂದಿರೋ ಪ್ರಶ್ನೆ ಅಂದರೆ ಡಾಲಿ ಮತ್ತು ಅಮೃತಾರ ನಡುವಿನ ಸಂಬಂಧ ಈಗ ಹೇಗಿದೆ? ಅವರು ಈಗ ಫ್ರೆಂಡ್ಸ್ ಆಗಿ ಉಳಿದಿಲ್ವಾ ಅನ್ನೋದು. ಅಮೃತಾ ಪೋಸ್ಟ್ ನೋಡಿದ್ರೆ ಇದಕ್ಕೆ ಬೇರೆಯದೇ ಉತ್ತರ ಹೊಳೆಯುತ್ತದೆ.

# ‘ತಾಂಡೇಲ್ ಗೆಲ್ಲುತ್ತೆ ಎಂದು ಮೊದಲೇ ಗೊತ್ತಿತ್ತು’



‘ತಾಂಡೇಲ್’ ಸಿನಿಮಾ ತಂಡದವರು ಈಗ ಯಶಸ್ಸನ್ನು ಆನಂದಿಸುತ್ತಾ ಇದ್ದಾರೆ. ಈ ಚಿತ್ರದಲ್ಲಿ ಮುಖ್ಯಭೂಮಿಕೆಯಲ್ಲಿ ಕಾಣಿಸಿಕೊಂಡಿರೋ ನಾಗ ಚೈತನ್ಯ, ಸಾಯಿ ಪಲ್ಲವಿ ಸೇರಿದಂತೆ ಎಲ್ಲರೂ ಸಿನಿಮಾ ಗೆಲುವಿನಿಂದ ಸಾಕಷ್ಟು ಖುಷಿ ಆಗಿದ್ದಾರೆ.

‘ತಾಂಡೇಲ್’ ಸಿನಿಮಾ ಇಷ್ಟು ದೊಡ್ಡ ಗೆಲುವು ಕಾಣುತ್ತದೆ ಅನ್ನೋದು ಮೊದಲೇ ಗೊತ್ತಿತ್ತಾ? ಹೌದು ಎನ್ನುತ್ತಾರೆ ಸಾಯಿ ಪಲ್ಲವಿ. ಈ ಬಗ್ಗೆ ಮೊದಲೇ ಸೂಚನೆ ಸಿಕ್ಕಿತ್ತು ಎಂಬರ್ಥದಲ್ಲಿ ಅವರು ಮಾತನಾಡಿದ್ದಾರೆ. ಅದರಲ್ಲೂ ಒಬ್ಬರಿಗೆ ಈ ಬಗ್ಗೆ ಈ ವಿಚಾರದಲ್ಲಿ ಖಾತ್ರಿ ಇತ್ತು.

‘ತಾಂಡೇಲ್’ ಇದು ನೈಜ ಘಟನೆ ಆಧಾರಿತ ಸಿನಿಮಾ. ಈ ಚಿತ್ರದ ಸಕ್ಸಸ್‌ಮೀಟ್‌ನ ಇತ್ತೀಚೆಗೆ ಆಚರಿಸಲಾಯಿತು. ಈ ವೇಳೆ ನಿಜ ಜೀವನದ ತಾಂಡೇಲ್ ರಾಮ್ ರಾವ್ ಕೂಡ ಅಲ್ಲಿ ಇದ್ದರು. ಸಾಯಿ ಪಲ್ಲವಿ ಅವರು ಅವರಿಗೆ ಧನ್ಯವಾದ ಹೇಳಿದರು. ಸಾಯಿ ಪಲ್ಲವಿ ಅವರು ಸಿನಿಮಾ ಯಶಸ್ಸಿನ ಬಗ್ಗೆ ಮಾತನಾಡಿದ್ದಾರೆ.

‘ಪೋಸ್ಟ್ ಪ್ರೊಡಕ್ಷನ್ ಕೆಲಸ ನಡೆಯುವಾಗ ನಾಗ ಚೈತನ್ಯ ಅವರಲ್ಲಿ ಒಂದು ಫೈಯರ್ ಇತ್ತು. ಸಿನಿಮಾ ಗೆದ್ದೇ ಗೆಲ್ಲುತ್ತದೆ ಎನ್ನುವ ಭರವಸೆಯಲ್ಲಿ ಅವರು ಇದ್ದರು. ಅವರ ಲುಕ್ ಅಥವಾ ಪರಿಶ್ರಮದಿಂದ ಅವರು ಈ ಮಾತನ್ನು ಹೇಳಿರಲಿಲ್ಲ. ‘ತಾಂಡೇಲ್’ ಸಿನಿಮಾ ಆಡಿಯನ್ಸ್‌ಗೆ ಭಾವನಾತ್ಮಕವಾಗಿ ಕನೆಕ್ಟ್ ಆಗಲಿದೆ ಎಂದು ಅವರಿಗೆ ಅನಿಸಿತ್ತು’ ಎಂದಿದ್ದಾರೆ ಅವರು.

ಸಾಯಿ ಪಲ್ಲವಿ ಅವರು ಸಕ್ಸಸ್‌ಮೀಟ್ ವೇದಿಕೆ ಮೇಲೆ ಭರ್ಜರಿಯಾಗಿ ಡ್ಯಾನ್ಸ್ ಮಾಡಿದರು. ಅವರ ಜೊತೆ ನಾಗ ಚೈತನ್ಯ ಹಾಗೂ ಅಲ್ಲು ಅರವಿಂದ್ ಕೂಡ ಡ್ಯಾನ್ಸ್ ಮಾಡಿದರು. ಈ ಚಿತ್ರಕ್ಕೆ ಅಲ್ಲು ಅರ್ಜುನ್ ತಂದೆ ಅಲ್ಲು ಅರವಿಂದ್ ಅವರೇ ನಿರ್ಮಾಣ ಮಾಡಿದ್ದಾರೆ. ಈ ಮೂಲಕ ಅವರು ದೊಡ್ಡ ಮಟ್ಟದಲ್ಲಿ ಯಶಸ್ಸು ಕಂಡಿದ್ದಾರೆ. ತಾಂಡೇಲ್ ಚಿತ್ರದಲ್ಲಿ ನಾಗ ಚೈತನ್ಯ ಮೀನುಗಾರನ ಪಾತ್ರ ಮಾಡಿದ್ದಾರೆ.

ನಾಗ ಚೈತನ್ಯ ಅವರಿಗೆ ಇತ್ತೀಚೆಗೆ ದೊಡ್ಡ ಮಟ್ಟದಲ್ಲಿ ಯಶಸ್ಸು ಸಿಕ್ಕಿರಲಿಲ್ಲ. ಅವರು ಈ ಯಶಸ್ಸಿಗಾಗಿ ಬಹಳ ದಿನಗಳಿಂದ ಕಾಯುತ್ತಾ ಇದ್ದರು. ಕೊನೆಗೂ ಅವರಿಗೆ ಗೆಲುವು ಸಿಕ್ಕಿದೆ. ‘ತಾಂಡೇಲ್’ ಚಿತ್ರದಿಂದ ಅವರು ಗೆದ್ದು ಬಿಗಿದ್ದಾರೆ. ಈ ಸಿನಿಮಾ ಅವರ ವೃತ್ತಿ ಜೀವನಕ್ಕೆ ದೊಡ್ಡ ಮಟ್ಟದಲ್ಲಿ ತಿರುವು ಕೊಟ್ಟಿದೆ.



ಪ್ರಕಾಶಕ- ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು-560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು-562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: 9448074878